24 ವರ್ಷಗಳಿಂದ ದೆಹಲಿಯಲ್ಲಿ ಪ್ರಕಟವಾಗುತ್ತಿರುವ ಪ್ರಪ್ರಥಮ ರಾಷ್ಟ್ರೀಯ ಕನ್ನಡ ದಿನಪತ್ರಿಕೆ

# ದೆಹಲಿ ವಾರ್ತೆ

www.dehalivaarthe.com

EDITION: NEW DELHI / CIRCULATION IN U.P. & HARYANA | EDITOR : K.R. RENU | RNI No. DELKAN/2003/10363 | ಪುಟ 8 | ಸಂಪುಟ 24 | ಸಂಚಿಕೆ 53 | ನವದೆಹಲಿ | ಬೆಲೆ ₹10 | ಆಗಸ್ಟ್ 20, 2026 ಗುರುವಾರ



## ನಿತ್ಯ ಪಂಚಾಂಗ 20.08.2026 ಗುರುವಾರ



ಶ್ರೀಶಕ 1949 ಶ್ರೀ ಪರಾಭವ ನಾಮ ಸಂವತ್ಸರ, ದಕ್ಷಿಣಾಯಣ ಗ್ರೀಷ್ಮ ಋತು, ಚಾಂದ್ರಮಾನ, ಆಷಾಢ-ಶ್ರಾವಣ ಮಾಸ

ಶ್ರಾವಣ ಶುದ್ಧ, ಅಂಮಿ, ವಿಶಾಖ ನಕ್ಷತ್ರ, ಕಳಲೆ ಲಕ್ಷ್ಮೀಕಾಂತ ತೀರ್ಥ ಆರಾಧನೆ, ರಂಬಾಪುರಿ ಜಗದ್ಗುರು ರುದ್ರಮುನಿ ಸ್ವಾಮಿ ಪುಣ್ಯದಿನ

| ದಿನ | ರಾಹುಕಾಲ | ಯಮಗಂಡ | ಗುಳಿಕಕಾಲ |
|---|---|---|---|
| ಭಾನು | ಸ. 5.04– 6.33 | 12.00– 1.30 | 3.00– 4.00 |
| ಸೋಮ | ಬೆ. 7.20– 9.04 | 10.30–12.00 | 1.30– 3.00 |
| ಮಂಗಳ | ಮ. 3.25– 4.59 | 9.00–10.30 | 12.00– 1.30 |
| ಬುಧ | ಮ.12.16– 1.50 | 7.30– 9.00 | 10.30– 12.00 |
| ಗುರು | ಮ. 1.50– 3.29 | 6.00– 7.30 | 9.00– 10.30 |
| ಶುಕ್ರ | ಬೆ.10.42–12.16 | 3.00– 4.30 | 7.30– 9.00 |
| ಶನಿ | ಬೆ. 9.07–10.41 | 1.30– 3.00 | 6.00– 7.30 |

# ಮಾಜಿ ಶಿಕ್ಷಣ ಸಚಿವ ಬಿ.ಸಿ.ನಾಗೇಶ್ ನಿಧನ



ಬೆಂಗಳೂರಿನಲ್ಲಿ ಮಂಗಳವಾರ ನಿಧನರಾದ ಮಾಜಿ ಸಚಿವ ಬಿ.ಸಿ.ನಾಗೇಶ್ ಅವರಿಗೆ ಮುಖ್ಯಮಂತ್ರಿ ಡಿ.ಕೆ.ಶಿವಕುಮಾರ್ ಅಂತಿಮ ನಮನ ಸಲ್ಲಿಸಿದರು.

ಬೆಂಗಳೂರು, ಆ.19: ಮಾಜಿ ಶಿಕ್ಷಣ ಸಚಿವ ಹಾಗೂ ತಿಪಟೂರು ಮಾಜಿ ಶಾಸಕ ಬಿ.ಸಿ. ನಾಗೇಶ್ (67) ನಿಧನರಾಗಿದ್ದಾರೆ. ಕೆಲ ದಿನಗಳಿಂದ ಅನಾರೋಗ್ಯದಿಂದ ಬಳಲುತ್ತಿದ್ದ ಅವರು ಬೆಂಗಳೂರಿನಲ್ಲಿರುವ ಪುತ್ರಿಯ ನಿವಾಸದಲ್ಲಿ ಮಂಗಳವಾರ ಕೊನೆಯುಸಿರೆಳೆದಿದ್ದಾರೆ. ತಿಪಟೂರು ಕ್ಷೇತ್ರದಿಂದ 2008 ಮತ್ತು 2018ರಲ್ಲಿ ಎರಡು ಬಾರಿ ಶಾಸಕರಾಗಿ ಆಯ್ಕೆಯಾಗಿದ್ದ ನಾಗೇಶ್, ಬೊಮ್ಮಾಯಿ ಸಂಪುಟದಲ್ಲಿ ಪ್ರಾಥಮಿಕ ಹಾಗೂ ಪ್ರೌಢಶಿಕ್ಷಣ ಸಚಿವರಾಗಿ ಸೇವೆ ಸಲ್ಲಿಸಿದ್ದರು ತಮ್ಮ ಆಡಳಿತಾವಧಿಯಲ್ಲಿ ಹಲವು ಪ್ರಮುಖ ಹಾಗೂ ದಿಟ್ಟ ನಿರ್ಧಾರಗಳನ್ನು ಕೈಗೊಂಡಿದ್ದರು. ಮಾಜಿ ಶಿಕ್ಷಣ ಸಚಿವ ಹಾಗೂ ತಿಪಟೂರು ಮಾಜಿ ಶಾಸಕ ಬಿ.ಸಿ. ನಾಗೇಶ್ ನಿಧನಕ್ಕೆ ಮುಖ್ಯಮಂತ್ರಿ ಡಿ.ಕೆ. ಶಿವಕುಮಾರ್, ಸಿದ್ದರಾಮಯ್ಯ ಹಾಗೂ ವಿಜಯೇಂದ್ರ ಸೇರಿದಂತೆ ಹಲವು ಗಣ್ಯರು ಸಂತಾಪ ಸೂಚಿಸಿದ್ದಾರೆ. ಸಿಎಂ ಡಿ.ಕೆ. ಶಿವಕುಮಾರ್ ಹಾಗೂ ಮಾಜಿ ಮುಖ್ಯಮಂತ್ರಿ ಸಿದ್ದರಾಮಯ್ಯ ಹಾಗೂ ಗಣ್ಯರು ಸಂತಾಪ ಸೂಚಿಸಿದ್ದಾರೆ. ಸಂಸದ ಬಸವರಾಜ ಬೊಮ್ಮಾಯಿ, ಸಂಸದ ವಿಶ್ವೇಶ್ವರ ಹೆಗಡೆ ಕಾಗೇರಿ, ಶಾಸಕ ಅರವಿಂದ್ ಬೆಲ್ಲದ್, ಹರೀಶ್ ಪೂಂಜಾ ಸೇರಿದಂತೆ ಹಲವು ನಾಯಕರು ಕೂಡ ಸಂತಾಪ ವ್ಯಕ್ತಪಡಿಸಿದ್ದಾರೆ.



ಬೆಂಗಳೂರಿನ ಬಿಜೆಪಿ ಕಚೇರಿಯಲ್ಲಿ ಬುಧವಾರ ಮಾಜಿ ಸಚಿವ ಬಿ.ಸಿ. ನಾಗೇಶ್ ಅವರಿಗೆ ರಾಜ್ಯ ಬಿಜೆಪಿ ಅಧ್ಯಕ್ಷ ಬಿ.ವೈ. ವಿಜಯೇಂದ್ರ, ವಿಧಾನ ಪರಿಷತ್ ಸದಸ್ಯ ಸಿ.ಟಿ. ರವಿ ಮತ್ತು ಇತರರು ಅಂತಿಮ ನಮನ ಸಲ್ಲಿಸಿದರು.



ಹಿಮಾಚಲ ಪ್ರದೇಶ ರಾಜ್ಯಪಾಲ ಕವೀಂದರ್‌ಗುಪ್ತಾ ಅವರನ್ನು ಕರ್ನಾಟಕದ ಮುಖ್ಯಮಂತ್ರಿ ಡಿ.ಕೆ.ಶಿವಕುಮಾರ್ ದೆಹಲಿಯಲ್ಲಿ ಬುಧವಾರ ಭೇಟಿ ಮಾಡಿದ್ದರು.

## ಬಿ.ಸಿ.ನಾಗೇಶ್‌ಗೆ ವಿಧಾನಮಂಡಲದಲ್ಲಿ ಗಣ್ಯರಿಂದ ಶ್ರದ್ಧಾಂಜಲಿ ಸಲ್ಲಿಕೆ

**ಪ್ರಾಮಾಣಿಕ ವ್ಯಕ್ತಿ: ಸಿಎಂ ಡಿ.ಕೆ. ಶಿವಕುಮಾರ್**

ಮಾಜಿ ಸಚಿವ ಬಿ.ಸಿ.ನಾಗೇಶ್ ಅವರ ಪಾರ್ಥಿವ ಶರೀರದ ಅಂತಿಮ ದರ್ಶನ ಪಡೆದ ನಂತರ ಬಳಿಕ ಮಾಧ್ಯಮಗಳಿಗೆ ಪ್ರತಿಕ್ರಿಯೆ ನೀಡಿದ ಸಿಎಂ ಡಿ.ಕೆ. ಶಿವಕುಮಾರ್, ಬಿ.ಸಿ. ನಾಗೇಶ್ ಅವರು ಮಂತ್ರಿಗಳಾಗಿ ಶಿಕ್ಷಣ ಕ್ಷೇತ್ರದಲ್ಲಿ ಕೆಲಸ ಉತ್ತಮ ಮಾಡಿದ್ದರು. ಅವರೊಬ್ಬ ಪ್ರಾಮಾಣಿಕ ವ್ಯಕ್ತಿಯಾಗಿದ್ದರು. ಶಿಕ್ಷಣ ಕ್ಷೇತ್ರದಲ್ಲಿ ಶಿಸ್ತು ತರಲು ಪ್ರಯತ್ನಿಸಿದರು. ನಾಗೇಶ್ ಕುಟುಂಬದವರು ಧೈರ್ಯ ಕಳೆದುಕೊಳ್ಳಬಾರದು. ನಾಗೇಶ್ ಅವರು ಮಾಡಿದ ಒಳ್ಳೆಯ ಕೆಲಸಗಳು ಇವತ್ತಿಗೂ ಇವೆ. ಅವರ ಕ್ಷೇತ್ರದಲ್ಲಿ ಹೆಚ್ಚಿನ ಜನಸಂಖ್ಯೆ ಇಲ್ಲದಿದ್ದರೂ ಅಲ್ಲಿ ಅಪಾರವಾದ ವಿಶ್ವಾಸ ಗಳಿಸಿ ಜನಪ್ರತಿನಿಧಿಯಾಗಿ ಸೇವೆ ಸಲ್ಲಿಸಿದ್ದಾರೆ. ಅವರ ಆತ್ಮಕ್ಕೆ ಶಾಂತಿ ಸಿಗಲಿ ಎಂದರು.

**ಸರ್ಕಾರಿ ಗೌರವಗಳೊಂದಿಗೆ ಅಂತ್ಯಕ್ರಿಯೆ**

ನಾಗೇಶ್ ಅವರ ಅಂತ್ಯಕ್ರಿಯೆಯನ್ನು ತಿಪಟೂರಿನಲ್ಲಿ ಸಕಲ ಸರ್ಕಾರಿ ಗೌರವಗಳೊಂದಿಗೆ ನೆರವೇರಿಸಲಾಗಿದೆ.

**ಉಪಮುಖ್ಯಮಂತ್ರಿ ಡಾ.ಜಿ.ಪರಮೇಶ್ವರ್** ಮಾತನಾಡಿ, ಬಿ.ಸಿ.ನಾಗೇಶ್ ಅವರು ನನಗೆ 1989ರಿಂದ ಪರಿಚಯ. 1994ರಲ್ಲಿ ನಾನು ಚುನಾವಣೆಯಲ್ಲಿ ಸೋತಾಗ ನನ್ನನ್ನು ಭೇಟಿಯಾಗಿದ್ದ ಅವರು, ನಿಮನ್ನು ಕಾಂಗ್ರೆಸ್‌ನಲ್ಲಿ ಸರಿಯಾಗಿ ನಡೆಸಿಕೊಳ್ಳುವುದಿಲ್ಲ. ಹೀಗಾಗಿ ಬಿಜೆಪಿಗೆ ಬರಬೇಕು ಎಂದು ಮನವಿ ಮಾಡಿಕೊಂಡರು. ತುಮಕೂರಿಗೆ ಅಂದಿನ ಬಿಜೆಪಿ ರಾಷ್ಟ್ರೀಯ ಅಧ್ಯಕ್ಷ ಲಾಲ್‌ಕೃಷ್ಣ ಅಡ್ವಾಣಿ ಬರುವ ಕಾರ್ಯಕ್ರಮವಿತ್ತು. ನೀವು ಪಕ್ಷಕ್ಕೆ ಸೇರ್ಪಡೆಯಾಗುವುದಾದರೆ ತುಮಕೂರಿನಲ್ಲೇ ಬೃಹತ್ ಕಾರ್ಯಕ್ರಮದಲ್ಲಿ ಸೇರ್ಪಡೆಯಾಗಿ. ಬರಲಿರುವ ಲೋಕಸಭೆ ಚುನಾವಣೆಯಲ್ಲಿ ನಿಮನ್ನು ಅಭ್ಯರ್ಥಿ ಮಾಡುವುದಾಗಿ ಹೇಳಿದ್ದರು ಎಂದು ಸ್ಮರಿಸಿದರು. ಡಾ.ಯತೀಂದ್ರ ಮಾತನಾಡಿ, ಬಿ.ಸಿ.ನಾಗೇಶ್ ಅವರು ಎಬಿವಿಪಿ ಹಾಗೂ ಆರ್‌ಎಸ್‌ಎಸ್ ಹಿನ್ನೆಲೆಯಿಂದ ಬಂದವರು. ಎಲ್ಲರನ್ನೂ ವಿಶ್ವಾಸಕ್ಕೆ ತೆಗೆದುಕೊಂಡು ಮುನ್ನಡೆಯುತ್ತಿದ್ದರು ಎಂದರು.

ಅನಾರೋಗ್ಯದ ಹಿನ್ನೆಲೆಯಲ್ಲಿ ನಿಧನರಾದ ಮಾಜಿ ಸಚಿವ ಬಿ.ಸಿ.ನಾಗೇಶ್ ಅವರಿಗೆ ವಿಧಾನಪರಿಷತ್‌ನಲ್ಲಿ ಭಾವಪೂರ್ಣ ಶ್ರದ್ಧಾಂಜಲಿ ಸಲ್ಲಿಸಲಾಯಿತು. ಕಲಾಪ ಆರಂಭವಾಗುತ್ತಿದ್ದಂತೆ ಸಭಾಪತಿ ಸಲೀಂ ಅಹಮದ್ ಅವರು ವಿಷಯ ಪ್ರಸ್ತಾಪಿಸಿ ಮೃತರ ಗೌರವಾರ್ಥ ಗೌರವ ಸೂಚಿಸುವ ಸಂತಾಪ ನಿರ್ಣಯವನ್ನು ಮಂಡಿಸಿದರು. ಸಂತಾಪ ನಿರ್ಣಯದ ಪರವಾಗಿ ಸಭಾನಾಯಕ ಹಾಗೂ ಸಚಿವ ಡಾ.ಯತೀಂದ್ರ ಸಿದ್ದರಾಮಯ್ಯ, ಪ್ರತಿಪಕ್ಷದ ನಾಯಕ ಛಲವಾದಿ ನಾರಾಯಣಸ್ವಾಮಿ, ಉಪಮುಖ್ಯಮಂತ್ರಿ ಡಾ.ಜಿ.ಪರಮೇಶ್ವರ್, ಸದಸ್ಯರಾದ ಎನ್.ರವಿಕುಮಾರ್, ಕೇಶವಮೂರ್ತಿ ಮಾತನಾಡಿದರು.

ಛಲವಾದಿ ನಾರಾಯಣಸ್ವಾಮಿ ಮಾತನಾಡಿ, ಆರ್‌ಎಸ್‌ಎಸ್ ಮತ್ತು ಎಬಿವಿಪಿಯಲ್ಲಿ ಗುರುತಿಸಿಕೊಂಡ ಅವರು ತಮನ್ನು ರಾಷ್ಟ್ರ ಸೇವೆಗೆ ಸಮರ್ಪಣೆ ಮಾಡಿಕೊಂಡಿದ್ದರು. ಅವರ ನಿಧನ ತುಂಬಲಾರದ ನಷ್ಟ ಎಂದು ಕಂಬನಿ ಮಿಡಿದರು. ಮೃತರ ಗೌರವಾರ್ಥವಾಗಿ ಸದನದಲ್ಲಿ ಸದಸ್ಯರೆಲ್ಲರು ಎದ್ದು ನಿಂತು ಒಂದು ನಿಮಿಷ ಮೌನಾಚರಣೆ ಮಾಡಿ ಗೌರವ ಸಲ್ಲಿಸಿದರು.

**ವಿಧಾನಸಭೆಯಲ್ಲಿ ಭಾವಪೂರ್ಣ ಶ್ರದ್ಧಾಂಜಲಿ**

ಮಾಜಿ ಶಿಕ್ಷಣ ಸಚಿವ ಹಾಗೂ ಬಿಜೆಪಿ ಹಿರಿಯ ನಾಯಕ ಬಿ.ಸಿ. ನಾಗೇಶ್ ಅವರ ನಿಧನಕ್ಕೆ ವಿಧಾನಸಭೆಯಲ್ಲಿ ಭಾವಪೂರ್ಣ ಶ್ರದ್ಧಾಂಜಲಿ ಸಲ್ಲಿಸಲಾಯಿತು. ಕಲಾಪ ಆರಂಭವಾಗುತ್ತಿದ್ದಂತೆ ಸಭಾಧ್ಯಕ್ಷ ಜಿ.ಎಸ್. ಪಾಟೀಲ್ ಅವರು ಬಿ.ಸಿ. ನಾಗೇಶ್ ಅವರ ನಿಧನದ ವಿಚಾರವನ್ನು ವಿಷಾದದಿಂದ ಸದನಕ್ಕೆ ತಿಳಿಸಿದರು. 1959ರ ಜುಲೈ 1ರಂದು ಚಿಕ್ಕಮಗಳೂರಿನಲ್ಲಿ ಜನಿಸಿದ್ದ ಬಿ.ಸಿ. ನಾಗೇಶ್ ಅವರು ಬಿಇ ಪದವೀಧರರಾಗಿದ್ದರು. ವೃತ್ತಿಯಲ್ಲಿ ವ್ಯಾಪಾರಿಯಾಗಿದ್ದ ಅವರು, ವಿದ್ಯಾರ್ಥಿ ದೆಸೆಯಿಂದಲೇ ಎಬಿವಿಪಿಯಲ್ಲಿ ತೊಡಗಿಸಿಕೊಂಡಿದ್ದರು. ಕರಾವಳಿಯಿಂದ ಕಲ್ಯಾಣ ಕರ್ನಾಟಕದವರೆಗೆ ರಾಜ್ಯಾದ್ಯಂತ ಶಾಲಾ ಮಕ್ಕಳಲ್ಲಿ ನೈತಿಕ ವೌಲ್ಯಗಳನ್ನು ಬೆಳೆಸುವುದು ಹಾಗೂ ಕಲಿಕೆಯ ಗುಣಮಟ್ಟ ಸುಧಾರಿಸುವ ನಿಟ್ಟಿನಲ್ಲಿ ಹಲವು ಯೋಜನೆಗಳನ್ನು ಜಾರಿಗೆ ತಂದಿದ್ದರು ಎಂದು ಸಭಾಧ್ಯಕ್ಷರು ವಿವರಿಸಿದರು.

**ಉತ್ತಮ ಸ್ನೇಹಿತ**

ವಿರೋಧ ಪಕ್ಷದ ನಾಯಕ ಆರ್. ಅಶೋಕ್ ಅವರು ಬಿ.ಸಿ. ನಾಗೇಶ್ ಅವರನ್ನು ಸ್ಮರಿಸಿ, ಅವರು ಕೇವಲ ಶಾಸಕರಲ್ಲ, ನನ್ನ ಉತ್ತಮ ಸ್ನೇಹಿತರಾಗಿದ್ದರು. ಸಚಿವರಾಗಿದ್ದ ಸಂದರ್ಭದಲ್ಲಿ ವಿವೇಕ ಯೋಜನೆಯ ಮೂಲಕ ಶಿಕ್ಷಣ ಕ್ಷೇತ್ರದ ಅಭಿವೃದ್ಧಿಗೆ ಒತ್ತು ನೀಡಿದ್ದರು. ಭಾರತೀಯ ಸಂಸ್ಕೃತಿಯ ಬಗ್ಗೆ ವಿದ್ಯಾರ್ಥಿಗಳಿಗೆ ಅರಿವು ಮೂಡಿಸುವುದು, ಶಾಲೆಗಳಿಗೆ ದಿಢೀರ್ ಭೇಟಿ ನೀಡಿ ಪರಿಶೀಲನೆ ನಡೆಸುವುದು ಸೇರಿದಂತೆ ಹಲವು ಕ್ರಮಗಳನ್ನು ಕೈಗೊಂಡಿದ್ದರು ಎಂದು ಸ್ಮರಿಸಿದರು.

**ಸಮಾಜಕ್ಕಾಗಿ ಮಾಡುವ ಕೆಲಸ ಶಾಶ್ವತ**

ಸಚಿವ ಯು.ಟಿ. ಖಾದರ್ ಮಾತನಾಡಿ, ಪ್ರತಿಯೊಂದು ಸಾವಿನಲ್ಲೂ ಒಂದು ಸಂದೇಶ ಇರುತ್ತದೆ. ಅಧಿಕಾರ, ಆಸ್ತಿ, ಅಂತಸ್ತು ಯಾವುದೂ ಶಾಶ್ವತವಲ್ಲ. ನಾವು ಸಮಾಜಕ್ಕಾಗಿ ಮಾಡಿದ ಕೆಲಸಗಳು ಮಾತ್ರ ಶಾಶ್ವತವಾಗಿ ಉಳಿಯುತ್ತವೆ ಎಂದು ಹೇಳಿದರು.



ಸಂಸದ ಬಸವರಾಜ ಬೊಮ್ಮಾಯಿ, ಶಾಸಕ ಮಹೇಶ್ ಟೆಂಗಿನಕಾಯಿ, ಎಬಿವಿಪಿ ನಾಯಕ ವಿಷ್ಣುಕಾಂತ ಚಟಪಲ್ಲಿ ಅವರು ಬಿ.ಸಿ. ನಾಗೇಶ್‌ಗೆ ಅಂತಿಮ ನಮನ ಸಲ್ಲಿಸಿದರು.

**ವಿವಿಧ ಗಣ್ಯರ ಕಂಬನಿ**

ಬಿಜೆಪಿ ಶಾಸಕ ಚನ್ನಬಸಪ್ಪ, ತಿಪಟೂರು ಶಾಸಕ ಕೆ.ಷಡಕ್ಷರಿ, ಜೆಡಿಎಸ್ ಸದಸ್ಯ ಸಿ.ಎನ್. ಬಾಲಕೃಷ್ಣ, ಸಚಿವರಾದ ಚಲುವರಾಯ ಸ್ವಾಮಿ, ಶರಣ ಪ್ರಕಾಶ್ ಪಾಟೀಲ್, ಮಧು ಬಂಗಾರಪ್ಪ, ಸುರೇಶ್ ಗೌಡ, ಜೆಡಿಎಸ್‌ನ ಎಂ.ಟಿ.ಕೃಷ್ಣಪ್ಪ ಭಾವಪೂರ್ಣ ಶ್ರದ್ಧಾಂಜಲಿ ಸಲ್ಲಿಸಿದರು.

## ಗುತ್ತಿಗೆ ಷರತ್ತು ಉಲ್ಲಂಘಿಸಿದ ಸಂಸ್ಥೆಗಳ ಮಾಹಿತಿ ನೀಡುವಂತೆ ಜಿಲ್ಲಾಧಿಕಾರಿಗಳಿಗೆ ಉಪಮುಖ್ಯಮಂತ್ರಿ ಪರಂ ಆದೇಶ



ಬೆಂಗಳೂರು, ಆ.19: ರಾಜ್ಯದಲ್ಲಿ ಅರಣ್ಯ ಮತ್ತು ಕೃಷಿ ಭೂಮಿ ಹೊರತುಪಡಿಸಿ ಒಟ್ಟು 3251707–06 ಎಕರೆ ಸರ್ಕಾರಿ ಭೂಮಿ ವಿಸ್ತೀರ್ಣವಿದೆ ಎಂದು ಉಪಮುಖ್ಯಮಂತ್ರಿ ಡಾ.ಜಿ.ಪರಮೇಶ್ವರ್ ವಿಧಾನ ಪರಿಷತ್ತಿಗೆ ತಿಳಿಸಿದ್ದಾರೆ.

ಸದಸ್ಯ ಶಿವಕುಮಾರ್ ಕೆ. ಪ್ರಶ್ನೆಗೆ ಉತ್ತರಿಸಿದ ಅವರು, ಜಮೀನು ಮಂಜೂರಾತಿ, ಗುತ್ತಿಗೆ ನೀಡಿರುವ ಪ್ರಕರಣಗಳಲ್ಲಿ ಷರತ್ತು ಉಲ್ಲಂಘಿಸಿರುವ ಸಂಸ್ಥೆಗಳ ಮಂಜೂರಾತಿ ರದ್ದುಪಡಿಸುವ ಕುರಿತಂತೆ ಕರ್ನಾಟಕ ಭೂ ಮಂಜೂರಾತಿ ನಿಯಮಗಳು, 1969ರ ಅನ್ವಯ ವಿವಿಧ ಸಂಸ್ಥೆಗಳಿಗೆ ಜಮೀನು ಮಂಜೂರಾತಿ, ಗುತ್ತಿಗೆಗೆ ನೀಡಲಾದ ಜಮೀನುಗಳ ಮಂಜೂರಾತಿ ಷರತ್ತು, ಗುತ್ತಿಗೆ ಷರತ್ತು ಉಲ್ಲಂಘನೆ ಪ್ರಕರಣಗಳಾದ ಜಮೀನಿನ ನಿಗದಿತ ಉದ್ದೇಶ ಹೊರತುಪಡಿಸಿ ಇತರ ಉದ್ದೇಶಗಳಿಗೆ ಬಳಕೆ ಮಾಡಿಕೊಂಡಿರುವ, ಮಂಜೂರಾತಿ ಉದ್ದೇಶಕ್ಕೆ ಜಮೀನನ್ನು ಬಳಕೆ ಮಾಡಿಕೊಳ್ಳದ, ಗುತ್ತಿಗೆ ಅವಧಿ ಮುಕ್ತಾಯಗೊಂಡು ಗುತ್ತಿಗೆ ನವೀಕರಿಸದ, ಉಪ ಗುತ್ತಿಗೆ ನೀಡಿರುವ, ಗುತ್ತಿಗೆ ಮೊತ್ತ ಪಾವತಿಯಾಗದ ಹಾಗೂ ಇನ್ನಿತರೆ ಷರತ್ತುಗಳ ಉಲ್ಲಂಘನೆಯಾಗಿರುವ ಸಂಸ್ಥೆಗಳ ಮಂಜೂರಾತಿಯನ್ನು ರದ್ದುಪಡಿಸಲು ನಿಯಮಾನುಸಾರ ಕ್ರಮಕೈಗೊಳ್ಳುವಂತೆ ಮತ್ತು ಸರ್ಕಾರದ ಆದೇಶದನ್ವಯ ಮಂಜೂರಾತಿ, ಗುತ್ತಿಗೆ ನೀಡಲಾದ ಪ್ರಕರಣಗಳಲ್ಲಿ ಮಂಜೂರಾತಿ, ಗುತ್ತಿಗೆ ಷರತ್ತು ಉಲ್ಲಂಘಿಸಿರುವ ಪ್ರಕರಣಗಳಿಗೆ ಸಂಬಂಧಿಸಿದಂತೆ ಮಂಜೂರಾತಿಯನ್ನು ರದ್ದುಗೊಳಿಸಲು ಕೂಡಲೇ ಸರ್ಕಾರಕ್ಕೆ ಪ್ರಸ್ತಾವನೆಯನ್ನು ಸಲ್ಲಿಸುವಂತೆ ಎಲ್ಲಾ ಜಿಲ್ಲಾಧಿಕಾರಿಗಳಿಗೆ ನಿರ್ದೇಶನ ನೀಡಲಾಗಿದೆ ಎಂದು ತಿಳಿಸಿದರು.

ಗುತ್ತಿಗೆ ನೀಡಿರುವ ಸರ್ಕಾರಿ ಜಮೀನುಗಳನ್ನು ಪ್ರಕರಣವಾರು ಪರಾಮರ್ಶಿಸಿ, ಗುತ್ತಿಗೆ ಷರತ್ತುಗಳು ಪಾಲನೆಯಾಗಿರುವ ಬಗ್ಗೆ, ಗುತ್ತಿಗೆ ಹಣ ಕಾಲ ಕಾಲಕ್ಕೆ ಪಾವತಿಸಿರುವ ಬಗ್ಗೆ, ಗುತ್ತಿಗೆ ಮುಗಿದಿರುವ ಪ್ರಕರಣಗಳಲ್ಲಿ ಸರ್ಕಾರಿ ಜಮೀನು ಹಿಂಪಡೆಯುವ ಬಗ್ಗೆ ಜಿಲ್ಲಾಧಿಕಾರಿಗಳು ಪರಾಮರ್ಶಿಸಿ ಅಗತ್ಯ ಕ್ರಮಗಳನ್ನು ಕೈಗೊಳ್ಳುವಂತೆ ಹಾಗೂ ಭೂ ಮಂಜೂರಾತಿಯಾದ ಪ್ರಕರಣಗಳಲ್ಲಿಯೂ ಸಹ ಮಂಜೂರಾತಿ ಷರತ್ತು ಮತ್ತು ನಿಬಂಧನೆಗಳು ಪಾಲನೆಯಾಗಿರುವ ಬಗ್ಗೆ ಪರಾಮರ್ಶಿಸಿ, ಉಲ್ಲಂಘನೆಯಾಗಿರುವ ಪ್ರಕರಣಗಳಲ್ಲಿ ಕಾನೂನು ಕ್ರಮಗಳನ್ನು ಜರುಗಿಸುವಂತೆ ಜಿಲ್ಲಾಧಿಕಾರಿಗಳಿಗೆ ಸೂಚನೆ ನೀಡಲಾಗಿದೆ ಎಂದರು.

## ಆಗಸ್ಟ್ ಅಂತ್ಯದೊಳಗೆ ಬಾಕಿ ಇರುವ ಪಾದಚಾರಿ ಮಾರ್ಗಗಳ ಒತ್ತುವರಿ ತೆರವು ಮಾಡಿ: ಅಧಿಕಾರಿಗಳಿಗೆ ಸಚಿವ ಕೃಷ್ಣಬೈರೇಗೌಡ ಸೂಚನೆ



**ಬೆಂಗಳೂರು, ಆ.19:** ಜಿಬಿಎ ವ್ಯಾಪ್ತಿಯಲ್ಲಿ ಈವರೆಗೆ 964 ಕಿ.ಮೀ. ಪಾದಚಾರಿ ಮಾರ್ಗಗಳ ಒತ್ತುವರಿಯನ್ನು ತೆರವುಗೊಳಿಸಲಾಗಿದ್ದು, ಬಾಕಿ ಇರುವ ಒತ್ತುವರಿಗಳನ್ನು ಆಗಸ್ಟ್ ತಿಂಗಳೊಳಗಾಗಿ ತೆರವುಗೊಳಿಸುವಂತೆ ಗ್ರೇಟರ್ ಬೆಂಗಳೂರು ಅಭಿವೃದ್ಧಿ ಸಚಿವರಾದ ಕೃಷ್ಣ ಬೈರೇಗೌಡ ಅವರು ಅಧಿಕಾರಿಗಳಿಗೆ ಸೂಚಿಸಿದರು.

ವರ್ಚುವಲ್ ಸಭೆಯನ್ನು ಉದ್ದೇಶಿಸಿ ಮಾತನಾಡಿದ ಅವರು, ನಗರದಲ್ಲಿ ಸುಮಾರು 1,500 ಕಿ.ಮೀ. ಉದ್ದದ ಆರ್ಟಿರಿಯಲ್ ಹಾಗೂ ಸಬ್–ಆರ್ಟಿರಿಯಲ್ ಪ್ರಮುಖ ರಸ್ತೆಗಳಲ್ಲಿ ಪಾದಚಾರಿ ಮಾರ್ಗಗಳ ಒತ್ತುವರಿ ತೆರವು ಕಾರ್ಯಾಚರಣೆ ನಡೆಸಲಾಗುತ್ತಿದೆ. ಈ ಪೈಕಿ ಈವರೆಗೆ 964 ಕಿ.ಮೀ. ಉದ್ದದ ಪಾದಚಾರಿ ಮಾರ್ಗಗಳಲ್ಲಿನ ಒತ್ತುವರಿಗಳನ್ನು ತೆರವುಗೊಳಿಸಲಾಗಿದೆ. ಬಾಕಿ ಇರುವ ಪಾದಚಾರಿ ಮಾರ್ಗಗಳ ಒತ್ತುವರಿಯನ್ನು ಇದೇ ತಿಂಗಳೊಳಗಾಗಿ ತೆರವುಗೊಳಿಸುವಂತೆ ನಿರ್ದೇಶನ ನೀಡಿದರು.

ಪಾದಚಾರಿ ಮಾರ್ಗಗಳ ಒತ್ತುವರಿ ತೆರವು ಕಾರ್ಯಾಚರಣೆಯನ್ನು ರೂಪಿಸಿರುವ ಯೋಜನೆಯಂತೆ ಸಮರ್ಪಕವಾಗಿ ಕೈಗೊಳ್ಳಬೇಕು. ಒತ್ತುವರಿ ತೆರವುಗೊಳಿಸಿರುವ ಸ್ಥಳಗಳಲ್ಲಿ ದುರಸ್ತಿ ಕಾರ್ಯವನ್ನೂ ಸಮಾನಾಂತರವಾಗಿ ಕೈಗೊಳ್ಳುವಂತೆ ಸೂಚಿಸಿದರು.

ನಗರದಲ್ಲಿ ಪಾದಚಾರಿ ಮಾರ್ಗಗಳ ಒತ್ತುವರಿ ತೆರವುಗೊಳಿಸಿರುವ ಸ್ಥಳಗಳಲ್ಲಿಯೇ ಬೀದಿ ಬದಿ ವ್ಯಾಪಾರಿಗಳು ಪುನಃ ಬಂದು ವ್ಯಾಪಾರ ಮುಂದುವರಿಸುತ್ತಿರುವುದು ಕಂಡುಬರುತ್ತಿದೆ. ಈ ಕುರಿತು ಕಟ್ಟುನಿಟ್ಟಿನ ಕ್ರಮ ಕೈಗೊಂಡು, ಪುನಃ ಒತ್ತುವರಿ ಮಾಡಿಕೊಂಡು ವ್ಯಾಪಾರ ನಡೆಸುವವರ ಸಾಮಗ್ರಿಗಳನ್ನು ಜಪ್ತಿ ಮಾಡಿ, ಅವರಿಗೆ ದುಪ್ಪಟ್ಟು ದಂಡ ವಿಧಿಸುವಂತೆ ಕಟ್ಟುನಿಟ್ಟಿನ ಸೂಚನೆ ನೀಡಿದರು.

ಪಾದಚಾರಿ ಮಾರ್ಗಗಳ ಒತ್ತುವರಿ ತೆರವು ಕಾರ್ಯಾಚರಣೆ ಪರಿಣಾಮಕಾರಿಯಾಗಿ ನಡೆಯಬೇಕು. ಒತ್ತುವರಿ ತೆರವುಗೊಳಿಸಿರುವ ಸ್ಥಳಗಳಲ್ಲಿ ಅಧಿಕಾರಿಗಳು ನಿರಂತರವಾಗಿ ಮೇಲ್ವಿಚಾರಣೆ ನಡೆಸಬೇಕು. ಈ ನಿಟ್ಟಿನಲ್ಲಿ ಸದ್ಯದಲ್ಲಿಯೇ ಪಾಲಿಕೆ ಹಾಗೂ ಪೊಲೀಸ್ ಅಧಿಕಾರಿಗಳೊಂದಿಗೆ ಜಂಟಿ ಸಭೆ ನಡೆಸಲಾಗುವುದು ಎಂದು ತಿಳಿಸಿದರು.

ಪಾದಚಾರಿ ಮಾರ್ಗಗಳ ಒತ್ತುವರಿ ತೆರವು ಕಾರ್ಯಾಚರಣೆ, ತ್ಯಾಜ್ಯದಿಂದ ಸ್ವಾತಂತ್ರ್ಯ ಅಭಿಯಾನ ಹಾಗೂ ಬೀಡಾಡಿ ವಾಹನಗಳ ತೆರವು ಕಾರ್ಯವನ್ನು ಆಗಸ್ಟ್ 30ರೊಳಗಾಗಿ ಪೂರ್ಣಗೊಳಿಸಬೇಕು. ಅದಾದ ಬಳಿಕ ನಾಗರಿಕರಿಗೆ ದೂರುಗಳನ್ನು ಸಲ್ಲಿಸಲು ಅವಕಾಶ ಕಲ್ಪಿಸಬೇಕು. ಕಾರ್ಯಗಳು ಸಮರ್ಪಕವಾಗಿ ನಡೆಯದಿರುವುದು ಗಮನಕ್ಕೆ ಬಂದಲ್ಲಿ ಸಂಬಂಧಪಟ್ಟ ಅಧಿಕಾರಿಗಳ ವಿರುದ್ಧ ಕ್ರಮ ಕೈಗೊಳ್ಳಲಾಗುವುದು ಎಂದು ಕಟ್ಟುನಿಟ್ಟಿನ ಸೂಚನೆ ನೀಡಿದರು.

**1810 ಸ್ಥಳಗಳಲ್ಲಿದ್ದ 43492 ಮೆ. ಟನ್ ತ್ಯಾಜ್ಯ ತೆರವು**

ಜಿಬಿಎ ವ್ಯಾಪ್ತಿಯ ಐದು ನಗರ ಪಾಲಿಕೆಗಳಲ್ಲಿ ಇದುವರೆಗೆ 4,483 ಸ್ಥಳಗಳಲ್ಲಿ 1,02,002 ಮೆಟ್ರಿಕ್ ಟನ್ ಸಿ ಮತ್ತು ಡಿ ತ್ಯಾಜ್ಯವನ್ನು ಗುರುತಿಸಲಾಗಿದ್ದು, ಈವರೆಗೆ 1,810 ಸ್ಥಳಗಳಿಂದ 43,492 ಮೆಟ್ರಿಕ್ ಟನ್ ಸಿ & ಡಿ ತ್ಯಾಜ್ಯವನ್ನು ತೆರವುಗೊಳಿಸಲಾಗಿದೆ. ಈ ಕಾರ್ಯಾಚರಣೆಯನ್ನು ಮತ್ತಷ್ಟು ಪರಿಣಾಮಕಾರಿ ಯಾಗಿ ಕೈಗೊಳ್ಳಬೇಕು. ಅಧಿಕಾರಿಗಳು ಸಮರ್ಪಕವಾಗಿ ಮೇಲ್ವಿಚಾರಣೆ ನಡೆಸಿ ಅಭಿಯಾನ ಯಶಸ್ವಿಯಾಗುವಂತೆ ಕ್ರಮ ಕೈಗೊಳ್ಳಬೇಕು ಎಂದು ಕೃಷ್ಣಬೈರೇಗೌಡ ಸೂಚಿಸಿದರು.

ಸಭೆಯಲ್ಲಿ ಮುಖ್ಯ ಆಯುಕ್ತ ಮಹೇಶ್ವರ್ ರಾವ್, ಬಿಡಿಎ ಆಯುಕ್ತ ಕ್ಯಾ.ಮಣಿವಣ್ಣನ್, ಜಲಮಂಡಳಿ ಅಧ್ಯಕ್ಷೆ ಮಂಜುಳಾ, ನಗರ ಪಾಲಿಕೆ ಆಯುಕ್ತರಾದ ರಮೇಶ್ ಡಿ.ಎಸ್., ಪೊಮ್ಮಲ ಸುನೀಲ್ ಕುಮಾರ್, ರಮೇಶ್ ಕೆ.ಎನ್., ಜಿ. ಜಗದೀಶ್, ಡಾ. ರಾಜೇಂದ್ರ ಕೆ.ವಿ., ಬೆಂಗಳೂರು ಘನತ್ಯಾಜ್ಯ ನಿರ್ವಹಣೆ ನಿಯಮಿತದ ಸಿಇಓ ಕರೀಗೌಡ, ಬೆಂಗಳೂರು ನಗರ ಜಂಟಿ ಪೊಲೀಸ್ ಆಯುಕ್ತ ಕಾರ್ತಿಕ್ ರೆಡ್ಡಿ, ಅಪರ ಆಯುಕ್ತರು, ಮುಖ್ಯ ಅಭಿಯಂತರರು ಸೇರಿದಂತೆ ಇತರ ಅಧಿಕಾರಿಗಳು ಉಪಸ್ಥಿತರಿದ್ದರು.

## ಹನೂರು ಶೂಟೌಟ್ ಪ್ರಕರಣ: ಸಮಗ್ರ ತನಿಖೆ ನಂತರ ಪ್ರತಿಕ್ರಿಯೆ- ಸಿಎಂ ಡಿ.ಕೆ.ಶಿ.



ಬೆಂಗಳೂರು, ಆ.19: ಹನೂರು ಶೂಟೌಟ್ ಪ್ರಕರಣದ ಬಗ್ಗೆ ಸಮಗ್ರ ತನಿಖೆ ನಡೆಯುತ್ತಿದ್ದು, ತನಿಖೆ ಬಳಿಕ ಪ್ರತಿಕ್ರಿಯೆ ನೀಡುತ್ತೇವೆ ಎಂದು ಸಿಎಂ ಡಿ.ಕೆ. ಶಿವಕುಮಾರ್ ತಿಳಿಸಿದರು. ಸದಾಶಿವನಗರ ನಿವಾಸದ ಬಳಿ ಮಾಧ್ಯಮಗಳಿಗೆ ಬುಧವಾರ ಪ್ರತಿಕ್ರಿಯೆ ನೀಡಿದ ಅವರು, ಕಳ್ಳಬೇಟೆ ನಿಗ್ರಹ ಶಿಬಿರಗಳನ್ನು ಜಿಲೆಟಿನ್ ಬಳಸಿ ಸ್ಫೋಟಿಸಲಾಗಿದ್ದು, ತಮಿಳುನಾಡು ಮೂಲದ ಕಳ್ಳರ ಕೈವಾಡದ ಶಂಕೆಯಿದೆಯೇ ಎಂದು ಕೇಳಿದಾಗ, ನನಗೂ ಕೆಲವು ಮಾಹಿತಿ ಬರುತ್ತಿದೆ. ಅರಣ್ಯ ಸಚಿವರು ತನಿಖೆ ಮಾಡಿಸುತ್ತಿದ್ದಾರೆ. ಈಗ ಯಾವುದೇ ಪ್ರತಿಕ್ರಿಯೆ ನೀಡುವುದಿಲ್ಲ. ವರದಿ ಬಂದ ಬಳಿಕ ಮಾಹಿತಿ ನೀಡುತ್ತೇವೆ" ಎಂದರು.

## ಬಸ್ ಪ್ರಯಾಣದರ ಪರಿಷ್ಕರಣೆಗೆ ಶೀಘ್ರ ನಿರ್ಧಾರ: ಸಚಿವ ಬೈರತಿ ಸುರೇಶ್

**ನಾಲ್ಕು ಸಾರಿಗೆ ನಿಗಮಗಳು ಎದುರಿಸುತ್ತಿರುವ ಆರ್ಥಿಕ ಸಂಕಷ್ಟಕ್ಕೆ ಕಳವಳ**



ಬೆಂಗಳೂರು, ಆ.19: ಡೀಸೆಲ್ ಬೆಲೆ ಗಣನೀಯವಾಗಿ ಏರಿಕೆಯಾಗಿರುವ ಹಿನ್ನೆಲೆಯಲ್ಲಿ ಸರ್ಕಾರಿ ಬಸ್ ಪ್ರಯಾಣ ದರ ಹೆಚ್ಚಳವಾಗುವ ಸ್ಪಷ್ಟ ಸುಳಿವನ್ನು ಸಾರಿಗೆ ಸಚಿವ ಬೈರತಿ ಸುರೇಶ್ ನೀಡಿದ್ದಾರೆ.

ನಗರದಲ್ಲಿ ಸುದ್ದಿಗಾರರೊಂದಿಗೆ ಮಾತನಾಡಿದ ಅವರು, ರಾಜ್ಯದ ನಾಲ್ಕೂ ಸಾರಿಗೆ ನಿಗಮಗಳು ಎದುರಿಸುತ್ತಿರುವ ತೀವ್ರ ಆರ್ಥಿಕ ಸಂಕಷ್ಟದ ಬಗ್ಗೆ ಕಳವಳ ವ್ಯಕ್ತಪಡಿಸಿದ್ದು, ಶೀಘ್ರದಲ್ಲೇ ಟಿಕೆಟ್ ದರ ಪರಿಷ್ಕರಣೆ ಕುರಿತು ಅಂತಿಮ ನಿರ್ಧಾರ ಕೈಗೊಳ್ಳಲಾಗುವುದು ಎಂದು ತಿಳಿಸಿದ್ದಾರೆ.

ಪ್ರಯಾಣ ದರ ಪರಿಷ್ಕರಣೆಯ ಕುರಿತು ಅಧ್ಯಯನ ನಡೆಸಲು ಅತುಲ್ ಕುಮಾರ್ ತಿವಾರಿ ನೇತೃತ್ವದಲ್ಲಿ 'ಕರ್ನಾಟಕ ಸಾರ್ವಜನಿಕ ಸಾರಿಗೆ ದರ ನಿಯಂತ್ರಣ ಸಮಿತಿ'ಯನ್ನು ರಚಿಸಲಾಗಿದ್ದು, ಈ ಸಮಿತಿಗೆ ಶೀಘ್ರದಲ್ಲೇ ವರದಿ ಸಲ್ಲಿಸಲು ಸೂಚಿಸಲಾಗಿದೆ. ಸಮಿತಿ ರಚನೆಯಾಗಿ ಈಗಾಗಲೇ 20 ದಿನಗಳು ಕಳೆದಿವೆ. ನಾಲ್ಕೂ ಸಾರಿಗೆ ನಿಗಮಗಳು ಹಾಗೂ ವಿವಿಧ ಸ್ಥಳಗಳಿಗೆ ಭೇಟಿ ನೀಡಿ ಪರಿಶೀಲನೆ ನಡೆಸುತ್ತಿರುವ ಈ ಸಮಿತಿಯು ಶೀಘ್ರದಲ್ಲೇ ಸರ್ಕಾರಕ್ಕೆ ವರದಿ ಹಸ್ತಾಂತರಿಸಲಿದ್ದು, ಆ ಬಳಿಕ ಮುಂದಿನ ಕ್ರಮ ಕೈಗೊಳ್ಳಲಾಗುವುದು ಎಂದು ಸಚಿವರು ವಿವರಿಸಿದ್ದಾರೆ.

ಸಾರಿಗೆ ನಿಗಮಗಳ ಆರ್ಥಿಕ ಹೊರೆಯ ಕುರಿತು ವಿವರಣೆ ನೀಡಿದ ಸಚಿವರು, ಕಳೆದ ಬಾರಿ ಬಸ್ ಪ್ರಯಾಣ ದರ ಪರಿಷ್ಕರಣೆಯಾದ ನಂತರ ಡೀಸೆಲ್ ಬೆಲೆಯಲ್ಲಿ ಭಾರಿ ಪ್ರಮಾಣದ ಏರಿಕೆಯಾಗಿದೆ. ಆದರೂ ಪ್ರಯಾಣಿಕರ ಹಿತದೃಷ್ಟಿಯಿಂದ ಪ್ರಯಾಣ ದರವನ್ನು ಹೆಚ್ಚಿಸರಲಿಲ್ಲ. ಆದರೆ ಪ್ರಸ್ತುತ ನಾಲ್ಕೂ ಸಾರಿಗೆ ನಿಗಮಗಳು ಒಟ್ಟಾಗಿ ಪ್ರತಿವರ್ಷ 8,000 ರಿಂದ 10,000 ಕೋಟಿ ರೂ. ಭಾರಿ ನಷ್ಟ ಅನುಭವಿಸುತ್ತಿವೆ. ಈ ನಷ್ಟವನ್ನು ಸರಿದೂಗಿಸಲು ಮಾರ್ಗೋಪಾಯಗಳನ್ನು ಕಂಡುಕೊಳ್ಳುವುದು ಅನಿವಾರ್ಯವಾಗಿದೆ ಎಂದು ಹೇಳಿದ್ದಾರೆ.

ಸಾರಿಗೆ ಸಂಸ್ಥೆಗಳ ಪ್ರಸ್ತುತ ಪರಿಸ್ಥಿತಿಯನ್ನು ವಿವರಿಸುತ್ತಾ, "ನಮಗೆ ಈ ನಷ್ಟ ಭರಿಸಲು ಹಣ ಎಲ್ಲಿಂದ ಸಿಗಬೇಕು? ದರ ಪರಿಷ್ಕರಣೆ ಮಾಡದಿದ್ದರೆ ನಾವು ನಿಗಮಗಳನ್ನೇ ಮುಚ್ಚಬೇಕಾಗುತ್ತದೆ" ಎಂದು ಸಚಿವರು ಕಳವಳ ವ್ಯಕ್ತಪಡಿಸಿದರು. ಅತುಲ್ ಕುಮಾರ್ ತಿವಾರಿ ಸಮಿತಿಯ ವರದಿ ಬಂದ ತಕ್ಷಣವೇ ಮುಖ್ಯಮಂತ್ರಿಗಳೊಂದಿಗೆ ವಿವರವಾದ ಚರ್ಚೆ ನಡೆಸಿ, ಸಚಿವ ಸಂಪುಟ ಸಭೆಯ ಮುಂದಿಟ್ಟು ಟಿಕೆಟ್ ದರ ಏರಿಕೆಯ ಕುರಿತು ಅಂತಿಮ ನಿರ್ಧಾರ ತೆಗೆದುಕೊಳ್ಳಲಾಗುವುದು ಎಂದು ಅವರು ಸ್ಪಷ್ಟಪಡಿಸಿದ್ದಾರೆ.

# ನಕಲಿ ಔಷಧ ಜಾಲ ಪತ್ತೆ: 4.91 ಕೋಟಿ ರೂ. ಮೌಲ್ಯದ ಸೊತ್ತು ವಶ, ಓರ್ವನ ಬಂಧನ



**ಬೆಂಗಳೂರು, ಆ.19:** ರಾಮನಗರದ ಬಿಡದಿಯ ಫಾರ್ಮ್ ಹೌಸ್‌ವೊಂದರಲ್ಲಿ ನಡೆಯುತ್ತಿದ್ದ ಪರವಾನಿಗೆರಹಿತ ನಕಲಿ ಔಷಧಿ ಮರುಪ್ಯಾಕಿಂಗ್ ಮತ್ತು ಲೇಬಲಿಂಗ್ ಜಾಲವನ್ನು ಆಹಾರ ಸುರಕ್ಷತೆ ಮತ್ತು ಔಷಧ ಆಡಳಿತ ಇಲಾಖೆಯ ಔಷಧ ಅಮಲುಜಾರಿ ವಿಭಾಗದ ಅಧಿಕಾರಿಗಳ ತಂಡ ಪತ್ತೆ ಹಚ್ಚಿದೆ.

ಈ ಸಂಬಂಧ 4.91 ಕೋಟಿ ರೂ. ಮೌಲ್ಯದ ಸೊತ್ತುಗಳನ್ನು ವಶಪಡಿಸಿಕೊಳ್ಳಲಾಗಿದ್ದು, ಓರ್ವನನ್ನು ಬಂಧಿಸಲಾಗಿದೆ.

ಈ ಬಗ್ಗೆ ಸುದ್ದಿಗೋಷ್ಠಿಯಲ್ಲಿಂದು ಮಾಹಿತಿ ನೀಡಿದ ರಾಜ್ಯ ಆರೋಗ್ಯ ಸಚಿವ ಯು.ಟಿ.ಖಾದರ್, ಖಚಿತ ಮಾಹಿತಿಯನ್ನು ಆಧರಿಸಿ ಆಗಸ್ಟ್ 18ರಂದು ಬೆಂಗಳೂರು ದಕ್ಷಿಣ ಜಿಲ್ಲೆಯ ಬಿಡದಿಯ ಕುರುಬರಕೇರನ ಹಳ್ಳಿಯ ಫಾರ್ಮ್‌ಹೌಸ್‌ಗೆ ಆಹಾರ ಸುರಕ್ಷತೆ ಮತ್ತು ಔಷಧ ಆಡಳಿತ ಇಲಾಖೆಯ ಔಷಧ ಅಮಲು ಜಾರಿ ವಿಭಾಗದ ಅಧಿಕಾರಿಗಳ ತಂಡ ದಿಢೀರ್ ದಾಳಿ ನಡೆಸಿದೆ. ಈ ವೇಳೆ ಕಾನೂನುಬಾಹಿರವಾಗಿ ಅಂತಾರಾಷ್ಟ್ರೀಯ ಔಷಧ ಕಂಪೆನಿಯ ಹೆಸರಿನಲ್ಲಿ ಮರು–ಪ್ಯಾಕಿಂಗ್ ಮತ್ತು ಲೇಬಲಿಂಗ್ ಮಾಡುತ್ತಿರುವುದು ಪತ್ತೆಯಾಗಿದೆ ಎಂದು ತಿಳಿಸಿದರು.

ಈ ನಕಲಿ ಔಷಧ ಜಾಲ ಕಾರ್ಯಾಚರಿಸುತ್ತಿದ್ದ ಫಾರ್ಮ್‌ಹೌಸ್ ಸಿದ್ದಯ್ಯ ಎಂಬವರಿಗೆ ಸೇರಿದ್ದಾಗಿದೆ. ಇದನ್ನು ದುಬೈಯಲ್ಲಿರುವ ಬೆಂಗಳೂರು ಮೂಲದ ಪ್ರಶಾಂತ್ ಎಂಬವರು ಲೀಸ್‌ಗೆ ಪಡೆದಿರುವುದು ತಿಳಿದುಬಂದಿದೆ. ಪ್ರಶಾಂತ್ ಸಂಬಂಧಿಕ ತೇಜಸ್ ಎಂಬಾತ ಇದನ್ನು ನೋಡಿಕೊಳ್ಳುತ್ತಿದ್ದ. ಪ್ರಕರಣಕ್ಕೆ ಸಂಬಂಧಿಸಿ ಪ್ರಭುದೇವಗೌಡ ಎಂಬಾತನನ್ನು ಈಗಾಗಲೇ ಬಂಧಿಸಲಾಗಿದೆ ಎಂದು ಸಚಿವರು ತಿಳಿಸಿದ್ದಾರೆ.

ಇತರ ರಾಜ್ಯಗಳಿಂದ ಕಡಿಮೆ ಬೆಲೆಯ ಔಷಧಿಗಳನ್ನು ತಂದು, ಅವುಗಳನ್ನು ಹೊಸ ಬಾಟಲಿಗಳಿಗೆ ತುಂಬಿಸಿ, ದುಬಾರಿ ಬಹುರಾಷ್ಟ್ರೀಯ ಕಂಪೆನಿಗಳ ಹಾಗೂ ಆಮದು ಮಾಡಿಕೊಂಡ ಬ್ರ್ಯಾಂಡ್‌ಗಳ ಹೆಸರಿನ ನಕಲಿ ಲೇಬಲ್ ಹಚ್ಚಿ ಮಾರಾಟ ಮಾಡುತ್ತಿರುವುದು ಪ್ರಾಥಮಿಕ ತನಿಖೆಯಿಂದ ಬೆಳಕಿಗೆ ಬಂದಿದೆ. ನಕಲಿ ಔಷಧಿಗಳಲ್ಲಿ ಯಾವುದೇ ಸಕ್ರಿಯ ಔಷಧ ಇರುವುದಿಲ್ಲ, ತಪ್ಪು ಪದಾರ್ಥಗಳು ಅಥವಾ ಹಾನಿಕಾರಕ ಪದಾರ್ಥಗಳು ಇರುತ್ತವೆ. ಈ ಉದ್ದೇಶಕ್ಕಾಗಿ ಬಳಸಲಾದ ಲೇಬಲ್‌ನಲ್ಲಿ ಸ್ಕ್ಯಾನಿಂಗ್ ಕೋಡ್‌ಗಳು ಕಾರ್ಯನಿರ್ವಹಿಸುತ್ತಿರಲಿಲ್ಲ ಎಂದು ಸಚಿವರು ತಿಳಿಸಿದ್ದಾರೆ.

**ರಾಷ್ಟ್ರವ್ಯಾಪ್ತಿ ಜಾಲ**

ಇದು ಕರ್ನಾಟಕಕ್ಕೆ ಮಾತ್ರ ಸೀಮಿತವಾಗಿಲ್ಲ, ಇದು ರಾಷ್ಟ್ರಮಟ್ಟಕ್ಕೆ ವ್ಯಾಪಿಸಿರುವ ಜಾಲ. ಹಿಮಾಚಲ ಪ್ರದೇಶ, ತೆಲಂಗಾಣ ರಾಜ್ಯಗಳಲ್ಲಿ ನಕಲಿ ಔಷಧಿಗಳನ್ನು ತಯಾರಿಸಿ, ಅವುಗಳನ್ನು ಕರ್ನಾಟಕಕ್ಕೆ ತಂದು ಎಂಎನ್‌ಸಿ ಲೇಬಲಿಂಗ್ ಹಾಕಿ ಅದನ್ನು ಮೆಡಿಕಲ್, ಆಸ್ಪತ್ರೆಗಳಿಗೆ ವಿತರಿಸಲಾಗುತ್ತಿರುವುದು ಪತ್ತೆಯಾಗಿದೆ. ಆಸ್ಪತ್ರೆಯ ತುರ್ತು ನಿಗಾ ಘಟಕ (ಐಸಿಯು) ದಲ್ಲಿ ಉಪಯೋಗಿಸುವ ಔಷಧಿಗಳನ್ನೂ ನಕಲಿಯಾಗಿ ತಯಾರಿಸಿ ನಕಲಿ ಲೇಬಲ್ ಹಚ್ಚಿರುವುದು ಪತ್ತೆಯಾಗಿದೆ ಎಂದು ಆರೋಗ್ಯ ಸಚಿವ ಯು.ಟಿ. ಖಾದರ್ ಮಾಹಿತಿ ನೀಡಿದ್ದಾರೆ. ಸದ್ಯ ರಾಮನಗರ ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿ ನೇತೃತ್ವದಲ್ಲಿ ಡ್ರಗ್ ಮತ್ತು ಪೊಲೀಸ್ ಇಲಾಖೆ ಜಂಟಿಯಾಗಿ ಈ ಪ್ರಕರಣದ ತನಿಖೆ ನಡೆಸುತ್ತಿದೆ. ಈ ಜಾಲದ ಬಗ್ಗೆ ತೆಲಂಗಾಣ, ಹಿಮಾಚಲ ಪ್ರದೇಶದ ಸರಕಾರಗಳಿಗೂ ಮಾಹಿತಿ ನೀಡುತ್ತೇವೆ ಎಂದು ಯು.ಟಿ.ಖಾದರ್ ಹೇಳಿದರು..ಪ್ರಕರಣದ ತನಿಖೆಗೆ ವಿಶೇಷ ತನಿಖಾ ತಂಡ ರಚನೆಯಾಗಬೇಕಿದೆ. ಈ ಬಗ್ಗೆ ರಾಜ್ಯ ಗೃಹ ಸಚಿವರ ಜೊತೆ ಚರ್ಚಿಸುತ್ತೇನೆ ಎಂದು ಸಚಿವರು ತಿಳಿಸಿದರು.

**ನಕಲಿ ಔಷಧ ಮಾರಾಟ ತಡೆಗೆ ಕ್ರಮ**

ವಶಪಡಿಸಿಕೊಳ್ಳಲಾದ ಔಷಧಿಗಳ ಬ್ಯಾಚ್ ಯಾವುದೇ ರೀತಿಯ ಮಾರಾಟ ಅಥವಾ ವಿತರಣೆಯನ್ನು ತಡೆಯಲು ಅವುಗಳ ಬ್ಯಾಚ್ ಸಂಖ್ಯೆಗಳನ್ನು ಇಲಾಖೆಯ ಎಫ್‌ಡಿಎ ಪೋರ್ಟಲ್‌ನಲ್ಲಿ ತಕ್ಷಣವೇ ಬ್ಲಾಕ್ ಮಾಡಲಾಗಿದೆ. ವಶಪಡಿಸಿಕೊಂಡ ಔಷಧಿಗಳ ರಾಸಾಯನಿಕ ಸಂಯೋಜನೆ, ಶುದ್ಧತೆ ಮತ್ತು ತೀವ್ರತೆಯನ್ನು ಪರೀಕ್ಷಿಸಲು ಮಾದರಿಗಳನ್ನು ಸರ್ಕಾರಿ ಪ್ರಯೋಗಾಲಯಕ್ಕೆ ಕಳುಹಿಸಲಾಗಿದೆ ಎಂದು ಯು.ಟಿ. ಖಾದರ್ ತಿಳಿಸಿದರು.

Chief reporter : SANDEEP RENU 99728 72151 | Executive Editor : SHARAT JYOTSNA B.R 9886766483 vaarthe@gmail.com
Published from: K10,'A'/4, Khriki Extension, Malviya Nagar, New Delhi-110 017. Phone: 95-120-3917916-20
Printed at: Jyoti Printers, E-94, Sector 6, Noida, UP. Phone: 0120-4232687 Off : E-94,Sector 6, Noida,UP | RNI No. DELKAN/2003/10363

24 ವರ್ಷಗಳಿಂದ ದೆಹಲಿಯಲ್ಲಿ ಪ್ರಕಟವಾಗುತ್ತಿರುವ ಪ್ರಪ್ರಥಮ ರಾಷ್ಟ್ರೀಯ ಕನ್ನಡ ದಿನಪತ್ರಿಕೆ
ದೆಹಲಿ ವಾರ್ತೆ
ಆಗಸ್ಟ್ 20 2026, ಗುರುವಾರ

## ಒಳಪುಟಗಳಲ್ಲಿ

ಮಧ್ಯಾಹ್ನದ ಬಿಸಿಯೂಟದಲ್ಲಿ ಉಪ್ಪು ಬದಲು ಡಿಟರ್ಜೆಂಟ್ ಬಳಕೆ; ಬಿಹಾರದಲ್ಲಿ 36 ಮಕ್ಕಳು ಅಸ್ವಸ್ಥ - ಪು.4


2 ಕೋಟಿ ರೂ. ವೆಚ್ಚದಲ್ಲಿ ಬಾಲಭವನದ ಹೋಟೆಲ್ ಮೇಲ್ದರ್ಜೆಗೆ: ಸಚಿವ ಕೆ.ಜೆ. ಜಾರ್ಜ್ - ಪು.5


ದೆಹಲಿ-ಹುಬ್ಬಳ್ಳಿ, ದೆಹಲಿ-ಬೆಳಗಾವಿ ಮಧ್ಯೆ ನಿತ್ಯವೂ ವಿಮಾನ ಸಂಚಾರ - ಪು.6

# ಕಾವೇರಿ: ಆದೇಶ ಮರುಪರಿಶೀಲಿಸುವಂತೆ ಪ್ರಾಧಿಕಾರಕ್ಕೆ ಕರ್ನಾಟಕ ಮೊರೆ

**ನವದೆಹಲಿ, ಆ.19: ತಮಿಳುನಾಡಿಗೆ ಕಾವೇರಿ ನೀರು ಬಿಡುಗಡೆ ಮಾಡುವಂತೆ ಕಾವೇರಿ ಜಲ ನಿರ್ವಹಣಾ ಪ್ರಾಧಿಕಾರ (ಸಿಡಬ್ಲ್ಯುಎಂಎ) ನೀಡಿರುವ ಆದೇಶವನ್ನು ಮರುಪರಿಶೀಲಿಸುವಂತೆ ಕರ್ನಾಟಕ ಸರ್ಕಾರ ಮೇಲ್ಮನವಿ ಸಲ್ಲಿಸಿದೆ. ಪ್ರಸ್ತುತ ಬರ ಪರಿಸ್ಥಿತಿ, ಕುಸಿದಿರುವ ಒಳಹರಿವು, ಜಲಾಶಯಗಳಲ್ಲಿನ ಕಡಿಮೆ ನೀರಿನ ಸಂಗ್ರಹ ಹಾಗೂ ಕರ್ನಾಟಕದ ಕುಡಿಯುವ ನೀರು ಮತ್ತು ನೀರಾವರಿ ಅಗತ್ಯಗಳನ್ನು ಪರಿಗಣಿಸಿ ಆಗಸ್ಟ್ 11ರಂದು ನೀಡಲಾದ ದಿನಕ್ಕೆ 12 ಸಾವಿರ ಕ್ಯೂಸೆಕ್ ನೀರು ಬಿಡುಗಡೆ ಆದೇಶವನ್ನು ಮರುಪರಿಶೀಲಿಸಿ 6,000 ಕ್ಯೂಸೆಕ್‌ಗೆ ಇಳಿಸಬೇಕು ಎಂದು ರಾಜ್ಯ ಸರ್ಕಾರ ಮನವಿ ಮಾಡಿದೆ.**

ಮುಂಗಾರು ಮಳೆ ನಿರೀಕ್ಷಿತ ಪ್ರಮಾಣದಲ್ಲಿ ಮುಂದುವರಿಯದಿರುವುದು, ಜಲಾಶಯಗಳಿಗೆ ಒಳಹರಿವು ಗಣನೀಯವಾಗಿ ಕುಸಿದಿರುವುದು ಹಾಗೂ ಮುಂದಿನ ದಿನಗಳಲ್ಲಿ ಕುಡಿಯುವ ನೀರು ಮತ್ತು ನೀರಾವರಿಗೆ ಎದುರಾಗಬಹುದಾದ ಸಂಕಷ್ಟವನ್ನು ಉಲ್ಲೇಖಿಸಿ ಕರ್ನಾಟಕ ಈ ಮೇಲ್ಮನವಿ ಸಲ್ಲಿಸಿದೆ.

ರಾಜ್ಯ ಸರ್ಕಾರದ ವಾದದ ಪ್ರಕಾರ, ಆಗಸ್ಟ್‌ನಲ್ಲಿ ನೀಡಲಾದ 12 ಸಾವಿರ ಕ್ಯೂಸೆಕ್ ನೀರು ಬಿಡುಗಡೆ ಆದೇಶವು ಸೆಪ್ಟೆಂಬರ್ ಹಾಗೂ ಅಕ್ಟೋಬರ್‌ವರೆಗೂ ಉತ್ತಮ ಮುಂಗಾರು ಮಳೆಯಾಗಲಿದೆ ಎಂಬ ನಿರೀಕ್ಷೆಯನ್ನು ಆಧರಿಸಿತ್ತು. ಆದರೆ ಸೂಪರ್ ಎಲ್‌ನಿನೊ ಪರಿಣಾಮದಿಂದ ಮುಂಗಾರು ದುರ್ಬಲಗೊಂಡಿದೆ. ಆಗಸ್ಟ್ 18ರ ವೇಳೆಗೆ ಕರ್ನಾಟಕದ ಕಾವೇರಿ ಜಲಾನಯನ ಪ್ರದೇಶದ ಜಲಾಶಯಗಳಲ್ಲಿ ಒಟ್ಟು 77.907 ಟಿಎಂಸಿ ನೀರು ಮಾತ್ರ ಸಂಗ್ರಹವಾಗಿದೆ. ಇದೇ ವೇಳೆ ತಮಿಳುನಾಡಿನ ಮೂರು ಪ್ರಮುಖ ಜಲಾಶಯಗಳಲ್ಲಿ ಸುಮಾರು 52.483 ಟಿಎಂಸಿ ನೀರು ಲಭ್ಯವಿದೆ ಎಂದು ಕರ್ನಾಟಕ ತಿಳಿಸಿದೆ. ಜೂನ್ 1ರಿಂದ ಆಗಸ್ಟ್ 18ರವರೆಗೆ ಕರ್ನಾಟಕದ ನಾಲ್ಕು ಪ್ರಮುಖ ಜಲಾಶಯಗಳಿಗೆ ಒಟ್ಟು 88.662 ಟಿಎಂಸಿ ನೀರು ಒಳಹರಿವು ಬಂದಿದೆ. ದೀರ್ಘಾವಧಿಯ ಸರಾಸರಿ 169.452 ಟಿಎಂಸಿಗೆ ಹೋಲಿಸಿದರೆ ಇದು ಶೇ. 47.68ರಷ್ಟು ಕೊರತೆಯಾಗಿದೆ.

ಜುಲೈ 29ರಂದು ದಿನಕ್ಕೆ 3,500 ಕ್ಯೂಸೆಕ್‌ನಂತೆ 15 ದಿನ ನೀರು ಹರಿಸುವಂತೆ ಪ್ರಾಧಿಕಾರ ಸೂಚಿಸಿತ್ತು. ಈ ಅವಧಿಯಲ್ಲಿ ಬಿಳಿಗುಂಡ್ಲುವಿನಲ್ಲಿ 9 ಟಿಎಂಸಿ ನೀರು ಹರಿದುಬಂದಿದ್ದು, ಆದೇಶಿತ ಪ್ರಮಾಣ 4.536 ಟಿಎಂಸಿ ಮಾತ್ರವಾಗಿತ್ತು. ಬಳಿಕ ಆಗಸ್ಟ್ 12ರಿಂದ ದಿನಕ್ಕೆ 12 ಸಾವಿರ ಕ್ಯೂಸೆಕ್ ನೀರು ಬಿಡುಗಡೆಗೆ ಸೂಚನೆ ನೀಡಲಾಗಿತ್ತು. ಆಗಸ್ಟ್ 18ರ ಬೆಳಗ್ಗಿನವರೆಗೆ ಬಿಳಿಗುಂಡ್ಲುವಿನಲ್ಲಿ 13.414 ಟಿಎಂಸಿ ನೀರು ಹರಿದುಬಂದಿದ್ದು, ಈ ಅವಧಿಗೆ ಆದೇಶಿತ ಪ್ರಮಾಣ 10.757 ಟಿಎಂಸಿ ಆಗಿತ್ತು ಎಂದು ರಾಜ್ಯ ಸರ್ಕಾರ ಹೇಳಿದೆ. ಆದರೆ ಜಲಾಶಯಗಳಿಗೆ ಒಳಹರಿವು ದಿನದಿಂದ ದಿನಕ್ಕೆ ಕುಸಿಯುತ್ತಿರುವುದು ಆತಂಕಕ್ಕೆ ಕಾರಣವಾಗಿದೆ. ಆಗಸ್ಟ್ 10ರಂದು ಕರ್ನಾಟಕದ ಜಲಾಶಯಗಳಿಗೆ 25,964 ಕ್ಯೂಸೆಕ್ ಒಳಹರಿವು ಇದ್ದರೆ, ಆಗಸ್ಟ್ 14ರಂದು ಅದು 15,060 ಕ್ಯೂಸೆಕ್‌ಗೆ ಮತ್ತು ಆಗಸ್ಟ್ 18ರಂದು ಕೇವಲ 13,141 ಕ್ಯೂಸೆಕ್‌ಗೆ ಇಳಿದಿದೆ. ಜಲಾಶಯಗಳಿಗೆ ಸುಮಾರು 13 ಸಾವಿರ ಕ್ಯೂಸೆಕ್ ಒಳಹರಿವು ಇರುವಾಗ ಬಿಳಿಗುಂಡ್ಲುವಿನಲ್ಲಿ 12 ಸಾವಿರ ಕ್ಯೂಸೆಕ್ ನೀರು ಖಚಿತಪಡಿಸಲು ಸುಮಾರು

**12000ದ ಬದಲಾಗಿ 6 ಸಾವಿರ ಕ್ಯೂಸೆಕ್‌ಗೆ ತಗ್ಗಿಸುವಂತೆ ಕೋರಿಕೆ**

**ಮಳೆ ಕೊರತೆಯಿಂದ ಜಲಾಶಯಗಳಲ್ಲಿನ ಒಳಹರಿವು ಕುಸಿತ**

**ಕೃಷಿ ಹಾಗೂ ಬೆಂಗಳೂರಿನ ಕುಡಿಯುವ ನೀರಿಗೂ ಸಮಸ್ಯೆ**

15 ಸಾವಿರ ಕ್ಯೂಸೆಕ್ ಹೊರಹರಿವು ಮಾಡಬೇಕಾಗುತ್ತದೆ. ಇದರಿಂದ ರಾಜ್ಯದ ಜಲಾಶಯಗಳ ನೀರಿನ ಸಂಗ್ರಹ ಮತ್ತಷ್ಟು ಕುಸಿಯಲಿದೆ ಎಂದು ವಾದಿಸಿದೆ.

ಕಬಿನಿ ಜಲಾಶಯಕ್ಕೆ ಆಗಸ್ಟ್ 17ರಂದು 7,747 ಕ್ಯೂಸೆಕ್ ಹಾಗೂ ಆಗಸ್ಟ್ 18ರಂದು 6,457 ಕ್ಯೂಸೆಕ್ ಒಳಹರಿವು ದಾಖಲಾಗಿದೆ. ಈ ಪರಿಸ್ಥಿತಿಯಲ್ಲಿ ಬಿಳಿಗುಂಡ್ಲುವಿಗೆ 12 ಸಾವಿರ ಕ್ಯೂಸೆಕ್ ನೀರು ತಲುಪಿಸಲು ಕೆಆರ್‌ಎಸ್ನಿಂದ ಸುಮಾರು 7 ಸಾವಿರ ಕ್ಯೂಸೆಕ್ ಅಥವಾ ಅದಕ್ಕಿಂತ ಹೆಚ್ಚಿನ ಪ್ರಮಾಣದ ನೀರು ಬಿಡುಗಡೆ ಮಾಡಬೇಕಾಗಬಹುದು ಎಂದು ಸರ್ಕಾರ ತಿಳಿಸಿದೆ.

ಕೆಆರ್‌ಎಸ್ ಜಲಾಶಯದಲ್ಲಿ ಪ್ರಸ್ತುತ 26.602 ಟಿಎಂಸಿ ಲೈವ್ ಸ್ಟೋರೇಜ್ ಇದ್ದು, ಅದರ ವಿನ್ಯಾಸ ಸಾಮರ್ಥ್ಯ 45.051 ಟಿಎಂಸಿ ಆಗಿದೆ. ಅಂದರೆ ಜಲಾಶಯದಲ್ಲಿ ಸಾಮರ್ಥ್ಯಕ್ಕಿಂತ ಸುಮಾರು ಶೇ.41ರಷ್ಟು ಕಡಿಮೆ ನೀರು ಇದೆ. ಕೆಆರ್‌ಎಸ್‌ನಿಂದ ಹೆಚ್ಚಿನ ಪ್ರಮಾಣದಲ್ಲಿ ನೀರು ಬಿಡುಗಡೆ ಮಾಡಿದರೆ ಸುಮಾರು 1.959 ಲಕ್ಷ ಎಕರೆ ನೀರಾವರಿ ಪ್ರದೇಶಕ್ಕೆ ಹಾಗೂ ಬೆಂಗಳೂರಿನ ಕುಡಿಯುವ ನೀರಿನ ಪೂರೈಕೆಗೆ ನೇರ ಪರಿಣಾಮ ಬೀರುವ ಸಾಧ್ಯತೆ ಇದೆ ಎಂದು ರಾಜ್ಯ ಸರ್ಕಾರ ಆತಂಕ ವ್ಯಕ್ತಪಡಿಸಿದೆ.

ರಾಜ್ಯದ ಕುಡಿಯುವ ನೀರು ಮತ್ತು ನೀರಾವರಿ ಅಗತ್ಯಗಳಿಗೆ ಸುಮಾರು 144 ಟಿಎಂಸಿ, ಫೆಬ್ರವರಿಯಿಂದ ಮೇ ತಿಂಗಳವರೆಗೆ ಪರಿಸರ ಹರಿವಿಗೆ ಸುಮಾರು 10 ಟಿಎಂಸಿ ಸೇರಿ ಒಟ್ಟು ಸುಮಾರು 155 ಟಿಎಂಸಿ ನೀರು ಅಗತ್ಯವಿದೆ. ಆದರೆ ಪ್ರಸ್ತುತ ಜಲಾಶಯಗಳಲ್ಲಿ 77.907 ಟಿಎಂಸಿ ನೀರು ಮಾತ್ರ ಇದೆ. ಎಲ್ ನಿನೊ ಪರಿಣಾಮ ಮುಂದುವರಿದರೆ ಮುಂದಿನ ದಿನಗಳಲ್ಲಿ ಹೆಚ್ಚುವರಿಯಾಗಿ 40 ಟಿಎಂಸಿಗಿಂತ ಹೆಚ್ಚಿನ ಒಳಹರಿವು ಬರುವ ಸಾಧ್ಯತೆ ಕಡಿಮೆ ಎಂದು ಸರ್ಕಾರ ತಿಳಿಸಿದೆ.

ಈಗಾಗಲೇ ಕರ್ನಾಟಕದಲ್ಲಿ ನೀರಾವರಿಗಾಗಿ ಕಾಲುವೆಗಳಿಗೆ ನೀರು ಬಿಡಲು ಆರಂಭಿಸಲಾಗಿದೆ. ಮುಂದಿನ ಅವಧಿಯಲ್ಲಿ ಕಾಲುವೆಗಳಿಗೆ ನೀರು ಹರಿಸದಿದ್ದರೆ ನಿಂತಿರುವ ಬೆಳೆಗಳಿಗೆ ತೀವ್ರ ಹಾನಿಯಾಗುವ ಆತಂಕವಿದೆ. ಮತ್ತೊಂದೆಡೆ, ತಮಿಳುನಾಡಿನ ಮೆಟ್ಟೂರು ಜಲಾಶಯದಲ್ಲಿ ಸುಮಾರು 45 ಟಿಎಂಸಿ ನೀರು ಸಂಗ್ರಹವಿದೆ. ಕರ್ನಾಟಕದ ಜಲಾಶಯಗಳ ಕೆಳಭಾಗದ ಮಧ್ಯಂತರ ಜಲಾನಯನ ಪ್ರದೇಶದಿಂದ ಸುಮಾರು 50 ಟಿಎಂಸಿ ಅಥವಾ ಅದಕ್ಕಿಂತ ಹೆಚ್ಚಿನ ನೀರು ದೊರೆಯುವ ಸಾಧ್ಯತೆಯನ್ನೂ ರಾಜ್ಯ ಸರ್ಕಾರ ಉಲ್ಲೇಖಿಸಿದೆ.

# ಪೇಪರ್ ಲೀಕ್‌ನಿಂದ ಮಹಿಳಾ ಮೀಸಲಾತಿವರೆಗೆ ಕೇಂದ್ರದ ವಿರುದ್ಧ ಕಾಂಗ್ರೆಸ್ ವಾಗ್ದಾಳಿ

**ನವದೆಹಲಿ, ಆ.19:** ಯುವಜನರ ಸಮಸ್ಯೆಗಳು, ಅಯೋಧ್ಯೆ ರಾಮಮಂದಿರ ದೇಣಿಗೆ ಅವ್ಯವಹಾರ, ಚೀನಾ ಗಡಿ ವಿಚಾರ, ಇ20 ಪೆಟ್ರೋಲ್ ಹಾಗೂ ಮಹಿಳಾ ಮೀಸಲಾತಿ ಸೇರಿದಂತೆ ಹಲವು ಪ್ರಮುಖ ವಿಷಯಗಳ ಕುರಿತು ಕಾಂಗ್ರೆಸ್ ಕಾರ್ಯಕಾರಿ ಸಮಿತಿ **(CWC)** ಸಭೆಯಲ್ಲಿ ನಾಲ್ಕು ಮಹತ್ವದ ನಿರ್ಣಯಗಳನ್ನು ಕೈಗೊಳ್ಳಲಾಗಿದೆ. ಕೇಂದ್ರ ಸರ್ಕಾರದ ನೀತಿಗಳನ್ನು ತೀವ್ರವಾಗಿ ಟೀಕಿಸಿರುವ ಕಾಂಗ್ರೆಸ್, ಹಲವು ವಿಚಾರಗಳಲ್ಲಿ ತನ್ನ ಹೋರಾಟವನ್ನು ಮುಂದುವರಿಸುವುದಾಗಿ ಘೋಷಿಸಿದೆ.

ಯುವಜನರ ಸಮಸ್ಯೆಗಳ ಕುರಿತು ಚರ್ಚಿಸಿದ **CWC,** ಪೇಪರ್ ಲೀಕ್, ನಿರುದ್ಯೋಗ ಮತ್ತು ವಿದ್ಯಾರ್ಥಿಗಳ ಮೇಲಿನ ದಮನದ ವಿಚಾರದಲ್ಲಿ ಕೇಂದ್ರ ಸರ್ಕಾರವನ್ನು ತರಾಟೆಗೆ ತೆಗೆದುಕೊಂಡಿದೆ. 2014ರಿಂದ ದೇಶದಲ್ಲಿ ಕನಿಷ್ಠ 152 ಪ್ರಶ್ನೆಪತ್ರಿಕೆ ಸೋರಿಕೆ ಪ್ರಕರಣಗಳು ನಡೆದಿವೆ ಎಂದು ಕಾಂಗ್ರೆಸ್ ಆರೋಪಿಸಿದೆ. ಯುವಜನರ ಭವಿಷ್ಯಕ್ಕೆ ಧಕ್ಕೆ ತರುವ ಇಂತಹ ಸಮಸ್ಯೆಗಳ ವಿರುದ್ಧ ಹೋರಾಟ ಮುಂದುವರಿಸಲು ಸಭೆ ನಿರ್ಧರಿಸಿದೆ.




ಅಯೋಧ್ಯೆಯ ರಾಮಮಂದಿರದಲ್ಲಿ ದೇಣಿಗೆ ಕಳ್ಳತನದ ಆರೋಪಗಳ ಕುರಿತು ಸುಪ್ರೀಂ ಕೋರ್ಟ್ ಮೇಲ್ವಿಚಾರಣೆಯಲ್ಲಿ ಸ್ವತಂತ್ರ ತನಿಖೆ ನಡೆಸಬೇಕು ಎಂದು ಕಾಂಗ್ರೆಸ್ ಆಗ್ರಹಿಸಿದೆ. ಟ್ರಸ್ಟ್‌ನ ಹಣಕಾಸು ವ್ಯವಹಾರಗಳು ಹಾಗೂ ಆಸ್ತಿಗಳ ಸಮಗ್ರ ಲೆಕ್ಕಪರಿಶೋಧನೆ ನಡೆಸಬೇಕು ಎಂದು ಸಿಡ್ಬ್ಲ್ಯುಸಿ ಒತ್ತಾಯಿಸಿದೆ.

ಅರುಣಾಚಲ ಪ್ರದೇಶದಲ್ಲಿ ಚೀನಾದ ಪೀಪಲ್ಸ್ ಲಿಬರೇಶನ್ ಆರ್ಮಿ ಅತಿಕ್ರಮಣ ನಡೆಸಿದೆ ಎಂಬ ಆರೋಪಗಳ ಬಗ್ಗೆ ಕಾಂಗ್ರೆಸ್‌ಗೆ ಕಳವಳ ವ್ಯಕ್ತಪಡಿಸಿದೆ. ಭಾರತದ ಕೃಷಿ, ಇಂಧನ ಭದ್ರತೆ ಮತ್ತು ಕಾರ್ಯತಂತ್ರದ ಸಾರ್ವಭೌಮತ್ವವನ್ನು ಕೇಂದ್ರ ಸರ್ಕಾರ ದುರ್ಬಲಗೊಳಿಸುತ್ತಿದೆ ಎಂದು ಕಾಂಗ್ರೆಸ್ ಆರೋಪಿಸಿದೆ.

### ಹೈಕಮಾಂಡ್ ಜೊತೆಗೆ ಪ್ರತ್ಯೇಕ ಸಭೆ

**CWC ಸಭೆಗೆ ಆಗಮಿಸಿದ್ದ ಸಿಎಂ ಡಿಕೆ ಶಿವಕುಮಾರ್ ಮತ್ತು ಮಾಜಿ ಸಿಎಂ ಸಿದ್ದರಾಮಯ್ಯ ಜೊತೆಗೆ ಹೈಕಮಾಂಡ್ ನಾಯಕರು ಪ್ರತ್ಯೇಕ ಸಭೆ ನಡೆಸಿದರು. ಜಿಲ್ಲಾಧ್ಯಕ್ಷರ ನೇಮಕ ಸಂಬಂಧ ಉಭಯ ನಾಯಕರ ಅಭಿಪ್ರಾಯ ಸಂಗ್ರಹಿಸಿದರು. ಇದಲ್ಲದೇ ರಾಜ್ಯದ ವಿದ್ಯಾಮಾನಗಳ ಬಗ್ಗೆ ಚರ್ಚೆ ನಡೆಸಿದರು. ಈ ಬಗ್ಗೆ ಮಾತನಾಡಿದ ಸಿಎಂ ಡಿಕೆ ಶಿವಕುಮಾರ್ ಜಿಲ್ಲಾಧ್ಯಕ್ಷ ನೇಮಕ ಬಗ್ಗ ಚರ್ಚೆಯಾಗಿದೆ ನಮ್ಮ ಅಭಿಪ್ರಾಯ ಪಡೆದಿದ್ದು ಹೈಕಮಾಂಡ್ ಅಂತಿಮ ತಿರ್ಮಾನ ಕೈಗೊಳ್ಳಲಿದೆ ಕ್ಯಾಬಿನೆಟ್ ವಿಸ್ತರಣೆ ಬಗ್ಗೆ ಅಧಿವೇಶನದ ಬಳಿಕ ಚರ್ಚಿಸಲಾಗುವುದು ಎಂದರು.**

**ಇ20 ಹಾಗೂ ಮಹಿಳಾ ಮೀಸಲಾತಿಗೆ ಒತ್ತು:**

ಇ20 ಪೆಟ್ರೋಲ್ ಬಳಕೆಯಿಂದ ವಾಹನಗಳ ಮೈಲೇಜ್ ಕಡಿಮೆಯಾಗುವಿಕೆ, ವಾಹನಗಳ ಹೊಂದಾಣಿಕೆ ಮತ್ತು ಗ್ರಾಹಕರ ಆಯ್ಕೆಯ ಕುರಿತು ಉಂಟಾಗಿರುವ ಆತಂಕಗಳನ್ನು ಕೇಂದ್ರ ಸರ್ಕಾರ ಪರಿಹರಿಸಬೇಕು ಎಂದು ಅಫಅ ಒತ್ತಾಯಿಸಿದೆ. ಇದೇ ವೇಳೆ, ಮಹಿಳೆಯರಿಗೆ ಶೇ.33ರಷ್ಟು ಮೀಸಲಾತಿಯನ್ನು 2029ರ ಲೋಕಸಭಾ ಚುನಾವಣೆಯಿಂದಲೇ ಜಾರಿಗೆ ತರಬೇಕು ಎಂದು ಕಾಂಗ್ರೆಸ್ ಆಗ್ರಹಿಸಿದೆ.

ಸಭೆಯಲ್ಲಿ ಎಐಸಿಸಿ ಅಧ್ಯಕ್ಷ ಮಲ್ಲಿಕಾರ್ಜುನ್ ಖರ್ಗೆ, ಸೋನಿಯಗಾಂಧಿ, ರಾಹುಲ್ ಗಾಂಧಿ, ಸಿಎಂ ಡಿಕೆ ಶಿವಕುಮಾರ್ ಮಾಜಿ ಸಿಎಂ ಸಿದ್ದರಾಮಯ್ಯ ಸೇರಿದಂತೆ **CWC** ಸದಸ್ಯರು ಭಾಗಿಯಾಗಿದ್ದರು.

ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖೆ
ಕರ್ನಾಟಕ ವಿಶ್ವಕರ್ಮ ಸಮುದಾಯಗಳ ಅಭಿವೃದ್ಧಿ ನಿಗಮ ನಿಯಮಿತ


ಶ್ರೀ ಡಿ.ಕೆ. ಶಿವಕುಮಾರ್
ಸನ್ಮಾನ್ಯ ಮುಖ್ಯಮಂತ್ರಿಗಳು


ಡಾ. ಜಿ. ಪರಮೇಶ್ವರ
ಮಾನ್ಯ ಉಪ ಮುಖ್ಯಮಂತ್ರಿಗಳು

ಪ್ರಗತಿಪರ ಸಾಧನೆಗಳ ಸರದಾರ, ಸಾಮಾಜಿಕ ಪರಿವರ್ತನೆಯ ಹರಿಕಾರ
ಕರ್ನಾಟಕ ರಾಜ್ಯದ ಮಾಜಿ ಮುಖ್ಯಮಂತ್ರಿಗಳಾದ
ಡಿ. ದೇವರಾಜ ಅರಸು ಅವರ 111ನೇ ಜನ್ಮ ದಿನಾಚರಣೆ
ಹಾಗೂ ಡಿ. ದೇವರಾಜ ಅರಸು ಪ್ರಶಸ್ತಿ ಪ್ರದಾನ ಸಮಾರಂಭ
ಡಿ. ದೇವರಾಜ ಅರಸು ರವರ ಪ್ರತಿಮೆಗೆ ಮಾಲಾರ್ಪಣೆ
ದಿನಾಂಕ: 20.08.2026, ಗುರುವಾರ ಬೆಳಿಗ್ಗೆ: 10:30 ಗಂಟೆಗೆ | ಸ್ಥಳ: ವಿಧಾನಸೌಧ ಪಶ್ಚಿಮ ದ್ವಾರ
ಸಾರ್ವಜನಿಕ ಸಮಾರಂಭ
ಪೂರ್ವಾಹ್ನ: 11.00 ಗಂಟೆಗೆ | ಸ್ಥಳ: ವಿಧಾನಸೌಧದ ಬ್ಯಾಂಕ್ವೆಟ್ ಹಾಲ್



2026-27ನೇ ಸಾಲಿಗೆ ಅನುಷ್ಠಾನಗೊಳಿಸಲಾಗುವ ಯೋಜನೆಗಳು
- ಪಂಚವೃತ್ತಿ ಅಭಿವೃದ್ಧಿಗಾಗಿ ಆರ್ಥಿಕ ನೆರವು ಸಾಲ ಯೋಜನೆ
- ಸ್ವಯಂ ಉದ್ಯೋಗ ನೇರ ಸಾಲ ಯೋಜನೆ
- ಅರಿವು - ಶೈಕ್ಷಣಿಕ ಸಾಲ ಯೋಜನೆ
- ಗಂಗಾ ಕಲ್ಯಾಣ ನೀರಾವರಿ ಯೋಜನೆ
- ವಿದೇಶಿ ವ್ಯಾಸಂಗ ಯೋಜನೆ
- ಸ್ವಾತಂತ್ರ್ಯ ಅಮೃತ ಮಹೋತ್ಸವದ ಮುನ್ನಡೆ ಯೋಜನೆ
- ಸ್ವಾವಲಂಬಿ ಸಾರಥಿ (ನಾಲ್ಕು ಚಕ್ರಗಳ ವಾಹನ ಖರೀದಿಗೆ) ಸಹಾಯಧನ ಯೋಜನೆ


ಮಾನ್ಯ ಹಿಂದುಳಿದ ವರ್ಗಗಳ ಕಲ್ಯಾಣ ಹಾಗೂ ಕನ್ನಡ ಮತ್ತು ಸಂಸ್ಕೃತಿ ಇಲಾಖೆ ಸಚಿವರಾದ ಶ್ರೀ ಶಿವರಾಜ್ ಎಸ್.ತಂಗಡಗಿ ಅವರು ಇಲಾಖೆಯ ಪ್ರಗತಿ ಪರಿಶೀಲನಾ ಸಭೆಯಲ್ಲಿ ಭಾಗವಹಿಸಿರುವುದು.



ಸೇವಾ ಸಿಂಧು ತಂತ್ರಾಂಶದಲ್ಲಿ ಅರ್ಜಿ ಸಲ್ಲಿಸುವುದು ಕಡ್ಡಾಯ

ಸರ್ವರಿಗೂ ಆದರದ ಸುಸ್ವಾಗತ

"ನಮ್ಮ ವೈವಿಧ್ಯಮಯ ಸಂಸ್ಕೃತಿ ಮತ್ತು ಪರಂಪರೆಯನ್ನು ಗೌರವಿಸುವುದು ಮತ್ತು ಕಾಪಾಡುವುದು"
- ಪ್ರತಿಯೊಬ್ಬ ಭಾರತೀಯನ ಸಂವಿಧಾನಬದ್ಧ ಮೂಲಭೂತ ಕರ್ತವ್ಯ

ಭಾವನ ಎಸ್., ಕೆ.ಸಿ.ಎ.ಎಸ್.
ವ್ಯವಸ್ಥಾಪಕ ನಿರ್ದೇಶಕರು
ಕರ್ನಾಟಕ ವಿಶ್ವಕರ್ಮ ಸಮುದಾಯಗಳ ಅಭಿವೃದ್ಧಿ ನಿಗಮ ನಿಯಮಿತ

ಡಾ. ಎನ್.ವಿ.ಪ್ರಸಾದ್, ಭಾ.ಆ.ಸೇ.
ಸರ್ಕಾರದ ಕಾರ್ಯದರ್ಶಿಗಳು
ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖೆ

ಸುಜ್ಞಾನ ಮೂರ್ತಿ. ಪಿ
ಅಧ್ಯಕ್ಷರು
ಕರ್ನಾಟಕ ವಿಶ್ವಕರ್ಮ ಸಮುದಾಯಗಳ ಅಭಿವೃದ್ಧಿ ನಿಗಮ ನಿಯಮಿತ



# ರಾಜೀವ್ ಗಾಂಧಿ ಹಾದಿಯಲ್ಲಿ ರಾಹುಲ್ ಗಾಂಧಿ: ನವ ತಲೆಮಾರಿನ ರಾಜಕೀಯಕ್ಕೆ ಹೊಸ ದಿಕ್ಕು: ಡಾ. ಆನಂದ ಕುಮಾರ್



### ಎಐಸಿಸಿ ಎಸ್.ಸಿ ವಿಭಾಗದ ರಾಷ್ಟ್ರೀಯ ಸಂಯೋಜಕರು ಹಾಗೂ ಮಹಾರಾಷ್ಟ್ರ ಉಸ್ತುವಾರಿ

ರಾಜೀವ್‌ಗಾಂಧಿ ಆಧುನಿಕ ಭಾರತದ ನಿರ್ಮಾತೃ, ಪೈಲೆಟ್ ಆಗಿ, ತಂತ್ರಜ್ಞಾನಿ, ದೂರಸಂಪರ್ಕ ಕ್ರಾಂತಿಯ ಶಿಲ್ಪಿಯಾಗಿ, ರಾಜಕೀಯ ಮುತ್ಸದ್ದಿಯಾಗಿ ರಾಜಕಾರಣದಲ್ಲಿ ಹೆಗ್ಗುರುತುಗಳನ್ನು ಮೂಡಿಸಿದ ಮಹಾನ್ ಚೇತನ. ಇಂದು ಅವರ ಜನ್ಮದಿನ. ದೂರಸಂಪರ್ಕ ಕ್ಷೇತ್ರದಲ್ಲಿನ ಪರಿವರ್ತನೆ ಒಂದು ಮಹತ್ವದ ತಿರುವು. ದೂರವಾಣಿ ಸಂಪರ್ಕ ಪಡೆಯಲು ವರ್ಷಗಟ್ಟಲೆ ಕಾಯಬೇಕಾಗಿದ್ದ ಭಾರತ ಇಂದು ಮೊಬೈಲ್, ಇಂಟರ್‌ನೆಟ್, ಡಿಜಿಟಲ್ ಪಾವತಿ ಮತ್ತು ಕೃತಕ ಬುದ್ಧಿಮತ್ತೆಯ ಯುಗಕ್ಕೆ ತಲುಪಿದೆ. ಈ ಪರಿವರ್ತನೆಯ ಆರಂಭಿಕ ಬೀಜಗಳನ್ನು ಬಿತ್ತಿದವರು ಮಾಜಿ ಪ್ರಧಾನಿ ರಾಜೀವ್ ಗಾಂಧಿ.

1984ರಲ್ಲಿ ಪ್ರಧಾನಿಯಾದ ರಾಜೀವ್ ಗಾಂಧಿ, ಭಾರತವನ್ನು 21ನೇ ಶತಮಾನಕ್ಕೆ ಕೊಂಡೊಯ್ಯಬೇಕೆಂಬ ಹೆಬ್ಬಯಕೆ ಹೊಂದಿದ್ದರು. ವಿಜ್ಞಾನ, ತಂತ್ರಜ್ಞಾನ ಮತ್ತು ಆಧುನಿಕ ಸಂವಹನ ವ್ಯವಸ್ಥೆಗಳನ್ನು ದೇಶದ ಅಭಿವೃದ್ಧಿಯ ಪ್ರಮುಖ ಸಾಧನಗಳೆಂದು ಪರಿಗಣಿಸಿದರು. 1984ರಲ್ಲಿ ಸ್ಥಾಪನೆಯಾದ ಸಿ-ಡಾಟ್, ಸ್ವದೇಶಿ ದೂರಸಂಪರ್ಕ ತಂತ್ರಜ್ಞಾನ ಅಭಿವೃದ್ಧಿಗೆ ಪ್ರಮುಖ ವೇದಿಕೆಯಾಯಿತು. ಸ್ಯಾಮ್ ಪಿತ್ರೋಡಾ ಅವರಂತಹ ತಂತ್ರಜ್ಞರ ಸಹಕಾರದೊಂದಿಗೆ ಗ್ರಾಮೀಣ ಭಾರತಕ್ಕೂ ತಲುಪುವಂತಹ ದೂರವಾಣಿ ವ್ಯವಸ್ಥೆ ಅಭಿವೃದ್ಧಿಪಡಿಸುವ ಪ್ರಯತ್ನ ನಡೆಯಿತು. ದೇಶದೆಲ್ಲೆಡೆ ಸಾರ್ವಜನಿಕ ದೂರವಾಣಿ ಕೇಂದ್ರಗಳು, ಎಸ್.ಟಿ.ಡಿ, ಪಿಸಿಒ ವ್ಯವಸ್ಥೆ, ವೇಗವಾಗಿ ವಿಸ್ತರಿಸಿತು. ದೂರವಾಣಿ ಶ್ರೀಮಂತರ ಅಥವಾ ಸರ್ಕಾರಿ ಕಚೇರಿಗಳ ಸೌಲಭ್ಯವಲ್ಲ; ಸಾಮಾನ್ಯ ನಾಗರಿಕನಿಗೂ ಲಭ್ಯವಾಗಬೇಕೆಂಬ ಕಲ್ಪನೆ ಬಲಗೊಂಡಿತು. ಮೊಬೈಲ್ ಮತ್ತು ಇಂಟರ್‌ನೆಟ್ ಕ್ರಾಂತಿಗೆ ಅಗತ್ಯವಾದ




ಮೂಲಸೌಕರ್ಯ ನಿರ್ಮಾಣದ ಆರಂಭಿಕ ಹಂತ ಇದಾಗಿತ್ತು.

ರಾಜೀವ್ ಆಡಳಿತದಲ್ಲಿ ಕಂಪ್ಯೂಟರೀಕರಣಕ್ಕೂ ವಿಶೇಷ ಒತ್ತು ನೀಡಲಾಯಿತು. ಸರ್ಕಾರಿ ಕಚೇರಿಗಳು, ಬ್ಯಾಂಕಿಂಗ್, ರೈಲ್ವೆ, ಶಿಕ್ಷಣ ಸೇರಿದಂತೆ ಹಲವು ಕ್ಷೇತ್ರಗಳಲ್ಲಿ ಕಂಪ್ಯೂಟರ್ ಬಳಕೆಯ ಬಗ್ಗೆ ಚರ್ಚೆ ಮತ್ತು ಪ್ರಯೋಗಗಳು ವೇಗ ಪಡೆದವು. ಆದರೆ ಈ ಬದಲಾವಣೆ ವಿರೋಧವಿಲ್ಲದೇ ನಡೆಯಲಿಲ್ಲ. ಕಂಪ್ಯೂಟರ್‌ಗಳು ಉದ್ಯೋಗ ಕಸಿಯುತ್ತವೆ ಎಂಬ ಆತಂಕವೂ ವ್ಯಕ್ತವಾಯಿತು. ಕಂಪ್ಯೂಟರೀಕರಣಕ್ಕೆ ಬಿಜೆಪಿ ಪ್ರಬಲವಾಗಿ ವಿರೋಧ ವ್ಯಕ್ತಪಡಿಸಿತ್ತು. ಆಗ ಯುವ ರಾಜಕಾರಣಿಯಾಗಿದ್ದ ದಿವಂಗತ ಅನಂತ್ ಕುಮಾರ್ ಆನಂದ್ ರಾವ್ ವೃತ್ತದಲ್ಲಿ ಕಂಪ್ಯೂಟರ್ ಪ್ರತಿಕೃತಿ ದಹಿಸಿ ಹೋರಾಟ ಮಾಡಿದ್ದು ಈಗಲೂ ನಮ್ಮ ಕಣ್ಣ ಮುಂದಿದೆ. ಇಪ್ಪತ್ತುದರ ಭವಿಷ್ಯದ ಆರ್ಥಿಕತೆ ತಂತ್ರಜ್ಞಾನ ಆಧಾರಿತವಾಗಲಿದೆ ಎಂಬ ರಾಜೀವ್ ಗಾಂಧಿ ಅವರ ನಿಲುವು ಮುಂದುವರಿಯಿತು. ಭಾರತ ಜಾಗತಿಕ ಐಟಿ ಕ್ಷೇತ್ರದಲ್ಲಿ ಪ್ರಮುಖ ಶಕ್ತಿಯಾಗಿ ಹೊರಹೊಮ್ಮಿದ್ದು, ಆ ಕಾಲದ ತಂತ್ರಜ್ಞಾನ ಪರಿವರ್ತನೆಯ ಮಹತ್ವ ಇನ್ನಷ್ಟು ಸ್ಪಷ್ಟವಾಗಿಸಿದೆ.

1986ರ ರಾಷ್ಟ್ರೀಯ ಶಿಕ್ಷಣ ನೀತಿ ಮೂಲಕ ಶಿಕ್ಷಣ ವ್ಯವಸ್ಥೆಯನ್ನು ಆಧುನೀಕರಿಸಿದರು. ಜವಾಹರ್ ನವೋದಯ ವಿದ್ಯಾಲಯಗಳ ಮೂಲಕ ಗ್ರಾಮೀಣ ಪ್ರತಿಭಾವಂತರಿಗೆ ಗುಣಮಟ್ಟದ ಶಿಕ್ಷಣ ದೊರೆಯುವಂತೆ ಮಾಡಿದರು. ಜ್ಞಾನ, ವಿಜ್ಞಾನ ಮತ್ತು ಮಾನವ ಸಂಪನ್ಮೂಲಗಳ ಅಭಿವೃದ್ಧಿಯೂ ಆಗಬೇಕು ಎಂಬ ಚಿಂತನೆ ಅವರದ್ದಿತ್ತು. ಪಂಚಾಯತ್ ರಾಜ್ ಸಂಸ್ಥೆಗಳಿಗೆ ಹೆಚ್ಚಿನ ಅಧಿಕಾರ ನೀಡಿದರು. ಸ್ಥಳೀಯ ಸಂಸ್ಥೆಗಳಿಗೆ ಸಾಂವಿಧಾನಿಕ ಸ್ಥಾನಮಾನ ನೀಡುವ ಪ್ರಯತ್ನಕ್ಕೆ ಮುಂದಾದರು. ರಾಜೀವ್ ಗಾಂಧಿ ಅವರ ರಾಜಕೀಯ ಜೀವನ ಅಲ್ಪಾವಧಿಯದ್ದಾಗಿದ್ದರೂ, ಅವರ ಪ್ರಭಾವ ದೀರ್ಘಕಾಲ ಉಳಿಯಲಿದೆ.

ನೆಹರೂ?ಗಾಂಧಿ ಕುಟುಂಬದ ಹಲವು ನಾಯಕರು ತಮ್ಮದೇ ಆದ ಛಾಪು ಮೂಡಿಸುತ್ತಿದ್ದಾರೆ. ಲೋಕಸಭೆಯ ಪ್ರತಿಪಕ್ಷ ನಾಯಕ ರಾಹುಲ್ ಗಾಂಧಿ, ಬದಲಾಗುತ್ತಿರುವ ಭಾರತದ ಪ್ರಶ್ನೆಗಳನ್ನು ಹೊಸ ರೀತಿಯಲ್ಲಿ ಮುನ್ನೆಲೆಗೆ ತರುತ್ತಿದ್ದಾರೆ. ರಾಜೀವ್ ಗಾಂಧಿ ಮತ್ತು ರಾಹುಲ್ ಗಾಂಧಿ ಅವರ ರಾಜಕೀಯ ಕಾಲಘಟ್ಟಗಳು ವಿಭಿನ್ನ. ರಾಹುಲ್ ಗಾಂಧಿ ಎದುರಿಸುತ್ತಿರುವ ಭಾರತ ಡಿಜಿಟಲ್ ಕ್ರಾಂತಿ, ಕೃತಕ ಬುದ್ಧಿಮತ್ತೆ, ನಿರುದ್ಯೋಗ, ಸಾಮಾಜಿಕ ಅಸಮಾನತೆ, ಶಿಕ್ಷಣದ ಒತ್ತಡ ಮತ್ತು ಪ್ರಜಾಪ್ರಭುತ್ವದ ಸಂಸ್ಥೆಗಳ ಕುರಿತ ಆತಂಕಗಳ ಭಾರತ. ಹೀಗಾಗಿ ತಂದೆಯ ಹಾದಿಯನ್ನು ಅನುಸರಿಸುವುದು ಎಂದರೆ ಅದೇ ರಾಜಕೀಯವನ್ನು ಪುನರಾವರ್ತಿಸುವುದಲ್ಲ; ಆ ಕಾಲದ ಆಧುನಿಕತೆಯ ಕನಸನ್ನು ಇಂದಿನ ಸಮಸ್ಯೆಗಳಿಗೆ ಹೊಂದಿಸುವುದಾಗಿದೆ.

ಉದ್ಯೋಗ, ಶಿಕ್ಷಣ, ಪರೀಕ್ಷಾ ವ್ಯವಸ್ಥೆ, ಸಾಮಾಜಿಕ ನ್ಯಾಯ, ಯುವಜನರ ಭವಿಷ್ಯ ಮತ್ತು ಆರ್ಥಿಕ ಅವಕಾಶಗಳ ವಿಚಾರಗಳಲ್ಲಿ ನಿರಂತರವಾಗಿ ಹೋರಾಟ ಮಾಡುತ್ತಿದ್ದಾರೆ. ರಾಜೀವ್ ಗಾಂಧಿ ಲೋಕಸಭೆಯ ಪ್ರತಿಪಕ್ಷ ನಾಯಕರಾಗಿದ್ದರು. ರಾಹುಲ್ ಗಾಂಧಿ ಇಂದು ಪ್ರತಿಪಕ್ಷದ ಮುಖವಾಣಿ ನಿಂತಿದ್ದಾರೆ.

ಪ್ರತಿಪಕ್ಷದ ಜವಾಬ್ದಾರಿ ಎಂದರೆ ಸರ್ಕಾರವನ್ನು ವಿರೋಧಿಸುವುದಷ್ಟೇ ಅಲ್ಲ. ಜನರ ಸಮಸ್ಯೆಗಳನ್ನು ಪ್ರತಿಧ್ವನಿಸುವುದು, ಪರ್ಯಾಯ ನೀತಿಗಳನ್ನು ಮುಂದಿಡುವುದು ಮತ್ತು ಅಧಿಕಾರದಲ್ಲಿರುವವರನ್ನು ಹೊಣೆಗಾರರನ್ನಾಗಿ ಮಾಡುವುದು ಪ್ರತಿಪಕ್ಷದ ಕರ್ತವ್ಯ. ರಾಹುಲ್ ಗಾಂಧಿ ತಮ್ಮ ಪಾತ್ರವನ್ನು ಹೆಚ್ಚು ಸಕ್ರಿಯವಾಗಿ ನಿರ್ವಹಿಸುತ್ತಿದ್ದಾರೆ.

ತಂದೆಯ ತಂತ್ರಜ್ಞಾನ, ಮಗನ ತಂತ್ರಜ್ಞಾನ ರಾಜಕೀಯ ಗಮನಾರ್ಹವಾದದ್ದು. ರಾಜೀವ್ ಗಾಂಧಿ ಮತ್ತು ರಾಹುಲ್ ಗಾಂಧಿ ಇಬ್ಬರಲ್ಲೂ ಯುವಜನತೆಯ ಮೇಲೆ ನಂಬಿಕೆ, ಬದಲಾವಣೆಯ ಅಗತ್ಯ ಮತ್ತು ಭವಿಷ್ಯದ ಭಾರತ ಕುರಿತು ಚಿಂತನೆ ಎಂಬ ಸಾಮ್ಯತೆಯನ್ನು ಗುರುತಿಸಬಹುದು.

ರಾಹುಲ್ ಗಾಂಧಿ?ಸಾಮಾನ್ಯ ಜನರೊಂದಿಗೆ ಸಂಪರ್ಕ?ಕ್ಕೆ ಒತ್ತು ನೀಡಿದ್ದಾರೆ. ವಿದ್ಯಾರ್ಥಿಗಳು, ಯುವಕರು, ರೈತರು, ಕಾರ್ಮಿಕರು ಮತ್ತು ಅಂಚಿನ ಸಮುದಾಯಗಳ ಸಮಸ್ಯೆಗಳನ್ನು ನೇರವಾಗಿ ಆಲಿಸುವ ರಾಜಕೀಯ ಶೈಲಿಯನ್ನು ಅವರು ರೂಪಿಸಿಕೊಂಡಿದ್ದಾರೆ. ಜನ ಸಾಮಾನ್ಯರ ಜೊತೆ ಬೆರೆಯಲು ರಾಹುಲ್ ಗಾಂಧಿ ಭಾರತ್ ಜೋಡೋ ಯಾತ್ರೆಯನ್ನು ಯಶಸ್ವಿಯಾಗಿ ನಡೆಸಿದರು.

ರಾಜೀವ್ ಭಾರತವನ್ನು 21ನೇ ಶತಮಾನದ ಬಾಗಿಲಿಗೆ ಕೊಂಡೊಯ್ಯು ಪ್ರಯತ್ನಿಸಿದರೆ, ರಾಹುಲ್ 21ನೇ ಶತಮಾನದ ಭಾರತ ಯಾರಿಗಾಗಿ ಎಂಬುದನ್ನು ಪರಿಣಾಮಕಾರಿಯಾಗಿ ಮುಂದಿಡುತ್ತಿದ್ದಾರೆ. ತಂದೆ ತಂತ್ರಜ್ಞಾನ ಕ್ರಾಂತಿಯ ಮೂಲಕ ಭಾರತವನ್ನು ಬದಲಿಸಲು ಕನಸು ಕಂಡಿದ್ದರು; ಮಗ ಜನರ ಧ್ವನಿ, ಸಾಮಾಜಿಕ ನ್ಯಾಯ ಮತ್ತು ಪ್ರಜಾಪ್ರಭುತ್ವದ ಹೊಣೆಗಾರಿಕೆಯ ಮೂಲಕ ಹೊಸ ಭಾರತದ ರಾಜಕೀಯವನ್ನು ರೂಪಿಸುವ ಹಾದಿಯಲ್ಲಿದ್ದಾರೆ.

# ಮಧ್ಯಾಹ್ನದ ಬಿಸಿಯೂಟದಲ್ಲಿ ಉಪ್ಪು ಬದಲು ಡಿಟರ್ಜೆಂಟ್ ಬಳಕೆ; ಬಿಹಾರದಲ್ಲಿ 36 ಮಕ್ಕಳು ಅಸ್ವಸ್ಥ



**ಪಾಟ್ನಾ, ಆ.19–** ಶಾಲೆಯ ಬಿಸಿಯೂಟದಲ್ಲಿ ಉಪ್ಪಿನ ಬದಲು ಡಿಟರ್ಜೆಂಟ್ ಪೌಡರ್ ಸೇರಿಸಿದ ಪರಿಣಾಮ 36 ವಿದ್ಯಾರ್ಥಿನಿಯರು ಅಸ್ವಸ್ಥರಾದ ಆಘಾತಕಾರಿ ಘಟನೆ ಬಿಹಾರದ ನಳಂದ ಜಿಲ್ಲೆಯಲ್ಲಿ ನಡೆದಿದೆ.

ನಳಂದದ ನೂರ್ಸರೈ ಪೊಲೀಸ್ ಠಾಣೆ ವ್ಯಾಪ್ತಿಯ ಪರಾಸಿಯ ಮಿಡಲ್ ಸ್ಕೂಲ್‌ನಲ್ಲಿ ಮಂಗಳವಾರ ಮಧ್ಯಾಹ್ನ ಈ ಘಟನೆ ನಡೆದಿದೆ. ಬಿಸಿಯೂಟ ಸೇವಿಸಿದ ಬಳಿಕ ಹಲವು ವಿದ್ಯಾರ್ಥಿಗಳಿಗೆ ತಲೆತಿರುಗುವಿಕೆ ಹಾಗೂ ವಾಂತಿ ಕಾಣಿಸಿಕೊಂಡಿದೆ.

ವಿದ್ಯಾರ್ಥಿಗಳ ಆರೋಗ್ಯದಲ್ಲಿ ಸುಧಾರಣೆ ಕಾಣದ ಹಿನ್ನೆಲೆಯಲ್ಲಿ ಅವರನ್ನು ಬಿಹಾರ್‌ಶರೀಫ್ ಸದರ್ ಆಸ್ಪತ್ರೆಗೆ ದಾಖಲಿಸಲಾಗಿದೆ. ಸದ್ಯ ಎಲ್ಲಾ ಮಕ್ಕಳ ಆರೋಗ್ಯ ಸ್ಥಿರವಾಗಿದ್ದು, ಅಪಾಯದಿಂದ ಪಾರಾಗಿದ್ದಾರೆ ಎಂದು ಅಧಿಕಾರಿಗಳು ತಿಳಿಸಿದ್ದಾರೆ.

**ಉಪ್ಪಿನ ಬದಲು ಡಿಟರ್ಜೆಂಟ್**

ಶಾಲೆಯ ಬಿಸಿಯೂಟದಲ್ಲಿ ಸೋಯಾಬೀನ್ ಅಕ್ಕಿಯನ್ನು ನೀಡಲಾಗಿತ್ತು. ಊಟದಲ್ಲಿ ಉಪ್ಪಿನ ಕೊರತೆ ಇದೆ ಎಂದು ಕೆಲವರು ಗಮನಿಸಿದ ಬಳಿಕ ಘಟನೆ ಬೆಳಕಿಗೆ ಬಂದಿದೆ. ಅಡುಗೆಮನೆಯಲ್ಲಿ ಉಪ್ಪು ಮತ್ತು ಡಿಟರ್ಜೆಂಟ್ ಪೌಡರ್ ಅನ್ನು ಒಂದೇ ಸ್ಥಳದಲ್ಲಿ ತಪ್ಪಾಗಿ ಇಡಲಾಗಿತ್ತು ಎನ್ನಲಾಗಿದೆ.

ಅಡುಗೆಯವರು ಡಿಟರ್ಜೆಂಟ್ ಪೌಡರ್ ಅನ್ನು ಉಪ್ಪು ಎಂದು ತಪ್ಪಾಗಿ ಭಾವಿಸಿ ಆಹಾರಕ್ಕೆ ಸೇರಿಸಿದ್ದಾರೆ ಎಂದು ಸ್ಥಳೀಯರು ತಿಳಿಸಿದ್ದಾರೆ.

ಊಟ ಮಾಡಿದ ಕೆಲವೇ ಸಮಯದಲ್ಲಿ ವಿದ್ಯಾರ್ಥಿಗಳು ಅಸ್ವಸ್ಥರಾಗಿದ್ದು, ಮೊದಲು ಶಾಲೆಯಲ್ಲೇ ಪ್ರಥಮ ಚಿಕಿತ್ಸೆ ನೀಡಲಾಗಿದೆ. ಬಳಿಕ ಹೆಚ್ಚಿನ ಚಿಕಿತ್ಸೆಗಾಗಿ ಆಸ್ಪತ್ರೆಗೆ ಕರೆದೊಯ್ಯಲಾಗಿದೆ.

**ಅಧಿಕಾರಿಗಳಿಂದ ಪರಿಶೀಲನೆ**

ಸಿವಿಲ್ ಸರ್ಜನ್ ಡಾ. ಜಯ ಪ್ರಕಾಶ್ ಸಿಂಗ್ ಆಸ್ಪತ್ರೆಗೆ ಭೇಟಿ ನೀಡಿ ವಿದ್ಯಾರ್ಥಿಗಳ ಆರೋಗ್ಯದ ಬಗ್ಗೆ ಮಾಹಿತಿ ಪಡೆದಿದ್ದಾರೆ. ಎಲ್ಲಾ ಮಕ್ಕಳು ಅಪಾಯದಿಂದ ಪಾರಾಗಿದ್ದಾರೆ ಎಂದು ತಿಳಿಸಿದ್ದಾರೆ.

ಬಿಹಾರ ಗ್ರಾಮೀಣಾಭಿವೃದ್ಧಿ ಸಚಿವ ಶ್ರವಣ್ ಕುಮಾರ್ ಕೂಡ ಆಸ್ಪತ್ರೆಗೆ ಭೇಟಿ ನೀಡಿ ವಿದ್ಯಾರ್ಥಿಗಳನ್ನು ಭೇಟಿಯಾಗಿದ್ದಾರೆ. ವೈದ್ಯರಿಂದ ಮಕ್ಕಳ ಆರೋಗ್ಯದ ಬಗ್ಗೆ ಮಾಹಿತಿ ಪಡೆದಿದ್ದಾರೆ.

ಬಿಸಿಯೂಟ ತಯಾರಿಕೆ ಮತ್ತು ವಿತರಣೆಯಲ್ಲಿ ಈ ರೀತಿಯ ಲೋಪ ಹೇಗೆ ಸಂಭವಿಸಿತು ಎಂಬುದರ ಕುರಿತು ವಿವರವಾದ ತನಿಖೆ ನಡೆಸಲಾಗುವುದು ಎಂದು ಸಚಿವರು ತಿಳಿಸಿದ್ದಾರೆ.

# ತರುಣ್ ತೇಜಪಾಲ್‌ಗೆ ಜೀವಾವಧಿ ಶಿಕ್ಷೆ ವಿಧಿಸಿ ಸುಪ್ರೀಂಕೋರ್ಟ್‌ಗೆ ಗೋವಾ ಸರ್ಕಾರ ಮೇಲ್ಮನವಿ



**ನವದೆಹಲಿ, ಆ. 19:** ಕಿರಿಯ ಸಹೋದ್ಯೋಗಿ ಮೇಲಿನ ಅತ್ಯಾಚಾರ ಪ್ರಕರಣದಲ್ಲಿ ತೆಹಲ್ಕಾ ಪತ್ರಿಕೆಯ ಸಂಸ್ಥಾಪಕ ತರುಣ್ ತೇಜಪಾಲ್ ಅವರಿಗೆ ಬಾಂಬೆ ಹೈಕೋರ್ಟ್ ವಿಧಿಸಿರುವ 10 ವರ್ಷಗಳ ಕಠಿಣ ಜೈಲು ಶಿಕ್ಷೆಯನ್ನು ಹೆಚ್ಚಿಸಿ, ಅವರಿಗೆ ಜೀವಾವಧಿ ಕಾರಾಗೃಹ ಶಿಕ್ಷೆ ವಿಧಿಸಬೇಕೆಂದು ಕೋರಿ ಗೋವಾ ಸರ್ಕಾರವು ಸುಪ್ರೀಂ ಕೋರ್ಟ್‌ಗೆ ಮೇಲ್ಮನವಿ ಸಲ್ಲಿಸಿದೆ.

ತೇಜ್ಪಾಲ್ಗೆ ವಿಧಿಸಲಾಗಿರುವ 10 ವರ್ಷಗಳ ಜೈಲು ಶಿಕ್ಷೆಯು ಅಪರಾಧದ ಗಂಭೀರತೆಗೆ ತಕ್ಕುದಾಗಿಲ್ಲ ಹಾಗೂ ತೀರಾ ಅಸಮರ್ಪಕವಾಗಿದೆ ಎಂದು ಗೋವಾ ಸರ್ಕಾರ ತನ್ನ ಅರ್ಜಿಯಲ್ಲಿ ಪ್ರತಿಪಾದಿಸಿದೆ. ಸಂಸ್ಥೆಯ ಮುಖ್ಯಸ್ಥ, ಮಾರ್ಗದರ್ಶಕ ಹಾಗೂ ವಿಶ್ವಾಸಾರ್ಹ ವ್ಯಕ್ತಿಯ ಸ್ಥಾನದಲ್ಲಿದ್ದು ಕೊಂಡು ತೇಜ್ಪಾಲ್ ತಮ್ಮ ಅಧಿಕಾರ ವನ್ನು ದುರುಪಯೋಗಪಡಿಸಿಕೊಂಡು ಈ ಕೃತ್ಯ ಎಸಗಿದ್ದಾರೆ. ಈ ಎಲ್ಲಾ ಗಂಭೀರ ಸನ್ನಿವೇಶಗಳನ್ನು ಒಟ್ಟಾರೆ ಯಾಗಿ ಪರಿಗಣಿಸುವಲ್ಲಿ ಹೈಕೋರ್ಟ್ ವಿಫಲವಾಗಿದೆ ಎಂದು ಸರ್ಕಾರ ಆಕ್ಷೇಪಿಸಿದೆ. ಅಲ್ಲದೆ, ಎರಡು ಪ್ರತ್ಯೇಕ ಘಟನೆಗಳಿಗೆ ಏಕಕಾಲದಲ್ಲಿ ಶಿಕ್ಷೆ ಅನುಭವಿಸಲು ಅವಕಾಶ ನೀಡಿರುವುದನ್ನು ವಿರೋಧಿಸಿರುವ ಸರ್ಕಾರ, ಘಟನೆ ನಡೆದು 13 ವರ್ಷಗಳಾಗಿವೆ ಎಂಬ ಕಾರಣಕ್ಕೆ ಶಿಕ್ಷೆಯ ಪ್ರಮಾಣವನ್ನು ತಗ್ಗಿಸಲು ಸಾಧ್ಯವಿಲ್ಲ ಎಂದು ಸ್ಪಷ್ಟಪಡಿಸಿದೆ.

2013ರಲ್ಲಿ ಗೋವಾದ ರೆಸಾರ್ಟ್ ಒಂದರಲ್ಲಿ ಪತ್ರಿಕೆಯ ವತಿಯಿಂದ ಆಯೋಜಿಸಲಾಗಿದ್ದ ಕಾರ್ಯಕ್ರಮದ ವೇಳೆ ಹೋಟೆಲ್ ಲಿಫ್ಟ್ ಒಳಗೆ ಕಿರಿಯ ಸಹೋದ್ಯೋಗಿಯ ಮೇಲೆ ಲೈಂಗಿಕ ದೌರ್ಜನ್ಯ ಎಸಗಿದ ಆರೋಪ ತೇಜಪಾಲ್ (62) ಮೇಲಿತ್ತು. ಈ ಪ್ರಕರಣದಲ್ಲಿ 2021ರಲ್ಲಿ ವಿಚಾರಣಾ ನ್ಯಾಯಾಲಯವು ತೇಜ್ಪಾಲ್ ಅವರನ್ನು ಖುಲಾಸೆಗೊಳಿಸಿ ತೀರ್ಪು ನೀಡಿತ್ತು. ಆದರೆ, ವಿಚಾರಣಾ ನ್ಯಾಯಾಲಯದ ತೀರ್ಪನ್ನು 'ದೋಷಪೂರಿತ' ಎಂದು ತರಾಟೆಗೆ ತೆಗೆದುಕೊಂಡಿದ್ದ ಬಾಂಬೆ ಹೈಕೋರ್ಟ್ನ ಗೋವಾ ಪೀಠವು, ಆಗಸ್ಟ್ 6ರಂದು ಕೆಳಹಂತದ ನ್ಯಾಯಾಲಯದ ಆದೇಶವನ್ನು ರದ್ದುಪಡಿಸಿ ತೇಜಪಾಲ್ ಅವರನ್ನು ತಪ್ಪಿತಸ್ಥರೆಂದು ಘೋಷಿಸಿತ್ತು. ಜತೆಗೆ 10 ವರ್ಷಗಳ ಕಠಿಣ ಜೈಲು ಶಿಕ್ಷೆ ವಿಧಿಸಿ, ನಾಲ್ಕು ವಾರಗಳ ಒಳಗಾಗಿ ಪೊಲೀಸರಿಗೆ ಶರಣಾಗುವಂತೆ ಆದೇಶಿಸಿತ್ತು.

ಮತ್ತೊಂದೆಡೆ, ತಮ್ಮನ್ನು ರಾಜಕೀಯ ಸಂತ್ರಸ್ತ ಎಂದು ಹೇಳಿಕೊಂಡಿರುವ ತೇಜಪಾಲ್, ಹೈಕೋರ್ಟ್ ತೀರ್ಪನ್ನು ಪ್ರಶ್ನಿಸಿ ಸುಪ್ರೀಂಕೋರ್ಟ್ ಮೆಟ್ಟಿಲೇರುವುದಾಗಿ ತಿಳಿಸಿದ್ದಾರೆ. ಶಿಕ್ಷೆ ಪ್ರಕಟಣೆಯ ಸಂದರ್ಭದಲ್ಲಿ ನ್ಯಾಯಾಲಯದಲ್ಲಿ ಹಾಜರಿದ್ದ ಅವರು, ತಮ್ಮ 62 ವರ್ಷ ವಯಸ್ಸು ಹಾಗೂ ಕುಟುಂಬದ ಹಿನ್ನೆಲೆಯನ್ನು ಪರಿಗಣಿಸಿ ಶಿಕ್ಷೆಯಲ್ಲಿ ರಿಯಾಯಿತಿ ನೀಡುವಂತೆ ಮನವಿ ಮಾಡಿದ್ದರು.

ಇದೀಗ ತೇಜಪಾಲ್ ಸಲ್ಲಿಸಲಿರುವ ಮೇಲ್ಮನವಿ ಹಾಗೂ ಶಿಕ್ಷೆಯ ಪ್ರಮಾಣವನ್ನು ಜೀವಾವಧಿಗೆ ಹೆಚ್ಚಿಸುವಂತೆ ಗೋವಾ ಸರ್ಕಾರ ಸಲ್ಲಿಸಿರುವ ಅರ್ಜಿಯನ್ನು ಸುಪ್ರೀಂ ಕೋರ್ಟ್ ವಿಚಾರಣೆ ನಡೆಸಲಿದೆ.

# ಗೃಹಲಕ್ಷ್ಮಿ ಫಲಾನುಭವಿಗಳ ಅರ್ಜಿ ಮರುಪರಿಶೀಲನೆ: ಸಿಎಂ ಡಿಕೆ.ಶಿವಕುಮಾರ್



**ಬೆಂಗಳೂರು, ಆ.19:** ರಾಜ್ಯ ಸರ್ಕಾರದ ಮಹತ್ವಾಕಾಂಕ್ಷಿ ಗೃಹಲಕ್ಷ್ಮಿ ಯೋಜನೆ ಫಲಾನುಭವಿಗಳ ಅರ್ಜಿ ಮರುಪರಿಶೀಲನೆಗಾಗಿ ಸೇವಾ ಸಿಂಧು ಕೇಂದ್ರಗಳು ಹಾಗೂ ಮನೆ–ಮನೆ ಸಮೀಕ್ಷೆಯ ಮೂಲಕ ಕ್ರಮ ಕೈಗೊಳ್ಳಲಾಗುವುದು ಎಂದು ಮುಖ್ಯಮಂತ್ರಿ ಡಿ.ಕೆ.ಶಿವಕುಮಾರ್ ತಿಳಿಸಿದ್ದಾರೆ.

ಗ್ಯಾರಂಟಿ ಯೋಜನೆಗಳ ಅನುಷ್ಠಾನ ಪ್ರಾಧಿಕಾರದ ಉಪಾಧ್ಯಕ್ಷ ಹಾಗೂ ಶಾಸಕ ದಿನೇಶ್ ಗೂಳಿಗೌಡ ಪ್ರಶ್ನೆಗೆ ಉತ್ತರಿಸಿದ ಅವರು, ಮರುಪರಿಶೀಲನೆ ಪ್ರಕ್ರಿಯೆಯಲ್ಲಿ ಫಲಾನುಭವಿಗಳ ಬಯೊಮೆಟ್ರಿಕ್/ಫೇಸ್ ಆಥೆಂಟಿಕೇಶನ್ ಪಡೆಯಲು ಅವಕಾಶ ಕಲ್ಪಿಸಲಾಗಿದೆ.

■ **ಸೇವಾ ಸಿಂಧು ಕೇಂದ್ರ ಹಾಗೂ ಮನೆ–ಮನೆ ಸಮೀಕ್ಷೆ ಮೂಲಕ ಮಾಹಿತಿ ಸಂಗ್ರಹ**

ಇದೇ ಉದ್ದೇಶಕ್ಕಾಗಿ ಇ–ಡಿಸಿಎಸ್ ಮೂಲಕ ಮೊಬೈಲ್ ಆಪ್ ಹಾಗೂ ವೆಬ್ ಅಪ್ಲಿಕೇಶನ್ ಅಭಿವೃದ್ಧಿಪಡಿಸಲಾಗಿದ್ದು, ಅಂತಿಮ ಪರಿಶೀಲನಾ ಹಂತದಲ್ಲಿದೆ ಎಂದು ಸ್ಪಷ್ಟಪಡಿಸಿದ್ದಾರೆ.

ಗೃಹಲಕ್ಷ್ಮಿ ಯೋಜನೆಗಾಗಿ ರಾಜ್ಯ ಸರ್ಕಾರ ಇದುವರೆಗೂ 76,951ಕೋಟಿ ರೂ. ಪಾವತಿ ಮಾಡಿದೆ. ಗೃಹಲಕ್ಷ್ಮಿ ಯೋಜನೆಯಡಿ ಒಟ್ಟು 1,24,48,938 ಫಲಾನುಭವಿಗಳಿದ್ದಾರೆ. ಪ್ರತಿ ಮನೆಯ ಯಜಮಾನಿಗೆ ಇದುವರೆಗೂ 32 ಕಂತುಗಳಲ್ಲಿ ತಲಾ 2000 ರೂ.ಗಳನ್ನು ನೇರವಾಗಿ ಬ್ಯಾಂಕ್ ಖಾತೆಗೆ ಜಮೆ ಮಾಡಲಾಗಿದೆ. ಯೋಜನೆ ಆರಂಭವಾದಾಗಿನಿಂದ ಜೂನ್–2026ರ ಅಂತ್ಯದವರೆಗೆ ಒಟ್ಟು 3,13,297 ಫಲಾನುಭವಿಗಳು ಮರಣ ಹೊಂದಿದ್ದಾರೆ. ಈ ಪೈಕಿ 1,10,562 ಫಲಾನುಭವಿಗಳ ಖಾತೆಗೆ ಮರಣಾ ನಂತರವೂ ರೂ.117.31 ಕೋಟಿ ರೂ. ಹಣ ಜಮೆಯಾಗಿದ್ದು, ಈ ಪೈಕಿ ಈವರೆಗೆ 40.07 ಕೋಟಿ ರೂ. ಹಣಮಾತ್ರ ಸರ್ಕಾರದ ಲೆಕ್ಕಶೀರ್ಷಿಕೆಗೆ ಮರುಜಮೆಯಾಗಿದೆ ಎಂದು ಹೇಳಿದ್ದಾರೆ.

## ಯೋಜನೆ ದುರುಪಯೋಗ ತಡೆಯಲು ಮರುಪರಿಶೀಲನೆ: ದಿನೇಶ್ ಗೂಳಿಗೌಡ



ಗೃಹಲಕ್ಷ್ಮಿ ಯೋಜನೆಯಡಿ ನೋಂದಾಯಿತರಾದವರಲ್ಲಿ 3,13,297 ಫಲಾನುಭವಿಗಳು ಮೃತಪಟ್ಟಿದ್ದಾರೆ. ಅವರ ಖಾತೆಗೆ 117.31 ಕೋಟಿ ರೂ. ಹಣ ಜಮೆಯಾಗಿದೆ. ಯೋಜನೆಯಲ್ಲಿ ಹಣ ದುರುಪಯೋಗ ಆಗುತ್ತಿರುವುದು ಸರ್ಕಾರದ ಗಮನಕ್ಕೆ ಬಂದ ಹಿನ್ನೆಲೆಯಲ್ಲಿ ಮುಖ್ಯಮಂತ್ರಿಗಳು ಯೋಜನೆ ಮರುಪರಿಶೀಲನೆ ನಡೆಸಿ ಅರ್ಹರಿಗೆ ಯೋಜನೆಯ ಸದುಪಯೋಗ ಆಗಬೇಕೆಂದು ಹೇಳಿದ್ದಾರೆ ಎಂದು ಗ್ಯಾರಂಟಿ ಯೋಜನೆಗಳ ಅನುಷ್ಠಾನ ಪ್ರಾಧಿಕಾರದ ಉಪಾಧ್ಯಕ್ಷ ದಿನೇಶ್ ಗೂಳಿಗೌಡ ದಿನೇಶ್ ಗೂಳಿಗೌಡ ಹೇಳಿದ್ದಾರೆ. ಮರಣ ಹೊಂದಿದವರಿಗೆ ಪರ್ಯಾಯವಾಗಿ ಕುಟುಂಬದ ಇತರ ಸದಸ್ಯರನ್ನು ಫಲಾನುಭವಿಯಾಗಿ ಸೇರಿಸುವ ಪ್ರಕ್ರಿಯೆ ನಡೆಯುತ್ತಿದೆ. ಮೃತರ ಖಾತೆಗೆ ಜಮೆಯಾಗಿದ್ದ ಹಣ ವಾಪಸ್ ಪಡೆಯುವ ಪ್ರಕ್ರಿಯೆ ಕೂಡ ಜಿಲ್ಲಾವಾರು ನಡೆಯುತ್ತಿದೆ ಎಂದು ತಿಳಿಸಿದ್ದಾರೆ.

# ಟೆಲಿಪ್ರಾಂಪ್ಟರ್ ಇಲ್ಲದೇ "ವಂದೇ ಮಾತರಂ" ಹಾಡಿದರೆ ಮೋದಿಯನ್ನು ಸನ್ಮಾನಿಸುವೆ: ಆಪ್ ಸಂಸದ ಸಂಜಯ್‌ಸಿಂಗ್ ಸವಾಲು



**ನವದೆಹಲಿ, ಆ.19:** ಪ್ರಧಾನಿ ನರೇಂದ್ರ ಮೋದಿ ಅವರು ಟೆಲಿಪ್ರಾಂಪ್ಟರ್ ಬಳಸದೆ ಸಂಪೂರ್ಣ ವಂದೇ ಮಾತರಂ ಹಾಡಿದರೆ ಅವರನ್ನು ಸನ್ಮಾನಿಸುವುದಾಗಿ ಆಮ್ ಆದ್ಮಿ ಪಕ್ಷದ (ಎಎಪಿ) ಹಿರಿಯ ನಾಯಕ ಹಾಗೂ ರಾಜ್ಯಸಭಾ ಸದಸ್ಯ ಸಂಜಯ್ ಸಿಂಗ್ ಸವಾಲು ಹಾಕಿದ್ದಾರೆ.

ಬಿಜೆಪಿ ದೇಶಭಕ್ತಿ ಕುರಿತು ಮಾತನಾಡುತ್ತಿರುವುದನ್ನು ಪ್ರಶ್ನಿಸಿದ ಸಂಜಯ್ ಸಿಂಗ್, ವಂದೇ ಮಾತರಂ ಘೋಷಣೆ ಕೂಗಿದ್ದಕ್ಕಾಗಿ ಜೈಲು ಸೇರಿದ ಬಿಜೆಪಿಯ ನಾಲ್ವರು ಪೂರ್ವಜರ ಹೆಸರನ್ನು ಹೇಳುವಂತೆ ಸವಾಲು ಹಾಕಿದರು. ಬಿಜೆಪಿಗೆ ಅಂತಹ ನಾಲ್ಕು ಹೆಸರುಗಳನ್ನೂ ಹೇಳಲು ಸಾಧ್ಯವಿಲ್ಲ ಎಂದು ಅವರು ಟೀಕಿಸಿದರು.

ಕ್ವಿಟ್ ಇಂಡಿಯಾ ಚಳವಳಿಯನ್ನು ಹತ್ತಿಕ್ಕುವಂತೆ ಶ್ಯಾಮಪ್ರಸಾದ್ ಮುಖರ್ಜಿ ಬ್ರಿಟಿಷ್ ಗವರ್ನರ್‌ಗೆ ಏಕೆ ಪತ್ರ ಬರೆದಿದ್ದರು ಮುಹಮ್ಮದ್ ಅಲಿ ಜಿನ್ನಾ ಅವರ ಮುಸ್ಲಿಂ ಲೀಗ್‌ನೊಂದಿಗೆ ಮೂರು ರಾಜ್ಯಗಳಲ್ಲಿ ಶ್ಯಾಮಪ್ರಸಾದ್ ಮುಖರ್ಜಿ ಏಕೆ ಸರ್ಕಾರ ರಚಿಸಿದ್ದರು.

ಎಲ್.ಕೆ.ಅಡ್ವಾಣಿ ಮತ್ತು ಜಸ್ವಂತ್ ಸಿಂಗ್ ಅವರು ಜಿನ್ನಾರನ್ನು ಹೊಗಳಿದ್ದೇಕೆ, ಆರ್‌ಎಸ್‌ಎಸ್ ತನ್ನ ಕೇಂದ್ರ ಕಚೇರಿಯಲ್ಲಿ 52 ವರ್ಷಗಳ ಕಾಲ ತ್ರಿವರ್ಣ ಧ್ವಜ ಹಾರಿಸಲಿಲ್ಲವೇಕೆ, ಆರ್‌ಎಸ್‌ಎಸ್ ಶಾಖೆಗಳಲ್ಲಿ ತ್ರಿವರ್ಣ ಧ್ವಜ ಹಾರಿಸದೇ ಇರುವುದೇಕೆ ಎಂದು ಸಿಂಗ್ ಪ್ರಶ್ನಿಸಿದ್ದಾರೆ.

1949ರ ಡಿಸೆಂಬರ್ 28ರಂದು ಆರ್ಗನೈಸರ್ ಪತ್ರಿಕೆಯಲ್ಲಿ ರಾಷ್ಟ್ರಗೀತೆ ಜನ ಗಣ ಮನವನ್ನು ಅಧಿಕಾರಿಗಳ ಪಾರ್ಟಿಗಳಲ್ಲಿ ಹಾಡುವ ಮನ ರಂಜನೆಯ ಕಾರ್ಯಕ್ರಮ ಎಂದು ಬಣ್ಣಿಸಲಾಗಿತ್ತು. ಬಿಜೆಪಿ ನಾಯಕರು ಈಗ ದೇಶಭಕ್ತಿಯ ಬಗ್ಗೆ ಮಾತನಾಡು ತ್ತಿದ್ದಾರೆ. ಆದರೆ ತಮ್ಮದೇ ಇತಿಹಾಸವನ್ನು ಅವರು ಮರೆತಿರ ಬಹುದು. 1942ರಲ್ಲಿ ಶ್ಯಾಮಪ್ರಸಾದ್ ಮುಖರ್ಜಿ ಬ್ರಿಟಿಷ್ ಗವರ್ನರ್‌ಗೆ ಪತ್ರ ಬರೆದು ಕ್ವಿಟ್ ಇಂಡಿಯಾ ಚಳವಳಿಯನ್ನು ಹತ್ತಿಕ್ಕಬೇಕು ಎಂದು ಹೇಳಿದ್ದರು ಎಂದು ಆರೋಪಿಸಿದರು.

ವಂದೇ ಮಾತರಂ ಕುರಿತು ಮಾತನಾಡಿದ ಅವರು, 1950ರ ಜನವರಿ 24ರಂದು ಸಂವಿಧಾನ ಸಭೆ ವಂದೇ ಮಾತರಂ ಅನ್ನು ರಾಷ್ಟ್ರಗೀತೆಯಾಗಿ ಅಂಗೀಕರಿಸಿತು. ಇದರಲ್ಲಿ ಬಿಜೆಪಿ, ಆರ್‌ಎಸ್‌ಎಸ್ ಅಥವಾ ಜನಸಂಘದ ಯಾವುದೇ ಕೊಡುಗೆ ಇರಲಿಲ್ಲ. ಹಾಗಿದ್ದರೆ ಈ ವಿಚಾರದಲ್ಲಿ ಬಿಜೆಪಿ ಅಥವಾ ಅದರ ಪೂರ್ವಜರ ಕೊಡುಗೆ ಏನು ಎಂದು ಪ್ರಶ್ನಿಸಿದರು.

**ಭೋಪಾಲ್‌ನಲ್ಲಿ ಶಾಲಾ ಮಕ್ಕಳ ಬೃಹತ್ ಪ್ರತಿಭಟನೆ**

# ಎನ್‌ಸಿಇಆರ್‌ಟಿಯಡಿಯ ಶಾಲೆಗಳನ್ನು ಕೆವಿಎಸ್ ಜತೆ ವಿಲೀನಕ್ಕೆ ವಿರೋಧ




**ಭೂಪಾಲ್, ಆ. 19:** ರಾಷ್ಟ್ರೀಯ ಶೈಕ್ಷಣಿಕ ಸಂಶೋಧನೆ ಮತ್ತು ತರಬೇತಿ ಮಂಡಳಿ (ಎನ್ಸಿಇಆರ್ಟಿ) ಅಡಿಯಲ್ಲಿರುವ ಪ್ರತಿಷ್ಠಿತ ಪ್ರಾತ್ಯಕ್ಷಿಕಾ ಬಹುಪಯೋಗಿ ಶಾಲೆಗಳನ್ನು (ಡಿಎಂಎಸ್ / ರೀಜನಲ್ ಶಾಲೆ) ಕೇಂದ್ರೀಯ ವಿದ್ಯಾಲಯ ಸಂಘಟನೆ ಯೊಂದಿಗೆ (ಕೆವಿಎಸ್) ವಿಲೀನಗೊಳಿಸುವ ಪ್ರಸ್ತಾಪವನ್ನು ವಿರೋಧಿಸಿ ಮಧ್ಯಪ್ರದೇಶದ ಭೋಪಾಲ್‌ನಲ್ಲಿ 'ಜೆನ್ ಆಲ್ಫಾ' ಪೀಳಿಗೆಯ ಶಾಲಾ ಮಕ್ಕಳು ಬೀದಿಗಿಳಿದು ಧರಣಿ ಸತ್ಯಾಗ್ರಹ ನಡೆಸಿದರು.

ಶಿಕ್ಷಣ ಕ್ಷೇತ್ರದಲ್ಲಿ ನಾವೀನ್ಯತೆ ಹಾಗೂ ಪ್ರಾಯೋಗಿಕ ಬೋಧನಾ ವಿಧಾನಗಳನ್ನು ಅಭಿವೃದ್ಧಿಪಡಿಸುವ ಉದ್ದೇಶದಿಂದ 1965ರ ಡಿಸೆಂಬರ್ನಲ್ಲಿ ಇಂತಹ ಪ್ರಾಯೋಗಿಕ ಶಾಲೆಗಳನ್ನು ಸ್ಥಾಪಿಸಲಾಯಿತು. ದೇಶದ ಕೇವಲ ನಾಲ್ಕು ನಗರಗಳಾದ ಭೋಪಾಲ್, ಮೈಸೂರು, ಅಜ್ಮೀರ್ ಮತ್ತು ಭುವನೇಶ್ವರಗಳಲ್ಲಿ ಮಾತ್ರ ಈ ವಿಶಿಷ್ಟ ಶಾಲೆಗಳು ಕಾರ್ಯನಿರ್ವಹಿಸುತ್ತಿದ್ದು, ಶಿಕ್ಷಣ ಸಂಶೋಧನೆಯಲ್ಲಿ ಮಹತ್ವದ ಪಾತ್ರ ವಹಿಸಿವೆ.

ಶಾಲಾ ಆವರಣದ ಮುಂಭಾಗ ಜಮಾಯಿಸಿದ ವಿದ್ಯಾರ್ಥಿಗಳು, ಈ ಶಾಲೆಗಳನ್ನು ಕೆವಿಎಸ್ ಆಡಳಿತಾತ್ಮಕ ಚೌಕಟ್ಟಿನಡಿ ತರುವುದರಿಂದ ಸಂಸ್ಥೆಯ ಮೂಲ ಸ್ವರೂಪಕ್ಕೆ ಧಕ್ಕೆಯಾಗಲಿದೆ ಎಂದು ಆತಂಕ ವ್ಯಕ್ತಪಡಿಸಿದರು. ಸಾಮಾನ್ಯ ಶಾಲಾ ವ್ಯವಸ್ಥೆಯೊಂದಿಗೆ ವಿಲೀನಗೊಳಿಸುವುದರಿಂದ ಇಲ್ಲಿನ ವಿಶಿಷ್ಟ ಪ್ರಾಯೋಗಿಕ ಕಲಿಕಾ ಮಾದರಿ ಮತ್ತು ಸ್ವತಂತ್ರ ಅಸ್ತಿತ್ವ ನಾಶವಾಗಲಿದೆ ಎಂದು ಪ್ರತಿಭಟನಾಕಾರರು ಆಕ್ರೋಶ ಹೊರಹಾಕಿದರು.

ವಿಲೀನ ವಿರೋಧಿ ಘೋಷಣೆಗಳನ್ನು ಕೂಗಿದ ವಿದ್ಯಾರ್ಥಿಗಳು, ಬಳಿಕ ಪ್ರಾದೇಶಿಕ ಶಿಕ್ಷಣ ಸಂಸ್ಥೆಯ ಪ್ರಾಂಶುಪಾಲ ಪ್ರೊ. ಎಸ್.ಕೆ.ಗುಪ್ತಾ ಅವರಿಗೆ ಮನವಿ ಪತ್ರ ಸಲ್ಲಿಸಿದರು. ವಿಲೀನ ಪ್ರಸ್ತಾಪವನ್ನು ಸಂಪೂರ್ಣವಾಗಿ ಕೈಬಿಟ್ಟು, ಈ ಶಾಲೆಗಳನ್ನು ಶೈಕ್ಷಣಿಕ ನಾವೀನ್ಯತೆಯ ಸಂಶೋಧನಾ ಕೇಂದ್ರಗಳನ್ನಾಗಿಯೇ ಉಳಿಸಿಕೊಂಡು ಮತ್ತಷ್ಟು ಬಲಪಡಿಸಬೇಕು ಎಂದು ಸರ್ಕಾರವನ್ನು ಒತ್ತಾಯಿಸಿದರು.

ತಮ್ಮ ಬೇಡಿಕೆಗಳನ್ನು ಶಿಕ್ಷಣ ಇಲಾಖೆ ಹಾಗೂ ಸಂಬಂಧಪಟ್ಟ ಪ್ರಾಧಿಕಾರಗಳು ಈಡೇರಿಸದಿದ್ದರೆ, ಮುಂಬರುವ ದಿನಗಳಲ್ಲಿ ಶಾಂತಿಯುತ ಪ್ರತಿಭಟನೆಯನ್ನು ಹಂತ ಹಂತವಾಗಿ ತೀವ್ರಗೊಳಿಸುವುದಾಗಿ ವಿದ್ಯಾರ್ಥಿಗಳು ಎಚ್ಚರಿಕೆ ನೀಡಿದ್ದಾರೆ. ಈ ಮೂಲಕ ಪ್ರಾದೇಶಿಕ ಶಾಲೆಗಳ ಅಸ್ತಿತ್ವ ಉಳಿಸಿಕೊಳ್ಳಲು 'ಜೆನ್ ಆಲ್ಫಾ' ವಿದ್ಯಾರ್ಥಿಗಳು ಗಟ್ಟಿಯಾಗಿ ಧ್ವನಿ ಎತ್ತಿದ್ದಾರೆ.

# 60 ಜನರ ಹಾಸ್ಟೆಲ್‌ನಲ್ಲಿ 150 ಮಂದಿ ವಾಸ್ತವ್ಯ: ಮಧ್ಯರಾತ್ರಿ ವಸತಿನಿಲಯದ ಕಿಟಕಿಯಿಂದ ಜಿಗಿದು ಠಾಣೆ ಮೆಟ್ಟಿಲೇರಿದ ವಿದ್ಯಾರ್ಥಿನಿಯರು

**ಭೂಪಾಲ್, ಆ.19:** ವಿದ್ಯಾರ್ಥಿ ನಿಲಯಗಳ ಅವ್ಯವಸ್ಥೆ ಹಾಗೂ ಮೂಲಸೌಕರ್ಯಗಳ ಕೊರತೆಗೆ ಕನ್ನಡಿ ಹಿಡಿಯುವಂತಹ ಆಘಾತಕಾರಿ ಘಟನೆಯೊಂದು ಮಧ್ಯಪ್ರದೇಶದ ಧಾರ್ ಜಿಲ್ಲೆಯಲ್ಲಿ ನಡೆದಿದೆ.

ಕಳಪೆ ಗುಣಮಟ್ಟದ ಊಟ ಹಾಗೂ ತೀವ್ರ ಸ್ಥಳಾವಕಾಶದ ಕೊರತೆಯಿಂದ ರೋಸಿಹೋದ ಸುಮಾರು 40 ವಿದ್ಯಾರ್ಥಿನಿಯರು ಮಧ್ಯರಾತ್ರಿ ವೇಳೆ ತಮ್ಮ ಹಾಸ್ಟೆಲ್ ಕಿಟಕಿಯಿಂದ ಹೊರಗೆ ಧುಮುಕಿ ನೇರವಾಗಿ ಪೊಲೀಸ್ ಠಾಣೆ ಮೆಟ್ಟಿಲೇರಿ ದೂರು ನೀಡಿದ್ದಾರೆ.

ಜಿಲ್ಲೆಯ ಮಾತಾ ಶಬರಿ ಬಾಲಕಿ ಯರ ವಿದ್ಯಾರ್ಥಿನಿಲಯದಲ್ಲಿ ಈ ಅಮಾನವೀಯ ಅವ್ಯವಸ್ಥೆ ಬೆಳಕಿಗೆ ಬಂದಿದೆ.

ಈ ಹಾಸ್ಟೆಲ್‌ನಲ್ಲಿ ಕೇವಲ 60 ವಿದ್ಯಾರ್ಥಿನಿಯರಿಗೆ ವಸತಿ ಕಲ್ಪಿಸಲು ಮಾತ್ರ ಅವಕಾಶ ಹಾಗೂ ಅಗತ್ಯ ಸೌಲಭ್ಯಗಳಿವೆ. ಆದರೆ, ಹಾಸ್ಟೆಲ್ ಆಡಳಿತ ಮಂಡಳಿಯು ನಿಯಮಗಳನ್ನು ಗಾಳಿಗೆ ತೂರಿ ಬರೋಬ್ಬರಿ 150ಕ್ಕೂ ಹೆಚ್ಚು ವಿದ್ಯಾರ್ಥಿನಿಯರನ್ನು ಒಂದೇ ಕಡೆ ಇರಿಸಿದ್ದು, ಮಲಗಲು, ಶೌಚಾಲಯ ಬಳಸಲು ಹಾಗೂ ತಮ್ಮ ದೈನಂದಿನ ಅಧ್ಯಯನಕ್ಕೂ ತೀವ್ರ ಪರದಾಡುವಂತಹ ದುಸ್ಥಿತಿ ನಿರ್ಮಾಣವಾಗಿತ್ತು. ಕೇವಲ ಕಿಕ್ಕಿರಿದ ವಸತಿ ಮಾತ್ರವಲ್ಲದೆ, ದಿನನಿತ್ಯ ನೀಡುತ್ತಿದ್ದ ಊಟ ಕೂಡ ಅತ್ಯಂತ ಕಳಪೆ ಗುಣಮಟ್ಟದ್ದಾಗಿತ್ತು ಎಂದು ವಿದ್ಯಾರ್ಥಿನಿಯರು ಅಳಲು ತೋಡಿಕೊಂಡಿದ್ದಾರೆ. ಕಳಪೆ ಊಟ ಹಾಗೂ ಸ್ಥಳಾವಕಾಶದ ಕೊರತೆಯಿಂದಾಗಿ ತಮ್ಮ ಆರೋಗ್ಯದ ಮೇಲೂ ದುಷ್ಪರಿಣಾಮ ಬೀರುತ್ತಿದೆ ಎಂದು ವಿದ್ಯಾರ್ಥಿನಿಯರು ಹಾಸ್ಟೆಲ್ ವಾರ್ಡನ್ ಹಾಗೂ ಆಡಳಿತ ಮಂಡಳಿಗೆ ಹಲವು ಬಾರಿ ದೂರು ನೀಡಿದ್ದರು. ಆದಾಗ್ಯೂ, ಅಧಿಕಾರಿಗಳು ಇವರ ಕೂಗಿಗೆ ಕನಿಷ್ಠ ಸ್ಪಂದನೆಯನ್ನೂ ನೀಡದೆ ನಿರ್ಲಕ್ಷ್ಯ ವಹಿಸಿದ್ದರು ಎಂದು ಆರೋಪಿಸಲಾಗಿದೆ.

## ನಿಧನ ವಾರ್ತೆ

# ಪ್ರೆಸಿಲ್ಲಾ ಮೊಂತೆರೊ ನಿಧನ



**ಮುಂಬಯಿ, ಆ,19:** ಮೂಡುಜೆಪ್ಪು, ಕೆಲರಾಯಿ ನಿವಾಸಿ ಹಾಗೂ ದಿ.ಗಿಲ್ಬರ್ಟ್ ಮೊಂತೆರೊ ಅವರ ಧರ್ಮಪತ್ನಿ ಪ್ರೆಸಿಲ್ಲಾ ಮೊಂತೆರೊ (81) ಅವರು ಅಲ್ಪಕಾಲದ ಅನಾರೋಗ್ಯದಿಂದ ನಗರದ ಖಾಸಗಿ ಆಸ್ಪತ್ರೆಯಲ್ಲಿ ಆಗಸ್ಟ್ 19ರಂದು ನಿಧನರಾದರು. ಪ್ರಗತಿಪರ ಕೃಷಿಕರು ಮತ್ತು ಪರೋಪಕಾರಿ ಸ್ವಭಾವದವರಾಗಿದ್ದ ಅವರು ನೆರೆಹೊರೆ ಯವರು ಹಾಗೂ ಪರಿಚಿತರೊಂದಿಗೆ ಆತ್ಮೀಯ ಬಾಂಧವ್ಯ ಹೊಂದಿದ್ದರು. ಮೃತರು ರೋಹನ್ ಕಾರ್ಪೊರೇಷನ್‌ನ ವ್ಯವಸ್ಥಾಪಕ ನಿರ್ದೇಶಕ ರೋಹನ್ ಮೊಂತೆರೊ ಅವರ ತಾಯಿ. ರೋಹನ್ ಸೇರಿ ಮೂವರು ಪುತ್ರರು, ಮೂವರು ಪುತ್ರಿಯರು ಹಾಗೂ ಮೊಮ್ಮಕ್ಕಳನ್ನು ಅಗಲಿದ್ದಾರೆ. ಮೃತರ ಅಂತ್ಯಕ್ರಿಯೆಯು ಆಗಸ್ಟ್ 21ರ ಶುಕ್ರವಾರ ಬೆಳಗ್ಗೆ 10.30ಕ್ಕೆ ಕೆಲರಾಯಿಯ ಸಂತ ಅನ್ನಾ ಚರ್ಚ್‌ನಲ್ಲಿ ಸಾರ್ವಜನಿಕ ಅಂತಿಮ ದರ್ಶನಕ್ಕೆ ಇಡಲಾಗುವುದು. ಬಳಿಕ ಬೆಳಗ್ಗೆ 11 ಗಂಟೆಗೆ ಚರ್ಚ್‌ನಲ್ಲಿ ಪವಿತ್ರ ಬಲಿಪೂಜೆ ನಂತರ ಅಂತ್ಯಕ್ರಿಯೆ ನಡೆಯಲಿದೆ.

# ಫುಡ್ ಡಿವೋರ್ಸ್ ಎಂಬ ಹೊಸ ಟ್ರೆಂಡ್

**ನವದೆಹಲಿ, ಆ.19:** ದಿನನಿತ್ಯದ ಜೀವನದಲ್ಲಿ ಗಂಡ–ಹೆಂಡತಿ ನಡುವೆ ಸಣ್ಣಪುಟ್ಟ ವಿಷಯಗಳಲ್ಲಿಯೂ ಭಿನ್ನಾಭಿಪ್ರಾಯ ಇರುವುದು ಸಹಜ. ಆದರೆ, ಇತ್ತೀಚಿನ ದಿನಗಳಲ್ಲಿ ಆಹಾರದ ವಿಚಾರದಲ್ಲೂ ಹೊಂದಾಣಿಕೆ ಮಾಡಿ ಕೊಳ್ಳಲು ಕಷ್ಟಪಡುತ್ತಿರುವ ಜೋಡಿಗಳು ತಮ್ಮಿಷ್ಟದ ತಿನಿಸುಗಳನ್ನು ಪ್ರತ್ಯೇಕವಾಗಿ ಆನಂದಿಸಲು 'ಫುಡ್ ಡಿವೋರ್ಸ್' ಎಂಬ ವಿಭಿನ್ನ ಹಾಗೂ ಹೊಸ ಟ್ರೆಂಡ್ ಅನುಸರಿಸಲು ಮುಂದಾಗುತ್ತಿದ್ದಾರೆ.

ಅಂದಹಾಗೆ, 'ಫುಡ್ ಡಿವೋರ್ಸ್' ಎಂದರೆ ಗಂಡ–ಹೆಂಡತಿ ಅಥವಾ ಸಂಗಾತಿಗಳ ನಡುವಿನ ಬಾಂಧವ್ಯ ಅಥವಾ ಸಂಬಂಧದ ವಿಚ್ಛೇದನವಲ್ಲ, ಬದಲಿಗೆ ಒಂದೇ ಮನೆಯಲ್ಲಿದ್ದುಕೊಂಡು ಪ್ರತಿದಿನದ ಆಹಾರದ ಆದ್ಯತೆಗಳಿಗಾಗಿ ಅನಗತ್ಯ ರಾಜಿ ಮಾಡಿಕೊಳ್ಳದಿರುವ ಒಂದು ಮುಕ್ತ ಹಾಗೂ ಪ್ರಾಯೋಗಿಕ ನಿರ್ಧಾರವಾಗಿದೆ.

ಉದಾ:ಒಬ್ಬರಿಗೆ ಚಪಾತಿ–ಪಲ್ಯ ಇಷ್ಟವಿದ್ದರೆ ಮತ್ತೊಬ್ಬರಿಗೆ ನೂಡಲ್ಸ್ ತಿನ್ನಬೇಕೆನಿಸಬಹುದು. ಇಂತಹ ಸಂದರ್ಭದಲ್ಲಿ ಇಬ್ಬರೂ ಒಂದೇ ಆಹಾರವನ್ನು ತಿನ್ನಲೇಬೇಕೆಂದು ಒತ್ತಾಯಿಸುವ ಬದಲು, ತಮ್ಮಿಷ್ಟದ ರುಚಿಗೆ ತಕ್ಕಂತೆ ಪ್ರತ್ಯೇಕವಾಗಿ ಊಟ ಮಾಡಬಹುದು. ಅದೇ ರೀತಿ, ಒಬ್ಬರು ಬೇಗನೆ ರಾತ್ರಿ ಊಟ ಮಾಡಲು ಬಯಸಿದರೆ, ಮತ್ತೊಬ್ಬರಿಗೆ ತಡವಾಗಿ ತಿನ್ನುವ ಅಭ್ಯಾಸವಿರಬಹುದು, ಹೀಗಾಗಿ ಇಬ್ಬರೂ ತಮ್ಮ ಅನುಕೂಲಕ್ಕೆ ತಕ್ಕ ಸಮಯದಲ್ಲಿ ಊಟ ಮಾಡುವುದು ಈ ಪದ್ಧತಿಯ ವಿಶೇಷವಾಗಿದೆ.

ವಿಶೇಷವಾಗಿ ಇಬ್ಬರ ಆಹಾರ ಪದ್ಧತಿಗಳಲ್ಲಿ ವ್ಯತ್ಯಾಸವಿರುವಾಗ, ಆಹಾರ ಅಲರ್ಜಿಗಳಿದ್ದಾಗ, ಸಸ್ಯಾಹಾರಿ ಮತ್ತು ಮಾಂಸಾಹಾರಿಗಳ ನಡುವೆ ಅಥವಾ ಪ್ರತ್ಯೇಕ ಡಯಟ್ ಪಾಲಿಸುವ ದಂಪತಿಗೆ ಈ ವಿಧಾನವು ಅಡಚಣೆಗಳನ್ನು ನಿವಾರಿಸಿ ದಾಂಪತ್ಯದಲ್ಲಿ ಸಾಮರಸ್ಯ ಕಾಪಾಡಿಕೊಳ್ಳಲು ಅತ್ಯಂತ ಉಪಯುಕ್ತವಾಗಿ ಪರಿಣಮಿಸುತ್ತಿದೆ.

# ಹೋಟೆಲ್‌ನಲ್ಲಿ ಅಗ್ನಿದುರಂತ: 9 ಮಂದಿ ಸಜೀವ ದಹನ

**ಕೋಲ್ಕತ್ತಾ, ಆ. 19:** ಪಶ್ಚಿಮ ಬಂಗಾಳದ ರಾಜಧಾನಿ ಕೋಲ್ಕತ್ತದ ಹೋಟೆಲ್ ಒಂದರಲ್ಲಿ ಬುಧವಾರ ಮುಂಜಾನೆ ಸಂಭವಿಸಿದ ಭೀಕರ ಅಗ್ನಿ ದುರಂತದಲ್ಲಿ ಒಂಬತ್ತು ಮಂದಿ ಬಾಂಗ್ಲಾದೇಶಿ ಪ್ರಜೆಗಳು ಮೃತಪಟ್ಟಿದ್ದು, ಇತರ ಆರು ಮಂದಿ ತೀವ್ರವಾಗಿ ಗಾಯಗೊಂಡಿದ್ದಾರೆ.

ಮೃತರೆಲ್ಲರೂ ವೈದ್ಯಕೀಯ ಚಿಕಿತ್ಸೆ ಪಡೆಯುವ ಉದ್ದೇಶದಿಂದ ನಗರಕ್ಕೆ ಆಗಮಿಸಿದ್ದರು ಎಂದು ಅಗ್ನಿಶಾಮಕ ಇಲಾಖೆಯ ಅಧಿಕಾರಿಗಳು ತಿಳಿಸಿದ್ದಾರೆ.

ಮುಂಜಾನೆ ಸುಮಾರು 2 ಗಂಟೆಯ ಸುಮಾರಿಗೆ ಹೋಟೆಲ್‌ನಲ್ಲಿ ದಿಢೀರನೆ ಬೆಂಕಿ ಕಾಣಿಸಿಕೊಂಡಿದೆ. ಕ್ಷಣಾರ್ಧದಲ್ಲಿ ದಟ್ಟ ಹೊಗೆ ಇಡೀ ಕಟ್ಟಡವನ್ನು ಆವರಿಸಿಕೊಂಡ ಪರಿಣಾಮ, ಉಸಿರಾಟದ ಸಮಸ್ಯೆಯಿಂದಾಗಿ ಹಲವರು ಪ್ರಜ್ಞೆತಪ್ಪಿ ಬಿದ್ದಿದ್ದರು.

ಮಾಹಿತಿ ತಿಳಿಯುತ್ತಿದ್ದಂತೆಯೇ ಸ್ಥಳಕ್ಕೆ ಧಾವಿಸಿದ ಅಗ್ನಿಶಾಮಕ ಮತ್ತು ತುರ್ತು ಸೇವಾ ಸಿಬ್ಬಂದಿ ರಕ್ಷಣಾ ಕಾರ್ಯಾಚರಣೆ ನಡೆಸಿ, ಪ್ರಜ್ಞಾಹೀನ ಸ್ಥಿತಿಯಲ್ಲಿದ್ದವರನ್ನು ರಕ್ಷಿಸಿ ಆಸ್ಪತ್ರೆಗೆ ಸಾಗಿಸಿದರು ಹಾಗೂ ಹರಡುತ್ತಿದ್ದ ಬೆಂಕಿಯನ್ನು ನಿಯಂತ್ರಣಕ್ಕೆ ತಂದರು. ದುರಂತದಲ್ಲಿ ಗಾಯಗೊಂಡಿರುವ ಆರು ಮಂದಿಯನ್ನು ಸಮೀಪದ ಆಸ್ಪತ್ರೆಗೆ ದಾಖಲಿಸಿ ಚಿಕಿತ್ಸೆ ನೀಡಲಾಗುತ್ತಿದೆ.

ಜನನಿಬಿಡ ಪ್ರದೇಶದಲ್ಲಿದ್ದ ಹಳೆಯ ಮಾದರಿಯ ಕಟ್ಟಡದಲ್ಲಿ ಈ ಹೋಟೆಲ್ ಕಾರ್ಯಾಚರಿಸುತ್ತಿತ್ತು ಎಂದು ತಿಳಿದುಬಂದಿದೆ.

ಬೆಂಕಿ ಅವಘಡಕ್ಕೆ ನಿಖರ ಕಾರಣ ಇನ್ನೂ ತಿಳಿದುಬಂದಿಲ್ಲವಾಗಿದ್ದು, ಬೆಂಕಿ ಹೊತ್ತಿಕೊಳ್ಳಲು ಕಾರಣವೇನು ಎಂಬುದನ್ನು ಪತ್ತೆಹಚ್ಚಲು ಅಧಿಕಾರಿಗಳು ಹೋಟೆಲ್ ಆವರಣವನ್ನು ಪರಿಶೀಲಿಸಿ



# ಕರ್ನಾಟಕ ರಾಜ್ಯ ಮಕ್ಕಳ ಹಕ್ಕುಗಳ ರಕ್ಷಣಾ ಆಯೋಗ



4ನೇ ಮಹಡಿ, ಕೃಷಿ ಭವನ, ಹಡ್ಸನ್ ಸರ್ಕಲ್ ಹತ್ತಿರ, ನೃಪತುಂಗ ರಸ್ತೆ, ಅಂಬೇಡ್ಕರ್ ವೀದಿ
ಸಂಪಗಿರಾಮನಗರ, ಬೆಂಗಳೂರು, ಕರ್ನಾಟಕ-560001, ದೂರವಾಣಿ, 080 2211 5291



## ಸಮಸ್ತ ನಾಡಿನ ಜನತೆಗೆ ವರಮಹಾಲಕ್ಷ್ಮೀ ಹಬ್ಬದ ಹಾರ್ದಿಕ ಶುಭಾಶಯಗಳು

ಕರ್ನಾಟಕ ರಾಜ್ಯ ಮಕ್ಕಳ ಹಕ್ಕುಗಳ ರಕ್ಷಣಾ ಆಯೋಗ ಎನ್ನುವುದು ಮಕ್ಕಳ ಹಕ್ಕುಗಳ ರಕ್ಷಣೆ, ಆರೈಕೆ ಮತ್ತು ಸುರಕ್ಷತೆಗಾಗಿ ಇರುವ ಸರ್ಕಾರಿ ಸಂಸ್ಥೆಯಾಗಿದೆ. ಇದು ಮಕ್ಕಳ ಮೇಲಿನ ದೌರ್ಜನ್ಯ, ಬಾಲ ಕಾರ್ಮಿಕ ಪದ್ಧತಿ ಹಾಗೂ ಹಕ್ಕುಗಳ ಉಲ್ಲಂಘನೆ ತಡೆಯಲು ಕಾರ್ಯ ನಿರ್ವಹಿಸುತ್ತದೆ.

ವರಮಹಾಲಕ್ಷ್ಮೀ ಹಬ್ಬದ ಶುಭಾಶಯ ಕೋರುವವರು



**ಸಂತೋಷ್ ಕುಮಾರ್**
ಅಧ್ಯಕ್ಷರು



**ಸತ್ಯನಾರಾಯಣ ಶೆಟ್ಟಿ**
ಸದಸ್ಯರು



**ಜಗನ್ನಾಥ್ ಹಾಲಮಡಗಿ**
ಸದಸ್ಯರು



**ವೆಂಕಟೇಶ್**
ಸದಸ್ಯರು



**ಸವಿತಾ.ಎಸ್.ಆರ್**
ವಕೀಲರು



**ಪೂರ್ಣಿಮ.ಎಂ**
ವಕೀಲರು

# ಸೆಪ್ಟೆಂಬರ್ ಮೊದಲ ವಾರ ರಾಜ್ಯದ ಬರಪೀಡಿತ ಜಿಲ್ಲೆಗೆ ಕೇಂದ್ರ ಸಚಿವ ಶಿವರಾಜ್ ಸಿಂಗ್ ಚೌಹಾಣ್ ಭೇಟಿ

■ ಕೃಷಿ ಸಚಿವ ನರೇಂದ್ರಸ್ವಾಮಿ ಮನವಿಗೆ ಕೇಂದ್ರ ಸ್ಪಂದನೆ

ನವದೆಹಲಿ, ಆ.19: ಸೆಪ್ಟೆಂಬರ್ ಮೊದಲ ವಾರದಲ್ಲಿ ರಾಜ್ಯದ ಬರಪೀಡಿತ ಜಿಲ್ಲೆಗೆ ಭೇಟಿ ನೀಡುವುದಾಗಿ ಕೇಂದ್ರ ಕೃಷಿ ಹಾಗೂ ಗ್ರಾಮೀಣಾಭಿವೃದ್ಧಿ ಸಚಿವ ಶಿವರಾಜ್ ಸಿಂಗ್ ಚೌಹಾಣ್ ಭರವಸೆ ನೀಡಿದ್ದಾರೆ. ರಾಜ್ಯ ಕೃಷಿ ಸಚಿವ ನರೇಂದ್ರಸ್ವಾಮಿ ಅವರು ದೆಹಲಿಯಲ್ಲಿ ಶಿವರಾಜ್ ಸಿಂಗ್ ಚೌಹಾಣ್ ಅವರನ್ನು ಭೇಟಿ ಮಾಡಿ ರಾಜ್ಯದ ಬರದ ಹಿನ್ನೆಲೆಯಲ್ಲಿ ಉಂಟಾಗಿರುವ ರಾಜ್ಯದ ಕೃಷಿ ಸಮಸ್ಯೆಗಳು ಹಾಗೂ ಪ್ರಧಾನ ಮಂತ್ರಿ ಫಸಲ್ ಭೀಮಾ ವಿಮಾ ಯೋಜನೆಗೆ ಹೆಸರು ನೋಂದಾಯಿಸಿಕೊಳ್ಳಲು ಆಗಸ್ಟ್ ಕೊನೆಯವರೆಗೆ ಅವಧಿ ವಿಸ್ತರಣೆ ಮಾಡುವ ಬಗ್ಗೆ ಸಮಾಲೋಚನೆ ನಡೆಸಿದರು. ಪ್ರಧಾನ ಮಂತ್ರಿ ಫಸಲ್ ಭೀಮಾ ವಿಮಾ ಯೋಜನೆಗೆ ಹೆಸರು ನೋಂದಾಯಿಸಿಕೊಳ್ಳಲು ಅವಧಿ ವಿಸ್ತರಿಸುವಂತೆ ಮುಖ್ಯಮಂತ್ರಿ ಡಿಕೆ ಶಿವಕುಮಾರ್



ಪ್ರಧಾನಿ ನರೇಂದ್ರ ಮೋದಿಗೆ ಪತ್ರ ಬರೆದಿರುವುದನ್ನು ನರೇಂದ್ರಸ್ವಾಮಿ ಅವರು ಕೇಂದ್ರ ಕೃಷಿ ಸಚಿವರ ಗಮನಕ್ಕೆ ತಂದಿದ್ದಾರೆ. ಕರ್ನಾಟಕದಲ್ಲಿ ಮಳೆಯ ಅಭಾವದಿಂದಾಗಿ ಸೃಷ್ಟಿಯಾಗಿರುವ ಸಮಸ್ಯೆಗಳಿಗೆ ಸ್ಪಂದಿಸುವುದಾಗಿ ತಿಳಿಸಿದ್ದಾರೆ.

# ದೆಹಲಿ-ಹುಬ್ಬಳ್ಳಿ, ದೆಹಲಿ-ಬೆಳಗಾವಿ ಮಧ್ಯೆ ನಿತ್ಯವೂ ವಿಮಾನ ಸಂಚಾರ

* ಸಚಿವ ಪ್ರಲ್ಹಾದ ಜೋಶಿ ಮನವಿಗೆ ಸ್ಪಂದಿಸಿದ ಇಂಡಿಗೋ ಏರ್‌ಲೈನ್ಸ್
* ಅಕ್ಟೋಬರ್ 1ರಿಂದಲೇ ಈ ಮಹಾ ನಗರಗಳ ಮಧ್ಯೆ ಎರಡು ವಿಮಾನಗಳ ಸಂಚಾರ ಶುರು

**ನವದೆಹಲಿ, ಆ.19:** ಹುಬ್ಬಳ್ಳಿ-ಧಾರವಾಡ, ಬೆಳಗಾವಿ ಸೇರಿದಂತೆ ಉತ್ತರ ಕರ್ನಾಟಕದ ಪ್ರಯಾಣಿಕರಿಗಾಗಿ ಇಂಡಿಗೋ ಏರ್‌ಲೈನ್ಸ್ ಸಂಸ್ಥೆ ದೆಹಲಿ-ಹುಬ್ಬಳ್ಳಿ ಮತ್ತು ದೆಹಲಿ-ಬೆಳಗಾವಿ ಮಧ್ಯೆ ಪ್ರತಿನಿತ್ಯ ವಿಮಾನ ಸೇವೆ ಆರಂಭಿಸುವ ಸಿಹಿ ಸುದ್ದಿ ನೀಡಿದೆ.

ಕೇಂದ್ರ ಗ್ರಾಹಕ ವ್ಯವಹಾರಗಳ ಸಚಿವ ಪ್ರಲ್ಹಾದ ಜೋಶಿ ಅವರ ಮನವಿಗೆ ಸಕಾರಾತ್ಮಕವಾಗಿ ಸ್ಪಂದಿಸಿದ ಇಂಡಿಗೋ ಏರ್‌ಲೈನ್ಸ್ ಅಕ್ಟೋಬರ್ 1ರಿಂದಲೇ ಪ್ರತಿದಿನ ವಿಮಾನ ಸಂಚಾರ ಆರಂಭಿಸುವುದಾಗಿ ಪ್ರಕಟಿಸಿದೆ. ಈ ಮೂಲಕ ಹುಬ್ಬಳ್ಳಿ-ಧಾರವಾಡ ಹಾಗೂ ಉತ್ತರ ಕರ್ನಾಟಕದ ಜನತೆಗೆ ಸಿಹಿ ಸುದ್ದಿ ನೀಡಿದೆ.



ಈ ಮಹಾನಗರಗಳ ಪ್ರಯಾಣಿಕರ ಅನುಕೂಲ ಹಾಗೂ ಜನರ ಬೇಡಿಕೆ ಗಮನದಲ್ಲಿಟ್ಟುಕೊಂಡು ಸಚಿವ ಪ್ರಲ್ಹಾದ ಜೋಶಿ ಅವರು ದೆಹಲಿ-ಹುಬ್ಬಳ್ಳಿ ಹಾಗೂ ದೆಹಲಿ-ಬೆಳಗಾವಿ ನಡುವೆ ದೈನಂದಿನ ವಿಮಾನ (ಪ್ರತಿ ದಿನ) ಸೇವೆ ಆರಂಭಿಸುವಂತೆ ಇತ್ತೀಚೆಗೆ ಇಂಡಿಗೋ ಏರ್‌ಲೈನ್ಸ್ ಅಧಿಕಾರಿಗಳ ಗಮನ ಸೆಳೆದಿದ್ದರು.

ಸಚಿವರ ಮನವಿಗೆ ತ್ವರಿತ ಸ್ಪಂದನೆ ನೀಡಿರುವ ಇಂಡಿಗೋ ಸಂಸ್ಥೆ ಅಕ್ಟೋಬರ್ 1ರಿಂದಲೇ ಪ್ರತಿದಿನ ದೆಹಲಿ?ಹುಬ್ಬಳ್ಳಿ ಹಾಗೂ ದೆಹಲಿ-ಬೆಳಗಾವಿ ಮಧ್ಯೆ ನೇರ ವಿಮಾನ ಸೇವೆ ಆರಂಭಿಸುವುದಾಗಿ ತಿಳಿಸಿದೆ.

ಮಾನ ಸೇವೆ ವೇಳೆ: Flight No: 6E758ರ ವಿಮಾನ ನಿತ್ಯವೂ ಸಂಜೆ 4:30ಕ್ಕೆ ದೆಹಲಿಯಿಂದ ಹೊರಟು ಸಂಜೆ 6:55ಕ್ಕೆ ಹುಬ್ಬಳ್ಳಿ ತಲುಪಲಿದೆ. Flight No: 6E2115ರ ವಿಮಾನ ಸಂಜೆ 7:30ಕ್ಕೆ ಹುಬ್ಬಳ್ಳಿಯಿಂದ ಹೊರಟು ರಾತ್ರಿ 10:05ಕ್ಕೆ ದೆಹಲಿ ತಲುಪಲಿದೆ.

ಅಂತೆಯೇ Flight No: 6E2511ರ ವಿಮಾನ ಬೆಳಗ್ಗೆ 6:15ಕ್ಕೆ ದೆಹಲಿಯಿಂದ ಹೊರಟು 8:40ಕ್ಕೆ ಬೆಳಗಾವಿ ತಲುಪಲಿದೆ. Flight No: 6E2512ರ ವಿಮಾನ ಬೆಳಗ್ಗೆ 9:10ಕ್ಕೆ ಬೆಳಗಾವಿಯಿಂದ ಹೊರಟು 11:40ಕ್ಕೆ ದೆಹಲಿ ತಲುಪಲಿದೆ. ಈ ಎರಡೂ ವಿಮಾನಗಳು ಅಕ್ಟೋಬರ್ 1ರಿಂದ ಪ್ರತಿದಿನ ಸಂಚಾರ ಆರಂಭಿಸಲಿವೆ.

ಉತ್ತರ ಕರ್ನಾಟಕ ಜನತೆಗೆ ಅನುಕೂಲ: ಪ್ರತಿ ದಿನವೂ ವಿಮಾನ ಸಂಚಾರದಿಂದ ಹುಬ್ಬಳ್ಳಿ-ಧಾರವಾಡ ಹಾಗೂ ಬೆಳಗಾವಿ ಮಹಾನಗರಗಳಲ್ಲಿ ವ್ಯಾಪಾರ, ಉದ್ಯೋಗ, ಶಿಕ್ಷಣ, ಪ್ರವಾಸೋದ್ಯಮ ಸೇರಿದಂತೆ ವಿವಿಧ ಕ್ಷೇತ್ರಗಳ ಅಭಿವೃದ್ಧಿಗೆ ಹೆಚ್ಚಿನ ಅನುಕೂಲವಾಗಲಿದೆ. ಉತ್ತರ ಕರ್ನಾಟಕದ ಅಭಿವೃದ್ಧಿಗೆ, ಸಂಪರ್ಕ ವ್ಯವಸ್ಥೆಯ ಬಲವರ್ಧನೆಗೆ ನಮ್ಮ ಪ್ರಯತ್ನ ನಿರಂತರವಾಗಿದೆ ಎಂದು ಕೇಂದ್ರ ಸಚಿವ ಪ್ರಲ್ಹಾದ ಜೋಶಿ ಪ್ರತಿಕ್ರಿಯಿಸಿದ್ದಾರೆ.

# SMPS Tech Lab: ಮುಂದಿನ ಪೀಳಿಗೆಯ ಆವಿಷ್ಕಾರವನ್ನು ರೂಪಿಸುವ ಎಂಜಿನಿಯರಿಂಗ್ ಶಕ್ತಿ

## ಕುತೂಹಲದಿಂದ ಅನ್ವೇಷಣೆಗೆ, ಅನ್ವೇಷಣೆಯಿಂದ ಆವಿಷ್ಕಾರಕ್ಕೆ. ಅವಿಷ್ಕಾರದಿಂದ ಉದ್ಯಮದತ್ತ

**ಬೆಂಗಳೂರು, ಆ.19:** ಪ್ರತಿಯೊಂದು ಪರಿವರ್ತನಾತ್ಮಕ ತಂತ್ರಜ್ಞಾನದ ಹಿಂದೆ ಒಂದು ಪ್ರಶ್ನೆ, ಕುತೂಹಲದ ಕಿಡಿ ಅಥವಾ ಕೇವಲ ಆಲೋಚನೆಯಾಗಿ ಉಳಿಯಲು ಸಿದ್ಧವಿಲ್ಲದ ಒಂದು ಕನಸು ಇರುತ್ತದೆ. ಭಾರತವು ಆಳವಾದ ತಂತ್ರಜ್ಞಾನ, ಸ್ವದೇಶಿ ಅವಿಷ್ಕಾರ, ಸುಧಾರಿತ ಎಂಜಿನಿಯರಿಂಗ್ ಮತ್ತು ತಂತ್ರಜ್ಞಾನಾಧಾರಿತ ಉದ್ಯಮಶೀಲತೆಯತ್ತ ವೇಗವಾಗಿ ಮುನ್ನಡೆಯುತ್ತಿರುವ ಸಂದರ್ಭದಲ್ಲಿ, SMPS Tech Lab ಯುವ ಮನಸ್ಸುಗಳ ಕುತೂಹಲವನ್ನು ಸಾಮರ್ಥ್ಯವಾಗಿ, ಸಂಶೋಧನೆಯನ್ನು ತಂತ್ರಜ್ಞಾನವಾಗಿ ಮತ್ತು ತಂತ್ರಜ್ಞಾನವನ್ನು ನೈಜ ಪರಿಣಾಮವಾಗಿ ರೂಪಿಸುವ ಸಮಗ್ರ ಪರಿಸರ ವ್ಯವಸ್ಥೆಯನ್ನು ನಿರ್ಮಿಸುತ್ತಿದೆ. ಸಂಶೋಧನೆ ಮತ್ತು ಅಭಿವೃದ್ಧಿ (R&D) ಹಾಗೂ ಉದ್ಯಮಶೀಲತೆ ಎಂಬ ಎರಡು ಪ್ರಮುಖ ಸ್ತಂಭಗಳ ಮೇಲೆ ರೂಪುಗೊಂಡಿರುವ SMPS Tech Lab, ಸುಧಾರಿತ ಎಂಜಿನಿಯರಿಂಗ್, ಉದಯೋನ್ಮುಖ ತಂತ್ರಜ್ಞಾನಗಳು, ಶಿಕ್ಷಣ, ಕೈಗಾರಿಕೆ ಮತ್ತು ಉದ್ಯಮ ನಿರ್ಮಾಣವನ್ನು ಒಂದೇ ವೇದಿಕೆಯಲ್ಲಿ ಒಗ್ಗೂಡಿಸುತ್ತಿದೆ. ಇದರ ಪ್ರಮುಖ ಕ್ಷೇತ್ರಗಳಲ್ಲಿ ಪವರ್ ಎಲೆಕ್ಟ್ರಾನಿಕ್ಸ್, ಆಳವಾದ ತಂತ್ರಜ್ಞಾನ, ದೂರಸಂಪರ್ಕ, ಮುಂದಿನ ಪೀಳಿಗೆಯ 5G/6G, ಕೈಗಾರಿಕಾ ಸ್ವಯಂಚಾಲಿತ ವ್ಯವಸ್ಥೆಗಳು, ಕೃತಕ ಬುದ್ಧಿಮತ್ತೆ, ರಕ್ಷಣಾ ತಂತ್ರಜ್ಞಾನ, ಕ್ವಾಂಟಮ್ ತಂತ್ರಜ್ಞಾನಗಳು ಸೇರಿದಂತೆ ವಿವಿಧ ತಂತ್ರಜ್ಞಾನ ಕ್ಷೇತ್ರಗಳು ಸೇರಿವೆ.

### ತಂತ್ರಜ್ಞಾನ ಕಲಿಕೆಯಿಂದ ತಂತ್ರಜ್ಞಾನ ಸೃಷ್ಟಿಯತ್ತ

SMPS: Tech Labನ ಮೂಲ ಆಶಯ ಸರಳವಾದರೂ ಶಕ್ತಿಯುತವಾಗಿದೆ ಕುತೂಹಲಕ್ಕೆ ಜ್ಞಾನ, ಅನುಭವಕ್ಕೆ ಮಾರ್ಗದರ್ಶನ ಮತ್ತು ಆಲೋಚನೆಗಳಿಗೆ ನಿರ್ಮಾಣದ ಅವಕಾಶ ದೊರೆತಾಗ, ಯುವ ಮನಸ್ಸುಗಳು ನಾಳೆಯ ●ತಂತ್ರಜ್ಞಾನವನ್ನು ರೂಪಿಸಬಲ್ಲವು, ವಿದ್ಯಾರ್ಥಿಗಳು, ಸಂಶೋಧಕರು ಮತ್ತು ಉದಯೋನ್ಮುಖ ಆವಿಷ್ಕಾರಕರಿಗೆ ಸಮಸ್ಯೆ ಗುರುತಿಸುವಿಕೆ, ಪರಿಕಲ್ಪನೆ, ತಾಂತ್ರಿಕ ಸಾಧ್ಯತೆ, ವ್ಯವಸ್ಥಾ ವಿನ್ಯಾಸ, ಮಾದರಿ ನಿರ್ಮಾಣ, ಪರೀಕ್ಷೆ, ಬೌದ್ಧಿಕ ಸ್ವತ್ತು ಮತ್ತು ಉತ್ಪನ್ನ ಅಭಿವೃದ್ಧಿಯ ಸಂಪೂರ್ಣ ಪಯಣ ಅನುಭವಿಸುವ ಅವಕಾಶವನ್ನು SMPS Tech Lab ಒದಗಿಸುತ್ತದೆ. ಈ ಪರಿಸರ ವ್ಯವಸ್ಥೆಯ ವಿಶೇಷ ಶಕ್ತಿಯೆಂದರೆ ಅನುಭವಸಂಪನ್ನ ಕೈಗಾರಿಕಾ ತಜ್ಞರು, ಯಶಸ್ವಿ ಉದ್ಯಮ ಸ್ಥಾಪಕರು, ತಂತ್ರಜ್ಞಾನ ನಾಯಕರು, ಆವಿಷ್ಕಾರಕರು ಮತ್ತು ವಿಷಯ ತಜ್ಞರು ಮಾರ್ಗದರ್ಶಕರಾಗಿ ವಿದ್ಯಾರ್ಥಿಗಳೊಂದಿಗೆ ನೇರವಾಗಿ ಕಾರ್ಯನಿರ್ವಹಿಸುವುದು. ಅವರ ಅನುಭವ,




**ಕರ್ನಾಟಕ ಸರ್ಕಾರದ ಪ್ರತಿಷ್ಠಿತ ಗೌರವ**

**ಕೌಶಲ್ಯ ಕರ್ನಾಟಕ ಪ್ರಶಸ್ತಿ 2025 – ಕಾರ್ಪೊರೇಟ್ ಎಕ್ಸಲೆನ್ಸ್ ಅವಾರ್ಡ್ 2025:** ಕೌಶಲ್ಯಾಭಿವೃದ್ಧಿ ಮತ್ತು ಆವಿಷ್ಕಾರ ಕ್ಷೇತ್ರಕ್ಕೆ ನೀಡಿದ ಕೊಡುಗೆಗಾಗಿ **SMPS Tech Lab**ಗೆ ಕೌಶಲ್ಯ ಕರ್ನಾಟಕ ಪ್ರಶಸ್ತಿ 2025 – ಕಾರ್ಪೊರೇಟ್ ಎಕ್ಸಲೆನ್ಸ್ ಪ್ರಶಸ್ತಿ 2025 ನೀಡಿ ಗೌರವಿಸಲಾಗಿದೆ. ಈ ಗೌರವವು ಸಂಶೋಧನೆ ಮತ್ತು ಅಭಿವೃದ್ಧಿ, ಉದಯೋನ್ಮುಖ ತಂತ್ರಜ್ಞಾನಗಳು, ಬೌದ್ಧಿಕ ಸ್ವತ್ತು ಮತ್ತು ಉದ್ಯಮಶೀಲತೆಗಳನ್ನು ಒಂದೇ ಪರಿಸರ ವ್ಯವಸ್ಥೆಯರ ವ್ಯವಸ್ಥೆಯಲ್ಲಿ ಒಗ್ಗೂಡಿಸುವ SMPS Tech **Lab**ನ ಪ್ರಯತ್ನಕ್ಕೆ ಮತ್ತಷ್ಟು ಬಲ ನೀಡಿದೆ.

ಜ್ಞಾನ ಮತ್ತು ಮಾರ್ಗದರ್ಶನದ ಮೂಲಕ ವಿದ್ಯಾರ್ಥಿಗಳು ನೈಜ ತಂತ್ರಜ್ಞಾನ ಅಭಿವೃದ್ಧಿಯ ಪ್ರಕ್ರಿಯೆಯನ್ನು ಅರ್ಥಮಾಡಿಕೊಂಡು ತಮ್ಮ ಆಲೋಚನೆಗಳನ್ನು ರೂಪಿಸಲು ಅವಕಾಶ ಪಡೆಯುತ್ತಾರೆ.

ಇಲ್ಲಿ ಒಂದು ಆಲೋಚನೆ ಮಾದರಿಯಾಗುತ್ತದೆ. ಮಾದರಿ ಬೌದ್ಧಿಕ ಸ್ವತ್ತಾಗಿ ರೂಪುಗೊಳ್ಳುತ್ತದೆ. ಬೌದ್ಧಿಕ ಸ್ವತ್ತು ಉತ್ಪನ್ನವಾಗುತ್ತದೆ. ಉತ್ಪನ್ನವು ಒಂದು ಉದ್ಯಮಕ್ಕೆ ದಾರಿ ಮಾಡಿಕೊಡುತ್ತದೆ. ಇದೇ SMPS Tech Lab ರೂಪಿಸುತ್ತಿರುವ ತಂತ್ರಜ್ಞಾನದಿಂದ ಉದ್ಯಮದವರೆಗಿನ ಪಯಣ.

ವಿಶ್ವೇಶ್ವರಯ್ಯ ತಾಂತ್ರಿಕ ವಿಶ್ವವಿದ್ಯಾಲಯ (VTU)-VRIF-TCOE ಹಬ್ ಮತ್ತು ಸ್ಪೋಕ್ ಶ್ರೇಷ್ಠತಾ ಕೇಂದ್ರದೊಂದಿಗೆ ಹೊಂದಿರುವ ಸಹಭಾಗಿತ್ವದ ಮೂಲಕ SMPS Tech Lab ಯುವ ಎಂಜಿನಿಯರ್‌ಗಳನ್ನು ಶಿಕ್ಷಣ, ಸಂಶೋಧನೆ ಮತ್ತು ಕೈಗಾರಿಕೆಗಳನ್ನು ಸಂಪರ್ಕಿಸುವ ಉನ್ನತ ಮಟ್ಟದ ಪರಿಸರ ವ್ಯವಸ್ಥೆಯೊಂದಿಗೆ ಜೋಡಿಸುತ್ತಿದೆ. ಈ ಪರಿಸರ ವ್ಯವಸ್ಥೆಯ ಮೂಲಕ ವಿದ್ಯಾರ್ಥಿಗಳಿಗೆ ಉದಯೋನ್ಮುಖ ತಂತ್ರಜ್ಞಾನಗಳು, ಅನ್ವಯಿಕ ಸಂಶೋಧನೆ ಮತ್ತು ಕೈಗಾರಿಕಾ ಆವಿಷ್ಕಾರಗಳ ಅನುಭವ ದೊರೆಯುತ್ತಿದ್ದು, ಅವರು ಸಂಶೋಧಿಸಲು, ಎಂಜಿನಿಯರ್ ಮಾಡಲು, ಅವಿಷ್ಕರಿಸಲು ಮತ್ತು ಜಾಗತಿಕ ಮಟ್ಟದಲ್ಲಿ ಪ್ರಸ್ತುತವಾಗುವ ತಂತ್ರಜ್ಞಾನ ಪರಿಹಾರಗಳನ್ನು ರೂಪಿಸಲು ಸಬಲರಾಗುತ್ತಿದ್ದಾರೆ.

ಜಾಗತಿಕ ಸ್ಪರ್ಧಾತ್ಮಕ ಆವಿಷ್ಕಾರ ಪರಿಸರ ವ್ಯವಸ್ಥೆಯ ನಿರ್ಮಾಣ SMPS Tech Labನ ಗುರಿ ಕೇವಲ ಯೋಜನೆಗಳು ಅಥವಾ ಕಾರ್ಯಕ್ರಮಗಳಿಗೆ ಸೀಮಿತವಾಗಿಲ್ಲ. ಬೌದ್ಧಿಕ ಸ್ವತ್ತು, ಸ್ವದೇಶಿ ತಂತ್ರಜ್ಞಾನಗಳು, ಉನ್ನತ ಮಟ್ಟದ ಆವಿಷ್ಕಾರಗಳು, ಉತ್ಪನ್ನಗಳು ಮತ್ತು ತಂತ್ರಜ್ಞಾನಾಧಾರಿತ ಉದ್ಯಮಗಳನ್ನು ನಿರಂತರವಾಗಿ ಸೃಷ್ಟಿಸುವ ಜಾಗತಿಕ ಮಟ್ಟದ ತಂತ್ರಜ್ಞಾನ ಪರಿಸರ ವ್ಯವಸ್ಥೆಯನ್ನು ನಿರ್ಮಿಸುವುದು ಇದರ ಮಹತ್ವಾಕಾಂಕ್ಷೆಯಾಗಿದೆ. 2026ರ ಹಣಕಾಸು ವರ್ಷದಲ್ಲಿ, SMPS Tech Lab 4 ಲಕ್ಷಕ್ಕೂ ಅಧಿಕ ವಿದ್ಯಾರ್ಥಿಗಳನ್ನು ಸಂಪರ್ಕಿಸುವ ಹಾಗೂ 100ಕ್ಕೂ ಅಧಿಕ ಆವಿಷ್ಕಾರ ಮತ್ತು ಬೌದ್ಧಿಕ ಸ್ವತ್ತು ಆಧಾರಿತ ಫಲಿತಾಂಶಗಳನ್ನು ಸಾಧಿಸುವ ಗುರಿ ಹೊಂದಿದೆ. ಅಲ್ಲದೇ ಭವಿಷ್ಯದ ಯುವ ಉದ್ಯಮಿಗಳು, ಆವಿಷ್ಕಾರಕರು, ಉದ್ಯಮ ನಿರ್ಮಾತೃಗಳನ್ನು ಬೆಳೆಸುವತ್ತ ಗಮನಹರಿಸಲಾಗಿದೆ.

**ಪರಿಸರ ವ್ಯವಸ್ಥೆಯ ಹಿಂದಿರುವ ಕಾರ್ಯತಂತ್ರದ ದೃಷ್ಟಿ:** SMPS Tech Labನ ಕಾರ್ಯತಂತ್ರದ ದೃಷ್ಟಿಕೋನವನ್ನು, SMPS Tech Labನ ಮುಖ್ಯ ಕಾರ್ಯತಂತ್ರ ಅಧಿಕಾರಿ ಮತ್ತು ಸ್ಥಾಪಕ ಪಾಲುದಾರ ಹಾಗೂ OptCELL GLOBALನ ಸ್ಥಾಪಕರಾದ ಶ್ರೀ ಅಮರೇಶ್ವರ್ ಕರಟಗಿ ರೂಪಿಸುತ್ತಿದ್ದಾರೆ. ಕರ್ನಾಟಕ ಸರ್ಕಾರದ ವಿಶೇಷ ವರದಿಗಾರರಾಗಿ ಕಾರ್ಯನಿರ್ವಹಿಸುತ್ತಿರುವ ಅವರು ತಂತ್ರಜ್ಞಾನ, ಉದ್ಯಮಶೀಲತೆ, ವ್ಯವಹಾರ ಕಾರ್ಯತಂತ್ರ ಮತ್ತು ಆಡಳಿತ ಕ್ಷೇತ್ರಗಳ ವಿಶಿಷ್ಟ ಅನುಭವ ಹೊಂದಿದ್ದಾರೆ.

**ಸಂಶೋಧನೆ ಮತ್ತು ಅಭಿವೃದ್ಧಿಯಲ್ಲಿ ತೊಡಗಿಸಿಕೊಳ್ಳಲು, ಉದಯೋನ್ಮುಖ ತಂತ್ರಜ್ಞಾನ ನಿರ್ಮಿಸಲು, ಬೌದ್ಧಿಕ ಸ್ವತ್ತು ಸೃಷ್ಟಿಸಲು ಮತ್ತು ನಾಳೆಯ ತಂತ್ರಜ್ಞಾನಗಳನ್ನು ರೂಪಿಸಲು ನೀವು ಸಿದ್ಧರಾಗಿದ್ದರೆ – ಭವಿಷ್ಯವನ್ನು ಎಂಜಿನಿಯರ್ ಮಾಡಿ SMPS ಟೆಕ್ ಲ್ಯಾಬ್ ಪರಿಸರ ವ್ಯವಸ್ಥೆಗೆ ಸೇರಿ,**

**SMPS ಟೆಕ್ ಲ್ಯಾಬ್**

ಸಂಶೋಧಿಸಿ. ಎಂಜಿನಿಯರ್ ಮಾಡಿ. ಆವಿಷ್ಕರಿಸಿ, ನಿರ್ಮಿಸಿ, ವಿಸ್ತರಿಸಿ

**ಪವರ್ ಎಲೆಕ್ಟ್ರಾನಿಕ್ಸ್ । ಆಳವಾದ ತಂತ್ರಜ್ಞಾನ । ಕೃತಕ ಬುದ್ಧಿಮತ್ತೆ । 5ಜಿ/6ಜಿ । ಕೈಗಾರಿಕಾ ಸ್ವಯಂಚಾಲಿತ । ವ್ಯವಸ್ಥೆಗಳು । ರಕ್ಷಣಾ ತಂತ್ರಜ್ಞಾನ । ಕ್ವಾಂಟಮ್ ತಂತ್ರಜ್ಞಾನಗಳು । ಉದ್ಯಮಶೀಲತೆ**

**www.smpstechlab.in**

+91 90358 74229 । +91 87927 79563

ಶಾಲಿನಿ@**optcellglobal.com - smpstechlab@gmail.com**

ಸರಣಿ ಉದ್ಯಮಿ, ತಂತ್ರಜ್ಞಾನ ವೃತ್ತಿಪರ, ವ್ಯವಹಾರ ಕಾರ್ಯತಂತ್ರಜ್ಞ ಮತ್ತು ಪರಿಸರ ವ್ಯವಸ್ಥೆ ನಿರ್ಮಾತೃರಾಗಿರುವ ಕರಟಗಿ ಅವರ ದೃಷ್ಟಿಕೋನವು ತಂತ್ರಜ್ಞಾನ, ಸಂಶೋಧನೆ, ಉದ್ಯಮಶೀಲತೆ ಮತ್ತು ಕಾರ್ಯತಂತ್ರದ ನಾಯಕತ್ವದ ಸಮನ್ವಯದಿಂದ ರೂಪುಗೊಂಡಿದೆ. ಅವರ ತತ್ವ ಸರಳವಾದರೂ ಆಳವಾದದ್ದು: "ಪ್ರತಿಭೆಗೆ ಅವಕಾಶ, ಸರಿಯಾದ ಮಾರ್ಗದರ್ಶನ ಮತ್ತು ನಿರ್ಮಿಸುವ ಸ್ವಾತಂತ್ರ್ಯ ದೊರೆತಾಗ, ಆಲೋಚನೆಗಳು ಪರಿವರ್ತನಾತ್ಮಕ ತಂತ್ರಜ್ಞಾನಗಳಾಗಿ ರೂಪುಗೊಳ್ಳುತ್ತವೆ. ಈ ಕಾರ್ಯತಂತ್ರದ ದೃಷ್ಟಿಗೆ ಪೂರಕವಾಗಿ, ಎ.ಆರ್.ಶಾಲಿನಿ ಅವರು ಕಾರ್ಯಾಚರಣೆ ಮತ್ತು ಅನುಷ್ಠಾನದಲ್ಲಿ ಪ್ರಮುಖ ನಾಯಕತ್ವ ವಹಿಸಿ, ಸಂಸ್ಥೆಯ ದೃಷ್ಟಿಕೋನವನ್ನು ಕೈಗಾರಿಕಾ ಸಹಭಾಗಿತ್ವ, ಶೈಕ್ಷಣಿಕ ಸಹಯೋಗ, ಅನುಭವಾತ್ಮಕ ಕಾರ್ಯಕ್ರಮಗಳು ಮತ್ತು ತಂತ್ರಜ್ಞಾನಾಧಾರಿತ ಅವಕಾಶಗಳಾಗಿ ರೂಪಿಸುತ್ತಿದ್ದಾರೆ.

# ಉತ್ತರ ಕರ್ನಾಟಕದ 4 ಪ್ರಮುಖ ಜಲಾಶಯಗಳೂ ಬಹುತೇಕ ಭರ್ತಿ: ಇನ್ನೂ ತುಂಬದ ಮಲಪ್ರಭಾ ಡ್ಯಾಂ

**ಬೆಳಗಾವಿ, ಆ.19:** ಉತ್ತರ ಕರ್ನಾಟಕದ ಪ್ರಮುಖ ಐದು ಜಲಾಶಯಗಳಲ್ಲಿ ಈ ಬಾರಿ ನಾಲ್ಕು ಭರ್ತಿಯಾಗಿವೆ. ಒಂದು ಜಲಾಶಯದಲ್ಲಿ ಮಾತ್ರ ಈಗಲೂ ಅರ್ಧಕ್ಕಿಂತ ಹೆಚ್ಚು ನೀರು ಸಂಗ್ರಹವಾಗಿದೆ. ಈ ಬಾರಿ ಮಳೆ ಕೊರತೆಯಿಂದ ಜಲಾಶಯಗಳಿಗೆ ನೀರು ಬರುವ ಪ್ರಮಾಣವೇ ಕಡಿಮೆಯಾಗಿ ಮಳೆಗಾಲದ ಮೂರನೇ ತಿಂಗಳು ಮುಗಿಯತ್ತಾ ಬಂದಿದ್ದರೂ ಕೆಲ ಜಲಾಶಯಗಳಲ್ಲಿ ನೀರಿನ ಒಳಹರಿವು ಈಗಲೂ ಕಡಿಮೆ ಇದೆ. ಆದರೆ, ಉತ್ತರ ಕರ್ನಾಟಕದ ಅತಿ ದೊಡ್ಡ ಜಲಾಶಯಗಳಲ್ಲಿ ಒಂದಾದ ಆಲಮಟ್ಟಿಯ ಲಾಲ್‌ಬಹದ್ದೂರು ಶಾಸ್ತ್ರಿ ಜಲಾಶಯ ತಿಂಗಳ ಹಿಂದೆಯೇ ಭರ್ತಿಯಾಗಿದೆ. ಈಗಲೂ ಮಹಾರಾಷ್ಟ್ರದಲ್ಲಿ ಉತ್ತಮ ಮಳೆಯಾಗಿ ನಿರಂತರವಾಗಿ ಜಲಾಶಯಕ್ಕೆ ನೀರುಹರಿದು ಬರುತ್ತಿದೆ. ಈ ಬಾರಿಹೆಚ್ಚು ನೀರು ಜಲಾಶಯದಿಂದ ಹರಿದು ಆಂಧ್ರಪ್ರದೇಶ ಸೇರಿದೆ.



**ಆಲಮಟ್ಟಿಯಿಂದ ಹೆಚ್ಚು ನೀರು:** ಆಲಮಟ್ಟಿ ಜಲಾಶಯಕ್ಕೆ ಈಗಲೂ 48348 ಕ್ಯುಸೆಕ್ ನೀರು ಒಳಹರಿವು ಇದೆ. 51 ಸಾವಿರ ಕ್ಯುಸೆಕ್ ನೀರನ್ನು ಹೊರಕ್ಕೆ ಹರಿಸಲಾಗುತ್ತಿದೆ. ಜಲಾಶಯದಲ್ಲಿ ಈಗಲೂ 122.30 ಟಿಎಂಸಿ ನೀರು ಸಂಗ್ರಹವಿದ್ದು, ಜಲಾಶಯ ಶೇ 99ರಷ್ಟು ಭರ್ತಿಯಾಗಿದೆ. ಜಲಾಶಯದ ನೀರಿನ ಮಟ್ಟವು 519.63 ಮೀಟರ್ ಇದೆ. ಗರಿಷ್ಠ ಮಟ್ಟವು 519.60 ಮೀಟರ್. ಇಲ್ಲಿ 123 ಟಿಎಂಸಿ ನೀರು ಸಂಗ್ರಹಿ ಸುವ ಸಾಮರ್ಥ್ಯವಿದೆ. ಆಲಮಟ್ಟಿಯಿಂದಲೂ ಯಥೇಚ್ಛ ನೀರು ಕೃಷ್ಣಾ ನದಿ ಮೂಲಕ ಯಾದಗಿರಿ ಜಿಲ್ಲೆ ಹುಣಸಗಿ ತಾಲ್ಲೂಕಿನ ನಾರಾಯಣಪುರ ಬಸವಸಾಗರ ಜಲಾಶಯಕ್ಕೂ ಹರಿದು ಹೋಗಿದೆ. ಈಗಲೂ ಜಲಾಶಯಕ್ಕೆ 50 ಸಾವಿರ ಕ್ಯುಸೆಕ್ ನೀರು ಹರಿದು ಬರುತ್ತಿದ್ದರೆ 55555 ಕ್ಯುಸೆಕ್ ನೀರು ಹೊರ ಬಿಡಲಾಗುತ್ತಿದೆ. ನಾರಾಯಣಪುರ ಜಲಾಶಯದ ನೀರಿನ ಮಟ್ಟವು 1614.64 ಅಡಿಯಷ್ಟಿದೆ. ಜಲಾಶಯದಲ್ಲಿ 32.84 ಟಿಎಂಸಿ ನೀರು ಸಂಗ್ರಹವಿದೆ. ಇಲ್ಲಿ 33.31 ಟಿಎಂಸಿ ನೀರು ಸಂಗ್ರಹಿಸಬಹುದು. ಜಲಾಶಯದಲ್ಲಿ ಕಳೆದ ವರ್ಷ ಇದೇ ದಿನ 30 ಟಿಎಂಸಿ ನೀರಿತ್ತು.

**ಘಟಪ್ರಭಾ ಭರ್ತಿ:** ಬೆಳಗಾವಿ ಜಿಲ್ಲೆಯ ಘಟಪ್ರಭಾ ಜಲಾಶಯವೂ ಭರ್ತಿಯಾಗಿದೆ. ಬೆಳಗಾವಿ ಭಾಗದಲ್ಲಿ ಉತ್ತಮ ಮಳೆಯಾಗಿದ್ದರಿಂದ ಜಲಾಶಯಕ್ಕೆ ಈಗಲೂ 6489 ಕ್ಯುಸೆಕ್ ನೀರು ಹರಿದು ಬರುತ್ತಿದೆ. ಜಲಾಶಯದಿಂದ 33 ಸಾವಿರ ಕ್ಯುಸೆಕ್ ನೀರು ಹರಿಬಿಡಲಾಗುತ್ತಿದೆ. ಜಲಾಶಯದಲ್ಲಿ ಶೇ.100ರಷ್ಟು ಭರ್ತಿಯಾಗಿರುವುದರಿಂದ ಹೊರ ಹರಿವು ಹೆಚ್ಚಿಸಲಾಗಿದೆ. ಜಲಾಶಯದ ನೀರಿನ ಮಟ್ಟವು ಗರಿಷ್ಠ 2174.80 ಅಡಿ ತಲುಪಿದೆ. ಕಳೆದ ವರ್ಷ ಇದೇ ದಿನ ಜಲಾಶಯ ಭರ್ತಿಯಾಗಿತ್ತು. ಜಲಾಶಯದಲ್ಲಿ 51 ಟಿಎಂಸಿ ನೀರು ಸಂಗ್ರಹವಿದೆ.

ಬೆಳಗಾವಿಯ ಮಲಪ್ರಭಾ ಜಲಾಶಯ ಈಗಲೂ ಶೇ 58ರಷ್ಟು ಮಾತ್ರ ಭರ್ತಿಯಾಗಿದೆ. ಒಳಹರಿವು 2244 ಕ್ಯುಸೆಕ್ ಇದೆ. ಜಲಾಶಯದಲ್ಲಿ 22 ಟಿಎಂಸಿ ನೀರು ಮಾತ್ರ ಸಂಗ್ರಹವಿದೆ. ಮಲೆನಾಡಿನಲ್ಲಿ ಹೆಚ್ಚಿನ ಮಳೆಯಾಗಿದ್ದರಿಂದ ತುಂಗಭದ್ರಾ ಜಲಾಶಯವೂ ಭರ್ತಿ ಹಂತಕ್ಕೆ ಬಂದಿದೆ. ಜೂನ್ ಅಂತ್ಯಗೊಂಡರೂ ತುಂಗಭದ್ರಾ ಜಲಾಶಯಕ್ಕೆ ಹೆಚ್ಚಿನ ನೀರು ಬಾರದೇ ಆತಂಕದ ವಾತಾವರಣವಿತ್ತು. ಒಂದು ತಿಂಗಳಲ್ಲಿ ಉತ್ತಮ ಮಳೆಯಾಗಿದ್ದರಿಂದ ಈಗಲೂ ಜಲಾಶಯಕ್ಕೆ 12 ಸಾವಿರ ಕ್ಯುಸೆಕ್ ನೀರು ಹರಿದು ಬರುತ್ತಿದೆ. ಜಲಾಶಯದಿಂದ ಹೊರ ಹರಿವು ಏರಿಸಲಾಗಿದ್ದು, 8654 ಕ್ಯುಸೆಕ್ ನೀರು ಹೊರ ಹೋಗುತ್ತಿದೆ. ಜಲಾಶಯದಲ್ಲಿ 1630 ಅಡಿ ನೀರು ಸಂಗ್ರಹವಿದ್ದು, 94 ಟಿಎಂಸಿ ನೀರು ಲಭ್ಯವಿದೆ. ಶೇ 89ರಷ್ಟು ಜಲಾಶಯ ಭರ್ತಿಯಾಗಿದೆ. ಕಳೆದ ವರ್ಷ ಇದೇ ದಿನ 74 ಟಿಎಂಸಿ ನೀರು ಸಂಗ್ರಹವಿತ್ತು. ಇಲ್ಲಿ 1633 ಅಡಿ ನೀರು ಸಂಗ್ರಹಿಸಲು ಅವಕಾಶವಿದ್ದು, 105.79 ಟಿಎಂಸಿ ನೀರು ಸಂಗ್ರಹಿಸುವ ಸಾಮರ್ಥ್ಯವಿದೆ.



ಬೆಂಗಳೂರಿನ ವಿಧಾನಸೌಧ ಪಶ್ಚಿಮ ದ್ವಾರದಲ್ಲಿ ಬುಧವಾರ ರಾಜ್ಯ ಬಿಜೆಪಿ ಅಧ್ಯಕ್ಷ ಬಿ.ವೈ. ವಿಜಯೇಂದ್ರ ಮತ್ತು ವಿರೋಧ ಪಕ್ಷದ ನಾಯಕ ಆರ್. ಅಶೋಕ ನೇತೃತ್ವದಲ್ಲಿ ಬಿಜೆಪಿ ಶಾಸಕರು ಸಚಿವ ಬಿ. ನಾಗೇಂದ್ರ ಅವರ ರಾಜೀನಾಮೆಗೆ ಒತ್ತಾಯಿಸಿ ಪ್ರತಿಭಟನೆ ನಡೆಸಿದರು.

## ಶೃಂಗೇರಿ ಮರು ಮತಎಣಿಕೆ ಪ್ರಕರಣ ಕಾಂಗ್ರೆಸ್ ಶಾಸಕ ರಾಜೇಗೌಡಗೆ ಮತ್ತೆ ನಿರಾಳ

**ಶೃಂಗೇರಿ, ಆ.19:** ಶೃಂಗೇರಿ ಶಾಸಕರನ್ನಾಗಿ ಕಾಂಗ್ರೆಸ್ನ ಟಿ.ಡಿ.ರಾಜೇಗೌಡ ಅವರನ್ನು ಮರುಸ್ಥಾಪಿಸಿದ್ದ ಮಧ್ಯಂತರ ಆದೇಶವನ್ನು ಸುಪ್ರೀಂ ಕೋರ್ಟ್ ಮತ್ತೆ ಮುಂದುವರಿಸಿದೆ. ಪ್ರಕರಣದ ವಿಚಾರಣೆಯನ್ನು ಸೆಪ್ಟೆಂಬರ್ 10ಕ್ಕೆ ಮುಂದೂಡಿದೆ. ರಾಜೇಗೌಡ ಸಲ್ಲಿಸಿದ ಮೇಲ್ಮನವಿಯ ವಿಚಾರಣೆ ನಡೆಸಿದ ನ್ಯಾಯಾಲಯವು ಪ್ರಕರಣದ ವಿಚಾರಣೆಯನ್ನು ಮುಂದೂಡಿತು. ಇದೇ ವೇಳೆ ಹೆಚ್ಚುವರಿ ದಾಖಲೆ ಸಲ್ಲಿಕೆಗೆ ಬಿಜೆಪಿ ಅಭ್ಯರ್ಥಿ ಡಿ.ಎನ್. ಜೀವರಾಜ್‌ಗೆ ಅವಕಾಶ ನೀಡಿದೆ. ಮುಂದಿನ ವಿಚಾರಣೆವರೆಗೂ ಮಧ್ಯಂತರ ಆದೇಶ ಮುಂದುವರಿಯಲಿದೆ ಎಂದು ನ್ಯಾಯಾಲಯ ತಿಳಿಸಿದೆ.



ಶಾಸಕರಾಗಿ ಟಿ.ಡಿ. ರಾಜೇಗೌಡ ಮುಂದುವರಿಯಲಿದ್ದಾರೆ. 2023ರ ವಿಧಾನಸಭಾ ಚುನಾವಣೆಯಲ್ಲಿ ರಾಜೇಗೌಡ ಅವರು ಬಿಜೆಪಿಯ ಡಿ.ಎನ್. ಜೀವರಾಜ್ ಅವರನ್ನು 201 ಮತಗಳಿಂದ ಸೋಲಿಸಿದ್ದರು. 1,811 ಅಂಚೆ ಮತಗಳು ಚಲಾವಣೆಯಾಗಿದ್ದವು. ಜೀವರಾಜ್ ಅವರು ಹೈಕೋರ್ಟ್‌ಗೆ ಚುನಾವಣಾ ತಕರಾರು ಅರ್ಜಿ ಸಲ್ಲಿಸಿ, '1951ರ ಜನತಾ ಪ್ರಾತಿನಿಧ್ಯ ಕಾಯ್ದೆ ಮತ್ತು ಭಾರತ ಚುನಾವಣಾ ಆಯೋಗ ಹೊರಡಿಸಿದ ಚುನಾವಣಾ ಅಧಿಕಾರಿಯ ಕೈಪಿಡಿಯ ನಿಬಂಧನೆಗಳ ಪ್ರಕಾರ, ಪ್ರತಿವಾದಿ ವಿಜೇತ ಅಭ್ಯರ್ಥಿಯು ಚುನಾವಣೆಯಲ್ಲಿ ಎಸಗಿರುವ ದುಷ್ಕೃತ್ಯಗಳು, ಅಪರಾಧಗಳು, ಅನೈತಿಕ ಕೃತ್ಯಗಳು ಮತ್ತು ಲೋಪಗಳ ಆರೋಪಗಳನ್ನು ಪರಿಗಣಿಸಬೇಕು. ಕ್ಷೇತ್ರದಲ್ಲಿ ಚಲಾವಣೆಯಾದ ಮತಗಳನ್ನು ಕಾನೂನಿನ ಪ್ರಕಾರ ಮರು ಎಣಿಕೆ ಮಾಡಲು ಆದೇಶಿಸಿಫಲಿತಾಂಶಗಳನ್ನು ಹೊಸದಾಗಿ ಘೋಷಿಸಲು ಆದೇಶಿಸಬೇಕು' ಎಂದು ಕೋರಿದ್ದರು.

ಅಂಚೆ ಮತಗಳ ಮರು ಎಣಿಕೆಗೆ ಹೈಕೋರ್ಟ್ ಆದೇಶಿಸಿತ್ತು.ಇತ್ತೀಚೆಗೆ ಅಂಚೆ ಮತಗಳ ಮರು ಮತ ಎಣಿಕೆ ನಡೆಸಲಾಗಿತ್ತು. 2023ರಲ್ಲಿ ಸಿಂಧುವಾಗಿದ್ದ 1,540 ಮತಗಳಲ್ಲಿ 255 ಮತಗಳು ಮರು ಎಣಿಕೆ ವೇಳೆ ಅಸಿಂಧುವಾಗಿದ್ದರಿಂದ ರಾಜೇಗೌಡ ಅವರ ಶಾಸಕ ಸ್ಥಾನಕ್ಕೆ ಕುತ್ತು ಉಂಟಾಗಿತ್ತು. 52 ಮತಗಳ ಮುನ್ನಡೆ ಸಾಧಿಸಿದ್ದ ಜೀವರಾಜ್ ಅವರನ್ನು ಚುನಾಯಿತ ಎಂದು ಘೋಷಿಸಲಾಗಿತ್ತು.

## ಎಸ್‌ಐಆರ್: ಕಲಬುರಗಿಯಲ್ಲೇ ಹೆಚ್ಚು ಡಿಲೀಟ್! ಗುಳೆ ಬಂದ ಜನರ ಹೆಸರನ್ನು ಸೇರ್ಪಡೆ ಮಾಡಿರುವುದು ಪ್ರಮುಖ ಕಾರಣ



**ಕಲಬುರಗಿ, ಆ. 19 :** ಚುನಾವಣೆ ಆಯೋಗದಿಂದ ರಾಜ್ಯದಲ್ಲಿ ನಡೆದ ಎಸ್‌ಐಆರ್‌ನಲ್ಲಿ ರಾಜಧಾನಿ ಬೆಂಗಳೂರು ಜಿಲ್ಲೆಗಳನ್ನು ಹೊರತು ಪಡಿಸಿದರೆ, ಕಲಬುರಗಿಯಲ್ಲೇ ಅತಿ ಹೆಚ್ಚು (5.21 ಲಕ್ಷ) ಮತದಾರರ ಹೆಸರು ಮಿಸ್ ಆಗಿರುವುದು ಕಂಡು ಬಂದಿದೆ.

ಜು.30ರಿಂದ ಆ.17ರ ವರೆಗೆ ರಾಜ್ಯದಲ್ಲಿ ಎಸ್‌ಐಆರ್ ಪ್ರಕ್ರಿಯೆ ಪೂರ್ಣಗೊಂಡಿದ್ದು, ಇಡೀ ರಾಜ್ಯದಲ್ಲಿ ಶೇ.19.48ರಷ್ಟು ಮತಗಳು ತಪ್ಪಿಹೋಗಿರುವುದು ಕಂಡುಬಂದಿದೆ. ಇದರಲ್ಲಿ ಬೆಂಗಳೂರಿನ ಪಾಲು ಅತ್ಯಧಿಕವಾಗಿದೆ. ಇದರ ಜತೆಗೆ ಕಲಬುರಗಿಯಲ್ಲೂ ಕೂಡ ಶೇ.22.01 ರಷ್ಟು ಮತಗಳು ಪತ್ತೆಯಾಗಿಲ್ಲ.

ಸ್ಥಳಾಂತರದ್ದೆ ಸಿಂಹಪಾಲು: ಎಎಸ್‌ಡಿಡಿಬಿ ಮತಗಳಲ್ಲಿ ಸಿಂಹಪಾಲು ಸ್ಥಳಾಂತರ ಹೊಂದಿರುವ ಮತದಾರರ ಪಾಲು ಕಂಡು ಬರುತ್ತಿದೆ. ಜಿಲ್ಲೆಯಲ್ಲಿ 3.48 ಲಕ್ಷ ಮತದಾರರು ಸ್ಥಳಾಂತರ ಗೊಂಡಿದ್ದರೆ, ಮೈಸೂರಿನಲ್ಲಿ2.47 ಲಕ್ಷ ಮತದಾರರು ಸ್ಥಳಾಂತರ ಗೊಂಡಿದ್ದಾರೆ. ಬೆಳಗಾವಿಯಲ್ಲಿ2.83 ಲಕ್ಷ ಮತದಾರರು ಸ್ಥಳಾಂತರ ಗೊಂಡಿದ್ದಾರೆ. ರಾಜ್ಯದ ಎಲ್ಲಜಿಲ್ಲೆಗಳಲ್ಲಿ 65.61 ಲಕ್ಷ ಮತದಾರರು ಸ್ಥಳಾಂತರ ಗೊಂಡಿದ್ದಾರೆ.

ಇಷ್ಟೊಂದು ಜನರು ಸ್ಥಳಾಂತರ ಗೊಳ್ಳಲು ಕಾರಣ ಏನು ಎಂಬ ಕುರಿತು ಇದೀಗ ಚುನಾವಣೆ ಆಯೋಗದ ಅಧಿಕಾರಿಗಳು ತಲೆ ಕೆಡಿಸಿಕೊಳ್ಳುತ್ತಿದ್ದಾರೆ. 20 ವರ್ಷಗಳಲ್ಲಿ ಮತದಾರರ ಪಟ್ಟಿಯಲ್ಲಿ ಹೆಸರು ನೋಂದಣಿ ಮಾಡುವಲ್ಲಿ ಅಧಿಕಾರಿಗಳು ಮಾಡಿರುವ ಎಡವಟ್ಟು ಇದೀಗ ದೊಡ್ಡ ತಲೆನೋವಾಗಿ ಪರಿಣಮಿಸಿದೆ.

## ತೋರಣಗಲ್ಲು ಸಮುದಾಯ ಆರೋಗ್ಯ ಕೇಂದ್ರ ಡಿಎಚ್‌ಓ ಡಾ.ಅಲಕಾನಂದ ಮಳಗಿ ದಿಢೀರ್ ಭೇಟಿ: ವೈದ್ಯರು, ಸಿಬ್ಬಂದಿಗೆ ಖಡಕ್ ಸೂಚನೆ

**ಬಳ್ಳಾರಿ,ಆ.19.**ಸಂಡೂರು ತಾಲೂಕಿನ ತೋರಣಗಲ್ಲು ಸಮುದಾಯ ಆರೋಗ್ಯ ಕೇಂದ್ರಕ್ಕೆ ಜಿಲ್ಲಾ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಅಧಿಕಾರಿ ಡಾ.ಅಲಕಾನಂದ ಡಿ. ಮಳಗಿ ಅವರು ಮಂಗಳವಾರ ಭೇಟಿ ನೀಡಿ, ಆಸ್ಪತ್ರೆಯ ವೈದ್ಯಕೀಯ ಸೇವೆಗಳು ಹಾಗೂ ಸಾರ್ವಜನಿಕರಿಗೆ ಸಿಗುತ್ತಿರುವ ಚಿಕಿತ್ಸಾ ಸೌಲಭ್ಯಗಳ ಪರಿಶೀಲನೆ ನಡೆಸಿದರು.



ಆಸ್ಪತ್ರೆಯ ಆಡಳಿತ ವೈದ್ಯಾಧಿಕಾರಿಗಳೊಂದಿಗೆ ಸುದೀರ್ಘ ಚರ್ಚೆ ನಡೆಸಿದ ಅವರು, ಸಾರ್ವಜನಿಕರಿಗೆ ಗುಣಮಟ್ಟದ ಆರೋಗ್ಯ ಸೇವೆ ಒದಗಿಸುವ ನಿಟ್ಟಿನಲ್ಲಿ ಸಿಬ್ಬಂದಿಗೆ ಹಲವು ಪ್ರಮುಖ ನಿರ್ದೇಶನಗಳನ್ನು ನೀಡಿದರು.

ಎಲ್ಲ ವೈದ್ಯಾಧಿಕಾರಿಗಳು ಹಾಗೂ ಸಿಬ್ಬಂದಿ ನಿಗದಿತ ಸಮಯಕ್ಕೆ ಸಮವಸ್ತ್ರ ಧರಿಸಿ ಕರ್ತವ್ಯಕ್ಕೆ ಹಾಜರಾಗಬೇಕು. ಆಸ್ಪತ್ರೆಗೆ ಬರುವ ರೋಗಿಗಳು ಮತ್ತು ಸಾರ್ವಜನಿಕರೊಂದಿಗೆ ಸೌಜನ್ಯದಿಂದ ವರ್ತಿಸಬೇಕು ಎಂದು ತಿಳಿಸಿದರು.

ತಾಯಿ-ಮಕ್ಕಳ ಆರೋಗ್ಯ ಕಾರ್ಯಕ್ರಮದಡಿ ಅಗತ್ಯ ಔಷಧಗಳು, ಲಸಿಕೆಗಳು ಹಾಗೂ ವಿಶೇಷವಾಗಿ ನಾಯಿ ಕಡಿತ ಮತ್ತು ಹಾವು ಕಡಿತಕ್ಕೆ ನೀಡುವ ಜೀವರಕ್ಷಕ ಔಷಧಗಳನ್ನು ಆಸ್ಪತ್ರೆಯಲ್ಲಿ ಸದಾ ದಾಸ್ತಾನು ಇರಿಸಿಕೊಳ್ಳಬೇಕು. ಕ್ಷಯರೋಗ, ಕುಷ್ಠರೋಗ, ಡೆಂಗ್ಯೂ, ಚಿಕೂನ್‌ಗುನ್ಯಾ, ಮೆದುಳು ಜ್ವರದಂತಹ ಸಾಂಕ್ರಾಮಿಕ ರೋಗಗಳು ಹಾಗೂ ಅಸಾಂಕ್ರಾಮಿಕ ರೋಗಗಳ ತಡೆಗೆ ಕ್ಷೇತ್ರ ಸಿಬ್ಬಂದಿ ಮೂಲಕ ನಿರಂತರ ಜಾಗೃತಿ ಮೂಡಿಸಬೇಕು ಎಂದು ಸೂಚಿಸಿದರು.

ಮಳೆಗಾಲ ಹಿನ್ನೆಲೆಯಲ್ಲಿ ಮನೆ ಸುತ್ತಮುತ್ತ ನೀರು ನಿಲ್ಲದಂತೆ ಸ್ವಚ್ಛತೆ ಕಾಪಾಡಿಕೊಳ್ಳಲು ಹಾಗೂ ಸೊಳ್ಳೆಗಳ ಉತ್ಪತ್ತಿ ತಡೆಯಲು ಗ್ರಾಮ ಮಟ್ಟದಲ್ಲಿ ವ್ಯಾಪಕ ಜಾಗೃತಿ ಕಾರ್ಯಕ್ರಮಗಳನ್ನು ಹಮ್ಮಿಕೊಳ್ಳಬೇಕು ಎಂದರು.

ಇದೇ ವೇಳೆ ಹೆರಿಗೆ ಕೊಠಡಿಗೆ ಭೇಟಿ ನೀಡಿ ಪರಿಶೀಲಿಸಿದ ಅವರು, ಪ್ರತಿಯೊಂದು ನವಜಾತ ಮಗುವಿಗೆ ಸಮಯಕ್ಕೆ ಸರಿಯಾಗಿ ಲಸಿಕೆ ನೀಡಬೇಕು ಮತ್ತು ಬಾಣಂತಿಯರಿಗೆ ಕಬ್ಬಿಣಾಂಶ (ಐರನ್) ಹಾಗೂ ಕ್ಯಾಲ್ಸಿಯಂ ಮಾತ್ರೆಗಳನ್ನು ಕಡ್ಡಾಯವಾಗಿ ವಿತರಿಸಬೇಕು ಎಂದರು.

ಇದೇ ವೇಳೆ ಆಸ್ಪತ್ರೆಯ ವಿವಿಧ ವಾರ್ಡ್‌ಗಳು, ಔಷಧ ಕೊಠಡಿ, ಪ್ರಯೋಗಾಲಯ (ಲ್ಯಾಬ್) ಹಾಗೂ ಪ್ರಮುಖ ದಾಖಲೆಗಳನ್ನು ಪರಿಶೀಲಿಸಿದ ಅವರು, ಸಾರ್ವಜನಿಕರಿಗೆ ಕುಡಿಯುವ ನೀರು ಸೇರಿದಂತೆ ಅಗತ್ಯ ಮೂಲಭೂತ ಸೌಕರ್ಯಗಳನ್ನು ಕಲ್ಪಿಸುವಂತೆ ತಾಲೂಕು ಆರೋಗ್ಯ ಅಧಿಕಾರಿಗಳಿಗೆ ಸೂಚಿಸಿದರು.

## ದಸರಾದಲ್ಲಿ ಕಂಬಳ ಉತ್ಸವಕ್ಕೆ ಸಿದ್ಧತೆ ಅಕ್ಟೋಬರ್ 18-19ರಂದು ಕ್ರೀಡೆ

**ಮೈಸೂರು, ಆ.19:** ವಿಶ್ವ ವಿಖ್ಯಾತ ಮೈಸೂರು ದಸರಾ ಮಹೋತ್ಸವ-2026 ದಸರಾದಲ್ಲಿ ವೈಭವ ಕಂಬಳ ಉತ್ಸವಕ್ಕೆ ಸಿದ್ಧತೆ ನಡೆಯುತ್ತಿದೆ. ಅಕ್ಟೋಬರ್ 18 ಮತ್ತು 19ರಂದು ಕಂಬಳ ಕ್ರೀಡೆ ನಡೆಯಲಿದೆ. ಕಂಬಳ ಕ್ರೀಡೆಗೆ 130 ಜೋಡಿ ಕೋಣಗಳು ನೋಂದಣಿಯಾಗಿದೆ. ಮೈಸೂರಿನ ಸಾತಗಳ್ಳಿ ರಿಂಗ್ ರಸ್ತೆ ಸಮೀಪ ವಿಟಿಯು ಹತ್ತಿರದ ಜಾಗದಲ್ಲಿ ಸಿದ್ಧತೆ ನಡೆಯುತ್ತಿದೆ. ಕೋಣಗಳ ಓಟದ ಗದ್ದೆ ಹದಗೊಳಿಸುವ ಕೆಲಸ ಆರಂಭವಾಗಿದೆ. ಕೋಣಗಳ ಓಟಕ್ಕಾಗಿ ಟ್ರ್ಯಾಕ್ ನಿರ್ಮಾಣ ಕಾರ್ಯ ನಡೆಯುತ್ತಿದೆ.

ವಿರೋಧದ ನಡುವೆಯೂ ಕ್ರೀಡಾ ಇಲಾಖೆ ಟ್ರ್ಯಾಕ್ ನಿರ್ಮಾಣ ಮಾಡುತ್ತಿದೆ. ಈ ಹಿಂದೆ 40ಕ್ಕೂ ಹೆಚ್ಚು ಮರಗಳನ್ನ ಕ್ರೀಡಾ ಇಲಾಖೆ ಕಡಿದಿದೆ.ಕಂಬಳದ ವಿರುದ್ಧ ರೈತ ಸಂಘಟನೆಗಳು, ಪರಿಸವರದಿಗಳು ಪ್ರತಿಭಟಿಸಿದೆ. ಇದೀಗ ಕಂಬಳದ ಟ್ರ್ಯಾಕ್ ನಿರ್ಮಾಣದ ಕಾರ್ಯ ಆರಂಭವಾಗಿದೆ. ಯಶಸ್ವಿ ಆಯೋಜನೆಗಾಗಿ ವಿವಿಧ ಕಂಬಳ ಸಮಿತಿಗಳ ಸಭೆ ನಡೆಸಿ ರೂಪುರೇಷೆ ಸಿದ್ಧತೆ ನಡೆಯುತ್ತಿದೆ.

## ಬಳ್ಳಾರಿ: ಆದಾಯ ತೆರಿಗೆ ಇಲಾಖೆಯ ತನಿಖಾ ವಿಭಾಗದ ಕಚೇರಿ ಉದ್ಘಾಟನೆ

### ತೆರಿಗೆದಾರರಿಗೆ ಗೌರವ ನೀಡಿ, ಸಮಾಲೋಚಿಸಿ: ಭರತ್

**ಬಳ್ಳಾರಿ,ಆ.19.**ಉದ್ಯೋಗ ಸೃಷ್ಟಿಸಿ, ದೇಶದ ಮೂಲಸೌಕರ್ಯ ನಿರ್ಮಾಣಕ್ಕೆ ಕೊಡುಗೆ ನೀಡುವ ತೆರಿಗೆದಾರರನ್ನು ಗೌರವಯುತವಾಗಿ ಕಾಣುವುದು ಇಲಾಖೆಯ ಕರ್ತವ್ಯ. ಕಚೇರಿಗೆ ಬರುವ ತೆರಿಗೆದಾರರನ್ನು ಸೂಕ್ತ ಸೌಲಭ್ಯ, ಗೌರವ ನೀಡಿ ಸತ್ಕರಿಸಿ ವಹಿವಾಟುಗಳ ಕುರಿತು ಸಮಾಲೋಚಿಸಬೇಕು ಎಂದು ಹುಬ್ಬಳ್ಳಿ ವಿಭಾಗದ ಆದಾಯ ತೆರಿಗೆ (ತನಿಖೆ) ಇಲಾಖೆಯ ಜಂಟಿ ನಿರ್ದೇಶಕ ಭರತ್.ಆರ್ ಅವರು ಹೇಳಿದರು.




ಚಿತ್ರದುರ್ಗದಿಂದ ಬೀದರ್ ವರೆಗಿನ 12-13 ಜಿಲ್ಲೆಗಳ ಪೈಕಿ ಬಳ್ಳಾರಿಯು ಗರಿಷ್ಠ ಜಿಎಸ್‌ಟಿ ನೋಂದಣಿ ಹಾಗೂ ಅತಿ ಹೆಚ್ಚು ಬ್ಯಾಂಕಿಂಗ್ ವಹಿವಾಟು ಹೊಂದಿರುವ ಪ್ರಮುಖ ವಾಣಿಜ್ಯ ಕೇಂದ್ರವಾಗಿದೆ. ಇಲಾಖೆಯು ತೆರಿಗೆ ವ್ಯಾಪ್ತಿಯನ್ನು ವಿಸ್ತರಿಸಲು ನಡೆಸಿದ ಆಪರೇಷನ್ ನಡ್ಜ್ ಅಡಿಯಲ್ಲಿ ಬಳ್ಳಾರಿಯಲ್ಲೇ ಸುಮಾರು 40 ಜೆಡಿಎ ರಿಯಲ್ ಎಸ್ಟೇಟ್ ಯೋಜನೆಗಳನ್ನು ಗುರುತಿಸಲಾಗಿದೆ ಎಂದು ತಿಳಿಸಿದರು.

ಬಳ್ಳಾರಿ ವ್ಯಾಪ್ತಿಯೊಂದರಲ್ಲೇ ತೆರಿಗೆ ವಂಚನೆಗೆ ಸಂಬಂಧಿಸಿದಂತೆ 200ಕ್ಕೂ ಹೆಚ್ಚು ಅರ್ಜಿಗಳು/ದೂರುಗಳು ಬಂದಿದ್ದು, ಇತ್ತೀಚೆಗೆ 40 ಕಡತಗಳನ್ನು ವಿಲೇವಾರಿ ಮಾಡಲಾಗಿದೆ. ಮುಂದಿನ ದಿನಗಳಲ್ಲಿ ಬ್ಯಾಂಕ್ ವಹಿವಾಟುಗಳ ಆಳವಾದ ತನಿಖೆ ಹಾಗೂ ಅಗತ್ಯವಿದ್ದಲ್ಲಿ ಸರ್ವೆ/ದಾಳಿ ಕಾರ್ಯಾಚರಣೆಗಳು ಮುಂದುವರಿಯಲಿವೆ. ಸ್ಥಳೀಯ ಆರ್ಥಿಕ ಸ್ಥಿತಿಗತಿ ಹಾಗೂ ತೆರಿಗೆ ಸಂಗ್ರಹ ವೃದ್ಧಿಗಾಗಿ ಸಿಎ ಮತ್ತು ವೃತ್ತಿಪರರೊಂದಿಗೆ ನಿಯಮಿತವಾಗಿ ಸಂವಾದ ನಡೆಸಲು ಇಲಾಖೆ ನಿರ್ಧರಿಸಿದೆ ಎಂದು ತಿಳಿಸಿದರು.

ಬಳ್ಳಾರಿಯ ಆದಾಯ ತೆರಿಗೆ ಇಲಾಖೆಯ ಸಹಾಯಕ ನಿರ್ದೇಶಕ(ತನಿಖೆ) ಎ.ಪಿ. ವಿಜಯ್ ಚಂದ್ರ ಅವರು ಮಾತನಾಡಿ, 15 ರಿಂದ 20 ವರ್ಷಗಳ ಕಾಲ ಹಳೆಯ ಕಟ್ಟಡದಲ್ಲಿ ಕಾರ್ಯನಿರ್ವಹಿಸುತ್ತಿದ್ದ ಕಚೇರಿಯು ಇದೀಗ ಸುಸಜ್ಜಿತ ನೂತನ ಕಟ್ಟಡಕ್ಕೆ ಸ್ಥಳಾಂತರಗೊಂಡಿದ್ದು, ನೂತನ ಹಾಗೂ ಸುಸಜ್ಜಿತ ಕಚೇರಿ ಕಾರ್ಯಾರಂಭಗೊಂಡಿರುವುದು ಸಿಬ್ಬಂದಿಯಲ್ಲಿ ಹೊಸ ಉತ್ಸಾಹ ಮೂಡಿಸಿದೆ. ಅಧಿಕಾರಿಗಳ ಮಾರ್ಗದರ್ಶನದಲ್ಲಿ ಸಾರ್ವಜನಿಕರಿಗೆ ಮತ್ತಷ್ಟು ಉತ್ತಮ ಸೇವೆ ಒದಗಿಸಲು ಬದ್ಧತೆ ಹೊಂದಲಾಗುವುದು ಎಂದು ಹೇಳಿದರು.

ಒಂದು ತಿಂಗಳ ಹಿಂದೆ ಬಳ್ಳಾರಿ ಕಚೇರಿಗೆ ಭೇಟಿ ನೀಡಿದ್ದ ಹಿರಿಯ ಅಧಿಕಾರಿಗಳು, ಹಳೆಯ ಕಟ್ಟಡದ ಸ್ಥಿತಿ ಗಮನಿಸಿ ತಕ್ಷಣವೇ ನೂತನ ಕಟ್ಟಡಕ್ಕೆ ಬದಲಾಯಿಸಲು ಸೂಚನೆ ನೀಡಿದ್ದರು. ನೂತನ ಕಚೇರಿಗೆ ಅಗತ್ಯವಿರುವ ಪೀಠೋಪಕರಣ ಹಾಗೂ ಮೂಲಸೌಕರ್ಯಗಳಿಗಾಗಿ ಪಿಡಿಐಟಿ ಮಟ್ಟದಲ್ಲಿ ನಿರಂತರ ಸಂಪರ್ಕ ಸಾಧಿಸಿ, ತ್ವರಿತವಾಗಿ ಅನುದಾನ ಒದಗಿಸುವಲ್ಲಿ ಇಲಾಖಾ ಮುಖ್ಯಸ್ಥರು ಮಹತ್ವದ ಪಾತ್ರ ವಹಿಸಿದ್ದಾರೆ ಎಂದು ಹರ್ಷ ವ್ಯಕ್ತಪಡಿಸಿದರು.

## ಯಶಸ್ಸಿಗೆ ನೈತಿಕ ಮೌಲ್ಯಾಧಾರಿತ ವೃತ್ತಿಪರತೆ ಆಧಾರ: ನ್ಯಾ.ಸಿ.ಎಂ.ಜೋಶಿ

**ಕಲಬುರಗಿ, ಆ. 19:** ಪಠ್ಯ ಜ್ಞಾನ ಜತೆ ಪ್ರಾಯೋಗಿಕ ಅರಿವು, ಸಮಗ್ರ ತಯಾರಿ ಮತ್ತು ಜವಾಬ್ದಾರಿಯುತ ವಕಾಲತ್ತು ಅತ್ಯಂತ ಅಗತ್ಯ. ನ್ಯಾಯಾಲಯಗಳಲ್ಲಿ ಅನಗತ್ಯ ವಾಗ್ವಾದಗಳಿಗೆ ಬದಲು ವಿಷಯದ ಆಳ ಅಧ್ಯಯನ, ಸಂಶೋಧನೆ ಮತ್ತು ನೈತಿಕ ಮೌಲ್ಯಾಧಾರಿತ ವೃತ್ತಿಪರತೆಯೇ ಕಾನೂನು ಯಶಸ್ಸಿನ ಪ್ರಮುಖ ಆಧಾರ ಎಂದು ಹೈಕೋರ್ಟ್ ವಿಶ್ರಾಂತ ನ್ಯಾಯಮೂರ್ತಿ ಸಿ.ಎಂ. ಜೋಶಿ ಹೇಳಿದರು.

ಕರ್ನಾಟಕ ಕೇಂದ್ರೀಯ ವಿಶ್ವವಿದ್ಯಾಲಯದ (ಸಿಯುಕೆ)ಲ್ಲಿ ಕಾನೂನು ವಿಭಾಗದಿಂದ ಕಾನೂನು ವೃತ್ತಿಯ ಪ್ರಾಯೋಗಿಕ ಆಯಾಮ, ನ್ಯಾಯಾಲಯದ ಶಿಷ್ಟಾಚಾರ, ವೃತ್ತಿಪರ ನೀತಿಶಾಸ, ಕಾನೂನು ಸಂಶೋಧನೆ ಮತ್ತು ನ್ಯಾಯಾಂಗ ವ್ಯವಸ್ಥೆಯಲ್ಲಿ ಕೃತಕ ಬುದ್ಧಿಮತ್ತೆ (ಎಐ) ಪಾತ್ರ ಕುರಿತು ಬುಧವಾರ ಏರ್ಪಡಿಸಿದ್ದ ಸಂವಾದ ಕಾರ್ಯಕ್ರಮದಲ್ಲಿ ಅವರು ಮಾತನಾಡಿದರು.



ಕಾನೂನು ಪದವಿ ಪೂರ್ಣಗೊಳಿಸಿದರೂ ಅಧ್ಯಯನ ಮುಗಿಯುವುದಿಲ್ಲ. ಅಲ್ಲಿಂದಲೇ ನಿಜವಾದ ವೃತ್ತಿಜೀವನ ಆರಂಭವಾಗುತ್ತದೆ. ನಿರಂತರ ಅಧ್ಯಯನ ಮತ್ತು ಜೀವನಪರ್ಯಂತ ಕಲಿಕೆ ಮನೋಭಾವ ಬೆಳೆಸಿಕೊಳ್ಳಬೇಕು. ಕೃತಕ ಬುದ್ಧಿಮತ್ತೆ ಆಧಾರಿತ ಕಾನೂನು ಸಹಾಯಕ ಸಾಧನಗಳ ಅತಿಯಾದ ಮತ್ತು ವಿಮರ್ಶಾತ್ಮಕವಲ್ಲದ ಬಳಕೆ ಬಗ್ಗೆ ಎಚ್ಚರಿಕೆ ನೀಡಿದರು.ತಮ್ಮ ಶೈಕ್ಷಣಿಕ ಪಯಣ, ವಕೀಲ ಮತ್ತು ನ್ಯಾಯಾಧೀಶರಾಗಿ ಪಡೆದ ಅನುಭವ, ವೃತ್ತಿಜೀವನದಲ್ಲಿ ಎದುರಿಸಿದ ಸವಾಲು, ಯಶಸ್ಸಿನ ಹಿಂದಿರುವ ಕಠಿಣ ಪರಿಶ್ರಮ, ಶಿಸ್ತು ಮತ್ತು ಪ್ರಾಯೋಗಿಕ ಅನುಭವದ ಮಹತ್ವವನ್ನು ವಿದ್ಯಾರ್ಥಿಗಳೊಂದಿಗೆ ಹಂಚಿಕೊಂಡರು.

## ಜನಮನ ಆಕರ್ಷಿಸುತ್ತಿದೆ ಗುಂಡಲಬಂಡಾ ಜಲಪಾತ



**ರಾಯಚೂರು, ಆ. 19:** ಜಿಲ್ಲೆಯ ಲಿಂಗಸುಗೂರು ತಾಲ್ಲೂಕಿನ ಗೋಲಪಲ್ಲಿಯಲ್ಲಿ ಮಳೆಗಾಲ ಆರಂಭವಾಗುತ್ತಲೇ ಗುಂಡಲಬಂಡಾ ಜಲಪಾತ ಮೈತಳೆದು ನಿಲ್ಲುತ್ತದೆ. ಈ ವರ್ಷದ ಮಳೆ ಕೊರತೆ ನಡುವೆಯೂ ಮೈದುಂಬಿ ಹರಿಯುತ್ತಿದೆ. ಈ ಮೂಲಕ ಪ್ರವಾಸಿಗರನ್ನು ಆಕರ್ಷಿಸುತ್ತಿದೆ. ಮಹಾರಾಷ್ಟ್ರದಲ್ಲಿ ಕಳೆದ ತಿಂಗಳು ಉತ್ತಮ ಮಳೆಯಾದ ಹಿನ್ನೆಲೆಯಲ್ಲಿ ಕೃಷ್ಣಾ ನದಿಗೆ ನೀರು ಹರಿದು ಬರುತ್ತಿದೆ. ಹೀಗಾಗಿ ನಾರಾಯಣಪುರ ಜಲಾಶಯದಿಂದ ಬಲದಂಡೆ ನಾಲೆಗೆ ನೀರು ಹರಿಸಿರುವುದರಿಂದ ಜಲಪಾತಕ್ಕೆ ಜೀವಕಳೆ ಬಂದಿದೆ. ಕಲ್ಲುಬಂಡೆಗಳ ನಡುವೆ ಹಾಲಿನ ನೊರೆಯಂತೆ ಧುಮ್ಮಿಕ್ಕುತ್ತಿರುವ ಜಲಧಾರೆಯನ್ನು ಪ್ರವಾಸಿಗರು ಕಣ್ತುಂಬಿಕೊಂಡು ಸಂಭ್ರಮಿಸುತ್ತಿದ್ದಾರೆ. ನಾರಾಯಣಪುರ ಜಲಾಶಯದ 7ಬಿ ವಿತರಣಾ ನಾಲೆಯಿಂದ ಹರಿದು ಬರುವ ಹೆಚ್ಚುವರಿ ನೀರು ಕಲ್ಲು ಬಂಡೆಗಳ ನಡುವೆ ಹರಿದು ಜಲಪಾತವಾಗಿದೆ. ನವೆಂಬರ್ 10ರವರೆಗೆ ಅಂದರೆ ನಾರಾಯಣಪುರ ಬಲದಂಡೆ ನಾಲೆಗೆ ನೀರು ಹರಿಸುವವರೆಗೆ ಈ ಜಲಪಾತದ ವೈಭವವನ್ನು ಕಣ್ತುಂಬಿಕೊಳ್ಳ ಬಹುದಾಗಿದೆ.

ಲಿಂಗಸುಗೂರಿನಿಂದ ಕಲಬುರಗಿ ಮಾರ್ಗದಲ್ಲಿ ಗೋಲಪಲ್ಲಿ ಸೇತುವೆಯಿಂದ ಒಂದು ಕಿಮೀ ಕಚ್ಚಾ ರಸ್ತೆಯಲ್ಲಿ ದ್ವಿಚಕ್ರ ವಾಹನದ ಮೂಲಕ ಜಲಪಾತ ಸ್ಥಳಕ್ಕೆ ಹೋಗಬಹುದು. ಜಲಪಾತ ಅರಣ್ಯ ಪ್ರದೇಶದಲ್ಲಿರುವುದರಿಂದ ರಸ್ತೆ ಸಂಪರ್ಕ ಕಲ್ಪಿಸಿಲ್ಲ. ಪ್ರವಾಸೋದ್ಯಮ ಇಲಾಖೆ ಈ ಜಲಪಾತವನ್ನು ಪ್ರವಾಸಿ ತಾಣ ಎಂದು ಗುರುತಿಸಿದೆ. ಆದರೆ, ಅರಣ್ಯ ಇಲಾಖೆ ಅಥವಾ ಪ್ರವಾಸೋದ್ಯಮ ಇಲಾಖೆಯಿಂದ ರಸ್ತೆ, ಜಲಪಾತಕ್ಕೆ ಗ್ಯಾಲರಿ, ವೀಕ್ಷಣಾ ಗೋಪುರ ನಿರ್ಮಾಣ ಮಾಡಿಲ್ಲ. ಇದರಿಂದ ಎರಡೂ ಇಲಾಖೆಗಳಿಗೆ ಪ್ರವಾಸಿಗರು ಹಿಡಿ ಶಾಪ ಹಾಕುತ್ತಿದ್ದಾರೆ. ಕಲ್ಲು ಬಂಡೆ, ಮುಳ್ಳಿನ ಕಂಟಿಗಳ ಮೂಲಕ ತೆರಳಿ ಜಲಪಾತ ನೋಡಲು ಹರಸಾಹಸ ಪಡಬೇಕಾಗಿದೆ. ಅರಣ್ಯ ಇಲಾಖೆಯಿಂದ ಎಚ್ಚರಿಕೆಯ ಫಲಕ ಹಾಕಿದ್ದರೂ ಅರಣ್ಯ ಇಲಾಖೆ ಅಥವಾ ಪ್ರವಾಸೋದ್ಯಮ ಇಲಾಖೆ ಸಿಬ್ಬಂದಿ ಜಲಪಾತ ಸ್ಥಳದಲ್ಲಿ ಇರುವುದಿಲ್ಲ.

ಜಲಪಾತದ ವೈಭವ ಕಣ್ತುಂಬಿಕೊಳ್ಳಲು ಬರುವ ಪ್ರವಾಸಿಗರಿಗೆ ಸುರಕ್ಷತಾ ಕ್ರಮಗಳನ್ನು ಕೈಗೊಳ್ಳಬೇಕಾಗಿದೆ. ರಭಸದಿಂದ ಹರಿಯುವ ನೀರಲ್ಲಿ ಇಳಿಯಲು ಮುಂದಾಗುವ ಪ್ರವಾಸಿಗರು ಸೆಲ್ಫಿ ತೆಗೆದುಕೊಳ್ಳಲು ಕೂಡ ಹಾತೊರೆಯುತ್ತಾರೆ. ಹೀಗಾಗಿ ಈ ಪ್ರದೇಶದ ಸುತ್ತ ತಂತಿ ಬೇಲಿ ಅಳವಡಿಸುವುದು ಅಗತ್ಯವಾಗಿದೆ.

## ಕಲೆಯಿಂದ ಸಮಾಜ ತಿದ್ದಲು ಸಾಧ್ಯ

**ರಾಯಚೂರು, ಆ. 19:** ಕಲೆಯಿಂದ ಮಾತ್ರ ಸಮಾಜ ತಿದ್ದಲು ಸಾಧ್ಯ. ಆಳುವ ವರ್ಗವನ್ನು ಪ್ರಶ್ನಿಸುವ ಧೈರ್ಯ ರಂಗಭೂಮಿಗಿದೆ. ಆ ಮೂಲಕ ಸಮಾಜವನ್ನು ತಿದ್ದುವ ಕೆಲಸ ಕಲಾವಿದರು ಕಲೆಯ ಮೂಲಕ ಮಾಡಬೇಕು ಎಂದು ರಂಗ ನಿರ್ದೇಶಕ ಲಕ್ಷ್ಮಣ ಮಂಡಲಗೇರ ಹೇಳಿದರು.

ಕಲೆ, ಸಾಹಿತ್ಯದ ಮೂಲಕ ಸಮಾಜದಲ್ಲಿ ವೈಚಾರಿಕತೆ ಬಿತ್ತುವ ಕೆಲಸ ಆಗಬೇಕು. ಕಲಾವಿದರು ನಾಟಕದಲ್ಲಿ ಅಭಿನಯಿಸಬೇಕಾದರೆ ತಮ್ಮದಲ್ಲದ ಪಾತ್ರವನ್ನು ತಮ್ಮದಾಗಿಸಿಕೊಂಡು ಅಭಿನಯಿಸಿದಾಗ ಮಾತ್ರ ನಾವು ಜನರನ್ನು ಮುಟ್ಟಲು ಸಾಧ್ಯ ಎಂದು ತಿಳಿಸಿದರು.

ಅಧ್ಯಕ್ಷತೆ ವಹಿಸಿದ್ದ ಸಿರವಾರದ ಉಪನ್ಯಾಸಕ ಪ್ರವೀಣಕುಮಾರ ಮಾತನಾಡಿ, ರಾಯಚೂರು ಜಿಲ್ಲೆಯಲ್ಲಿ ಹಲವಾರು ಸಾಂಸ್ಕೃತಿಕ ಕಲಾ ತಂಡಗಳು ಕ್ರಿಯಾಶೀಲವಾಗಿ ಕಾರ್ಯನಿರ್ವಹಿಸುವ ಮೂಲಕ ಕಲೆ, ಸಾಹಿತ್ಯ, ಸಂಸ್ಕೃತಿಯನ್ನು ಉಳಿಸುವ ಕಾರ್ಯ ಮಾಡುತ್ತಿವೆ ಎಂದು ತಿಳಿಸಿದರು.

ಯುವಕರು ದುಶ್ಚಟಗಳಿಂದ ದೂರ ಉಳಿದು ಸಂಗೀತ, ನೃತ್ಯ, ನಾಟಕ ಕಲೆಯಲ್ಲಿ ತೊಡಗಿಸಿಕೊಳ್ಳಬೇಕು. ನಾಡಿನ ಕಲೆ ಹಾಗೂ ಸಂಸ್ಕೃತಿಯನ್ನು ಉಳಿಸುವ ದಿಸೆಯಲ್ಲಿ ಇಂದಿನ ಯು ವಕರು ಹೆಚ್ಚು ಸಕ್ರಿಯವಾಗಿ ಕಾರ್ಯನಿರ್ವಹಿಸಬೇಕಾದ ಅಗತ್ಯವಿದೆ ಎಂದು ಹೇಳಿದರು.




## ಸಾಹಿತ್ಯ ಕ್ಷೇತ್ರದಲ್ಲಿ ಮಹಿಳೆಯರಿಗೆ ಸಿಗಲಿ ಆದ್ಯತೆ: ಡಾ.ವಿಜಯಲಕ್ಷ್ಮಿ ಬಾಳೆಕುಂದ್ರಿ




**ಬೀದರ್, ಆ. 19:** ಮಹಿಳೆಯರು ಮುಟ್ಟದ ಸಾಹಿತ್ಯಗಳಿಲ್ಲ, ಆದರೆ ಇದುವರೆಗೂ ಒಬ್ಬ ಮಹಿಳೆಗೂ ಜ್ಞಾನಪೀಠ ಪ್ರಶಸ್ತಿ ದೊರೆತಿಲ್ಲ, ನೂರು ವರ್ಷಗಳಲ್ಲಿ ಒಬ್ಬ ಮಹಿಳೆಯೂ ಪ್ರತಿಷ್ಠಿತ ಕನ್ನಡ ಸಾಹಿತ್ಯ ಪರಿಷತ್ ಅಧ್ಯಕ್ಷರೂ ಆಗಿರುವದಿಲ್ಲ. ಇದು ನಾವು ಗಂಭೀರವಾಗಿ ವಿಚಾರ ಮಾಡುವಂಥ ಸಂಗತಿ ಎಂದು ಹಿರಿಯ ಸಾಹಿತಿ ಡಾ.ವಿಜಯಲಕ್ಷ್ಮೀ ಬಾಳೆಕುಂದ್ರಿ ಹೇಳಿದರು.

ಎಲ್ಲಾ ಭಾಷೆಗಳಲ್ಲಿಯೂ ಕನ್ನಡ ಭಾಷೆ ಸುಲಲಿತ, ಸುಂದರ ಭಾಷೆಯಾಗಿದೆ. ಸ್ವತಂತ್ರ ಲಿಪಿ ಹೊಂದಿರುವ ಉತ್ತಮ ಭಾಷೆ ಕನ್ನಡ, ಸುಂದರ ಲಿಪಿಗಳನ್ನು ಹೊಂದಿರುವ ಕನ್ನಡಕ್ಕೆ ಲಿಪಿಗಳ ರಾಣಿಯೆಂದು ಕರೆಯುತ್ತಾರೆ ಎಂದು ಹಿರಿಯ ಸಾಹಿತಿ, ವೈದ್ಯೆ ಡಾ.ವಿಜಯಲಕ್ಷ್ಮಿ ಬಾಳೆಕುಂದ್ರಿ ಹೇಳಿದರು.

ಜಿಲ್ಲೆಯ ಭಾಲ್ಕಿ ಕಾರಂಜಾ ರೈತ ಭವನದಲ್ಲಿ ಜಿಲ್ಲಾ ಹಾಗೂ ತಾಲೂಕು ಕನ್ನಡ ಸಾಹಿತ್ಯ ಪರಿಷತ್ ವತಿಯಿಂದ ಆಯೋಜಿಸಿದ್ದ ಜಿಲ್ಲಾ ಮಟ್ಟದ 3ನೇ ಮಹಿಳಾ ಸಾಹಿತ್ಯ ಸಮ್ಮೇಳನ ಉದ್ಘಾಟಿಸಿ ಮಾತನಾಡಿದ ಅವರು, ಹನ್ನೆರಡನೇ ಶತಮಾನದಿಂದಲೂ ಬಸವಣ್ಣನವರು, ಅಲ್ಲಮಪ್ರಭುಗಳು ಬಿಟ್ಟರೇ ಅತಿ ಹೆಚ್ಚು ವಚನಗಳನ್ನು ರಚಿಸಿದವರು ಅಕ್ಕ ನಾಗಮ್ಮನವರಾಗಿದ್ದಾರೆ. ಅಕ್ಕಮಹಾದೇವಿ ಆತ್ಮೋದ್ಧಾರ ಮಾಡಿಕೊಂಡರೆ, ಅಕ್ಕನಾಗಮ್ಮ ಲೋಕೋದ್ಧಾರ ಮಾಡಿದ್ದಾರೆ. ನಮ್ಮ ಹೆಣ್ಣುಮಕ್ಕಳು ಅಕ್ಕನಾಗಮ್ಮನಂತಾಗಬೇಕು. ಮಹಿಳೆಯರು ತೀವ್ರವಾಗಿ ಬರೆಯುವ ಸಾಹಿತ್ಯಕಾರರಾಗಬೇಕು ಎಂದರು.

